ದಶಮಾನ ಕಂಡ ಜಿಲ್ಲೆಯ ಮೊದಲ ಪ್ರಾದೇಶಿಕ ದಿನ ಪತ್ರಿಕೆ

ದಾವಣಗೆರೆ, ಉಡುಪಿ, ಶಿವಮೊಗ್ಗ, ಹಾಸನ, ಚಿಕ್ಕಮಗಳೂರು, ಗದಗ, ಬೆಂಗಳೂರು ಗ್ರಾಮಾಂತರ

KB 12 YEARS 2013

# ಕನ್ನಡ ಭಾರತಿ

ನೊಂದವರ ನೈಜ ಕನ್ನಡಿ


ಸಂಪಾದಕರು : ಮಲ್ಲಿಕಾರ್ಜುನ್ ಕಬ್ಬೂರು

ಸಂಪುಟ : 13 ಸಂಚಿಕೆ : 116
14–10–2025 ಮಂಗಳವಾರ

₹1 KA/SK/DVG-006/2023-2025 KARKAN/2013/50807 KANNADA BHARATHI REGIONAL DALIY DAVANAGERE dvgkanndabharathi@gmail.com Page : 6 VOLUME : 13 ISSUE : 116

## ಮಾಜಿ ಪ್ರಧಾನಿ ಹೆಚ್.ಡಿ ದೇವೇಗೌಡ ಆರೋಗ್ಯ ಸ್ಥಿರ: ಆಸ್ಪತ್ರೆಯಿಂದ ಬಿಡುಗಡೆ

**ಬೆಂಗಳೂರು:** ಅನಾರೋಗ್ಯ ಹಿನ್ನೆಲೆ ಕಳೆದ ವಾರ ಆಸ್ಪತ್ರೆಗೆ ದಾಖಲಾಗಿದ್ದ ಮಾಜಿ ಪ್ರಧಾನಮಂತ್ರಿ ಹಾಗೂ ಜೆಡಿಎಸ್ ವರಿಷ್ಠ ಹೆಚ್‌ಡಿ ದೇವೇಗೌಡ ಅವರ ಆರೋಗ್ಯ ಇದೀಗ ಸ್ಥಿರವಾಗಿದ್ದು, ಸೋಮವಾರ ಆಸ್ಪತ್ರೆಯಿಂದ ಬಿಡುಗಡೆ–ಯಾಗಿದ್ದಾರೆ.



ಕಳೆದ ಒಂದು ವಾರದಿಂದ ನಗರದ ಮಣಿಪಾಲ್ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದ ದೇವೇಗೌಡ ಅವರು, ವೈದ್ಯರ ಸಲಹೆ ಮೇರೆಗೆ ಆಸ್ಪತ್ರೆಯಿಂದ ಡಿಸ್ಚಾರ್ಜ್ ಆಗಿದ್ದಾರೆ.

ಜ್ವರ ಹಾಗೂ ಯೂರಿನ್ ಇನ್‌ಫೆಕ್ಷನ್‌ನಿಂದಾಗಿ ದೇವೇಗೌಡ ಅವರು, ಅಕ್ಟೋಬರ್ 6ರಂದು ಮಣಿಪಾಲ ಆಸ್ಪತ್ರೆಗೆ ದಾಖಲಾಗಿದ್ದರು. ಇದೀಗ ಆರೋಗ್ಯದಲ್ಲಿ ಚೇತರಿಕೆ ಕಂಡು ಬಂದಿದ್ದು, ವೈದ್ಯರ ಸಲಹೆಯಂತೆ ಮುಂದಿನ ಕೆಲವು ದಿನಗಳು ಮನೆಯಲ್ಲಿ ವಿಶ್ರಾಂತಿ ಪಡೆಯಲಿದ್ದಾರೆ.

ದೇವೇಗಡ ಅವರಿಗೆ ಆಸ್ಪತ್ರೆಯಲ್ಲಿ ತಜ್ಞ ವೈದ್ಯರ ತಂಡ ಚಿಕಿತ್ಸೆ ನೀಡಿದ್ದು, ಇದೀಗ ಅವರ ಆರೋಗ್ಯ ಸ್ಥಿರವಗಿದೆ. ಆಸ್ಪತ್ರೆಯಿಂದ ಬಿಡುಗಡೆಯಾಗುತ್ತಿದ್ದಾರೆ ಎಂದು ಮಣಿಪಾಲ ಆಸ್ಪತ್ರೆ ಅಧಿಕಾರಿಗಳು ತಿಳಿಸಿದ್ದಾರೆ.

## ಕಿತ್ತೂರು ಉತ್ಸವದ ಜ್ಯೋತಿಗೆ ಚಾಲನೆ ನೀಡಿದ ಮುಖ್ಯಮಂತ್ರಿ ಸಿದ್ದರಾಮಯ್ಯ




**ಬೆಂಗಳೂರು:** ಐತಿಹಾಸಿಕ ಕಿತ್ತೂರು ಉತ್ಸವದ ಜ್ಯೋತಿಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಇಂದು ಚಾಲನೆ ನೀಡಿ–ದ್ದಾರೆ. ವಿಧಾನಸೌಧದ ಮುಂಭಾಗ ಇಂದು ಆಯೋಜಿಸಿದ್ದ ಸಮಾರಂಭದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಜ್ಯೋತಿ ಬೆಳಗಿಸಿ, ಉತ್ಸವಕ್ಕೆ ಚಾಲನೆ ನೀಡಿದರು. ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ಬೆಳಗಾವಿ ಜಿಲ್ಲಾಡಳಿತದಿಂದ ನಡೆದ ಕಾರ್ಯಕ್ರಮದಲ್ಲಿ ಚೆನ್ನಮ್ಮನ ಕಿತ್ತೂರು ಶಾಸಕ ಬಾಬಾಸಾಹೇಬ್ ಪಾಟೀಲ, ಜಿಲ್ಲಾಧಿಕಾರಿ ಮೊಹಮ್ಮದ್ ರೋಷನ್, ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ರಾಹುಲ್ ಶಿಂಧೆ ಮತ್ತಿತರರು ಉಪಸ್ಥಿತರಿದ್ದರು.

ಬಿಹಾರ ವಿಧಾನಸಭಾ ಚುನಾವಣೆಯ ನಂತರ ರಾಜ್ಯ ರಾಜಕೀಯದಲ್ಲಿ ಮಹತ್ವದ ಬದಲಾವಣೆಯಾಗಲಿದ್ದು, ನಾಯಕತ್ವ ಬದಲಾವಣೆಯಾಗಲಿದೆ ಎಂಬ ಮಾತುಗಳು ಕೇಳಿಬರುತ್ತಿವೆ.

ಕಿತ್ತೂರು ಉತ್ಸವಕ್ಕೆ ಚಾಲನೆ ನೀಡಿದ ಬಳಿಕ ಮಾಧ್ಯಮದವರ ಪ್ರಶ್ನೆಗೆ ಪ್ರತಿಕ್ರಿಯಿಸಿದ ಸಿಎಂ ಸಿದ್ದರಾಮಯ್ಯ, ನಾವು ಆಗಾಗ್ಗೆ ಊಟಕ್ಕೆ ಸೇರುತ್ತೇವೆ. ಊಟಕ್ಕೆ ಸೇರುವುದೇ ದೊಡ್ಡ ಅಪರಾಧವೇ ಎಂದು ಪ್ರಶ್ನಿಸಿದರು.

ನಾವು ಯಾವಾಗಲೂ ಭೇಟಿಯಾಗುತ್ತಲೇ ಇರುತ್ತೇವೆ. ನಮ್ಮ 'ಡಿನ್ನರ್ ಮೀಟಿಂಗ್'ಗೆ ವಿಶೇಷ ಅರ್ಥ ಕಲ್ಪಿಸುವುದನ್ನು ತಳ್ಳಿಹಾಕಿದರು. ಆದರೆ, ರಾಜ್ಯ ಸರ್ಕಾರವು ಎರಡೂವರೆ ವರ್ಷಗಳ ಆಡಳಿತವನ್ನು ಪೂರೈಸುತ್ತಿರುವ ಹೊತ್ತಿನಲ್ಲಿ ಮತ್ತು ನಾಯಕತ್ವ ಬದಲಾವಣೆಯ ಗುಸುಗುಸು ದಟ್ಟವಾಗಿರುವ ಸಂದರ್ಭದಲ್ಲಿ ಈ ಔತಣಕೂಟವನ್ನು ಕರೆದಿದ್ದಾರೆ.

## ಸಿಎಂ ಸಿದ್ದರಾಮಯ್ಯ, ಡಿ.ಕೆ. ಶಿವಕುಮಾರ್‌ಗೆ ಬಾಂಬ್ ಬೆದರಿಕೆ



**ಬೆಂಗಳೂರು:** ಮುಖ್ಯಮಂತ್ರಿ ಸಿದ್ದರಾಮಯ್ಯ ಮತ್ತು ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರ ಮನೆಗಳನ್ನು ಸ್ಫೋಟಿಸುವುದಾಗಿ ಇಮೇಲ್ ಮೂಲಕ ಬೆದರಿಕೆ ಹಾಕಲಾಗಿದೆ. ಕಳೆದ ಶನಿವಾರ ಸ್ವೀಕರಿಸಿದ ಇಮೇಲ್‌ನಲ್ಲಿ ಸಿಎಂ ಮತ್ತು ಡಿಸಿಎಂ ಮನೆಗಳಲ್ಲಿ ನಾಲ್ಕು ಕಿಲೋಗ್ರಾಂಗಳಷ್ಟು ಆರ್‌ಡಿಎಕ್ಸ್ ಇರಿಸಲಾಗಿದೆ ಎಂದು ತಿಳಿಸಲಾಗಿದೆ.

ಬಾಂಬ್ ನಿಷ್ಕ್ರಿಯ ತಂಡ, ಕೂಲಂಕಷವಾಗಿ ಪರಿಶೀಲಿಸಿದ ನಂತರ, ಇದು ಹುಸಿ ಬಾಂಬ್ ಬೆದರಿಕೆ ಎಂದು ತಿಳಿಸಲಾಗಿದೆ. ಪೊಲೀಸರ ಪ್ರಕಾರ, ಶನಿವಾರ ಬೆಳಗಿನ ಜಾವ 4:20 ರ ಸುಮಾರಿಗೆ, ಆರ್ನಾ ಅಶ್ವಿನ್ ಶೇಖರ್ (aarna.ashwinshekher@outlook.com) ಮೇಲ್ ಐಡಿಯಿಂದ ಸಿಎಂ ಸಿದ್ದರಾಮಯ್ಯ ಅವರ ಅಧಿಕೃತ ಇಮೇಲ್ ಐಡಿ (cm.kar@nic.in) ಮತ್ತು ಡಿಸಿಎಂ ಅವರ ವೈಯಕ್ತಿಕ ಇಮೇಲ್ Lrdkshivakumar1@gmail.comಗೆ ಇಮೇಲ್ ಕಳುಹಿಸಿದ್ದಾರೆ.

## ಹಾಸ್ಯ ಚಿತ್ರನಟ ರಾಜು ತಾಳಿಕೋಟೆ ನಿಧನ

**ಬೆಂಗಳೂರು :** ಹಿರಿಯ ರಂಗಭೂಮಿ ಕಲಾವಿದ ಮತ್ತು ಹಾಸ್ಯ ಚಿತ್ರನಟ ರಾಜು ತಾಳಿಕೋಟೆ ಅವರು ಹೃದಯಾಘಾತದಿಂದ ನಿಧನರಾಗಿದ್ದಾರೆ. ವಿಜಯಪುರದ ಸಿಂದಗಿ ತಾಲ್ಲೂಕಿನ ಚಿಕ್ಕಸಿಂದಗಿ ಗ್ರಾಮದ ಮೂಲದ ರಾಜು ತಾಳಿಕೋಟೆ ಅವರು, ಕುಡುಕನ ಪಾತ್ರಗಳ ಮೂಲಕ ಮನೆಮಾತಾಗಿದ್ದರು. ಉಡುಪಿಯಲ್ಲಿ ಸಿನಿಮಾವೊಂದರ ಚಿತ್ರೀಕರಣ ಮುಗಿಸಿ ಕೋಣೆಯಲ್ಲಿ ಮಲಗಿದ್ದಾಗ ಹಾರ್ಟ್ ಅಟ್ಯಾಕ್ ಆಗಿದೆ. ಕೂಡಲೇ ಅವರನ್ನು ಉಡುಪಿಯ ಮಣಿಪಾಲ್ ಆಸ್ಪತ್ರೆಗೆ ಕರೆದೊಯ್ಯಲಾಗಿತ್ತು. ಅವರನ್ನು ಪರೀಕ್ಷಿಸಿದ ವೈದ್ಯರು ಮೃತಪಟ್ಟಿರುವುದಾಗಿ ಘೋಷಿಸಿದರು.




ವೃತ್ತಿ ರಂಗಭೂಮಿ ಮೂಲಕ ಸಿನಿಮಾ ರಂಗಕ್ಕೆ ರಾಜು ತಾಳಿಕೋಟೆ ಎಂಟ್ರಿ ಕೊಟ್ಟಿದ್ದರು. ರಾಜು ತಾಳಿಕೋಟೆ ಅವರು ಮನಸಾರೆ, ಪಂಚರಂಗಿ, ಮತ್ತೊಂದು ಮದುವೆನಾ, ಮೈನಾ ಸಿನಿಮಾಗಳಲ್ಲಿ ನಟಿಸಿದ್ದಾರೆ. ಉತ್ತರ ಕರ್ನಾಟಕದ ರಂಗಭೂಮಿಯಲ್ಲಿ 'ಖಾಸ್ಗತೇಶ್ವರ' ನಾಟಕ ಮಂಡಳಿಯ ಮಾಲೀಕರಾಗಿ, ಕುಡುಕನ ಪಾತ್ರಗಳ ಮೂಲಕ ಮನೆಮಾತಾಗಿದ್ದರು. ಅವರ ನಿಧನದ ಸುದ್ದಿ ತಿಳಿದು ಚಿತ್ರರಂಗದ ಗಣ್ಯರು ಮತ್ತು ಅಭಿಮಾನಿಗಳು ಸಾಮಾಜಿಕ ಜಾಲತಾಣಗಳಲ್ಲಿ ಸಂತಾಪ ಸೂಚಿಸುತ್ತಿದ್ದಾರೆ.

## ನಾನು ಸಿಎಂ ಆಗಿದ್ರೆ ಗ್ಯಾರಂಟಿಗಳನ್ನು ಜಾರಿಗೆ ತರುತ್ತಿರಲಿಲ್ಲ ಎಂದ ಆರ್.ವಿ. ದೇಶಪಾಂಡೆ; ಸ್ಪಷ್ಟನೆ ಕೋರಿದ ಸಿದ್ದರಾಮಯ್ಯ

**ಕಾರವಾರ:** ನಾನು ಮುಖ್ಯಮಂತ್ರಿ ಆಗಿದ್ದರೆ ರಾಜ್ಯ ಸರ್ಕಾರದ ಐದು ಖಾತರಿಗಳನ್ನು ಜಾರಿಗೆ ತರುತ್ತಿರಲಿಲ್ಲ ಎಂದು ಕಾಂಗ್ರೆಸ್‌ನ ಹಿರಿಯ ಶಾಸಕ ಮತ್ತು ಮಾಜಿ ಸಚಿವ ಆರ್.ವಿ. ದೇಶಪಾಂಡೆ ಭಾನುವಾರ ಹೇಳಿದ್ದು, ಇದೀಗ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಸ್ಪಷ್ಟನೆ ಕೇಳಿದ್ದಾರೆ ಎನ್ನಲಾಗಿದೆ.

ಉತ್ತರ ಕನ್ನಡ ಜಿಲ್ಲೆಯ ದಾಂಡೇಲಿ ತಾಲೂಕಿನ ಅಂಬೇವಾಡಿ ನವಗ್ರಾಮದಲ್ಲಿ ನಡೆದ ಕಾರ್ಯಕ್ರಮವೊಂದರಲ್ಲಿ ಮಾತನಾಡಿದ ಅವರು, ರಾಜ್ಯ ಸರ್ಕಾರದ ಐದು ಗ್ಯಾರಂಟಿ ಯೋಜನೆಗಳ ಬಗ್ಗೆ ಕಳವಳ ವ್ಯಕ್ತಪಡಿಸಿದರು. ಸರ್ಕಾರಿ ಬಸ್‌ಗಳು ಈಗ ಮಹಿಳೆಯರಿಗೆ ಮಾತ್ರ ಸೀಮಿತವಾಗಿದ್ದು, ಪುರುಷರಿಗೆ ಜಾಗವಿಲ್ಲದಂತಾಗಿದೆ ಎಂದಿದ್ದಾರೆ.

'ಸಿದ್ದರಾಮಯ್ಯ ಸರ್ಕಾರ ಐದು ಗ್ಯಾರಂಟಿ ಯೋಜನೆಗಳನ್ನು ನೀಡಿತು. ಮಹಿಳೆಯರಿಗೆ ಪ್ರತಿ ತಿಂಗಳು 2,000 ರೂ. ನೀಡಲಾಗುತ್ತಿದ್ದು, ಇದು ಅವರಿಗೆ ಲಾಟರಿ ಹೊಡೆದಂತಾಗಿದೆ. ಪುರುಷರ ಪರಿಸ್ಥಿತಿ ಇನ್ನಷ್ಟು ಹದಗೆಟ್ಟಿದೆ. ಪುರುಷರು ಹೆಚ್ಚು ಮಾತನಾಡಿದರೆ, ಅವರಿಗೆ ಶಿಕ್ಷೆಯಾಗುತ್ತದೆ.



ಸಿದ್ದರಾಮಯ್ಯನವರಿಗೆ ಯಾರು ಸಲಹೆ ನೀಡಿ–ದ್ದಾರೋ ದೇವರೇ ಬಲ್ಲ. ನಾನು ಮುಖ್ಯಮಂತ್ರಿಯಾಗಿದ್ದರೆ, ಗ್ಯಾರಂಟಿ ಯೋಜನೆಗಳನ್ನು ಜಾರಿಗೆ ತರುತ್ತಿರಲಿಲ್ಲ' ಎಂದು ಹೇಳಿದರು.

ಮಹಿಳೆಯರಿಗೆ ಐಷಾರಾಮಿಯಲ್ಲದ ರಾಜ್ಯ ಬಸ್‌ಗಳಲ್ಲಿ ಉಚಿತ ಬಸ್ ಪ್ರಯಾಣ ಒದಗಿಸುವ ಶಕ್ತಿ ಯೋಜನೆ ಕುರಿತು ಮಾತನಾಡಿದ ಅವರು, 'ಬಸ್‌ಗಳು, ಓ ದೇವರೇ! ಧಾರವಾಡ, ಬೆಳಗಾವಿ, ಕಲಬುರಗಿ ಮತ್ತು ಯೆಲ್ಲಮ್ಮ ದೇವಸ್ಥಾನಕ್ಕೆ ಮಹಿಳೆಯರು ಹೊರಟಿದ್ದಾರೆ. ಈ ಎಲ್ಲ ಸ್ಥಳಗಳಲ್ಲಿ ಮಹಿಳೆಯರು ಇದ್ದಾರೆ. ಪುರುಷರು ತಪ್ಪಾಗಿ ಬಸ್ ಹತ್ತಿದರೆ, ಅವರು ಪರದಾಡುವಂತಾಗುತ್ತದೆ. ಇವು ಮಹಿಳೆಯರ ಬಸ್‌ಗಳು ಎನ್ನುವಂತಾಗಿದೆ. ಇವು ಸಿದ್ದರಾಮಯ್ಯ ಅವರ ಕಾರ್ಯಕ್ರಮಗಳು' ಎಂದು ತಮ್ಮದೇ ಪಕ್ಷದ ವಿರುದ್ಧ ಆರ್‌ವಿ ದೇಶಪಾಂಡೆ ಅಸಮಾಧಾನ ಹೊರಹಾಕಿದ್ದಾರೆ.

ಉಚಿತ ಅಕ್ಕಿ ನೀಡುವ ಅನ್ನಭಾಗ್ಯ ಯೋಜನೆಯ ಬಗ್ಗೆಯೂ ಮಾತನಾಡಿದ ಅವರು, 'ಪ್ರತಿ ವ್ಯಕ್ತಿಗೆ ತಿಂಗಳಿಗೆ ಐದು ಕೆಜಿಯಿಂದ 10 ಕೆಜಿಗೆ ಉಚಿತವಾಗಿ ನೀಡಲಾಗುವ ಅಕ್ಕಿಯನ್ನು ಹೆಚ್ಚಿಸಲಾಗಿದೆ. ಮಹಿಳೆಯರು ಅವುಗಳನ್ನು ತೆಗೆದುಕೊಂಡು ಆನಂದಿಸಲಿ' ಎಂದು ಹೇಳಿದರು.

'ಮುಖ್ಯಮಂತ್ರಿಗಳು ಇಂದಿರಾ ಕಿಟ್ ಅನ್ನು ವಿತರಿಸಲು ಯೋಜಿಸಿದ್ದಾರೆ. ಇದರಲ್ಲಿ ತೊಗರಿ ಬೇಳೆ, ಒಣ ತೆಂಗಿನಕಾಯಿ ಮತ್ತು ಅಡುಗೆ ಎಣ್ಣೆ ಸೇರಿವೆ. ಅವರು ಇನ್ನೇನು ನೀಡಲಿದ್ದಾರೆಂದು ನಮಗೂ ತಿಳಿದಿಲ್ಲ. ಸಿದ್ದರಾಮಯ್ಯ ಏನು ಮ್ಯಾಜಿಕ್ ಮಾಡುತ್ತಿದ್ದಾರೆಂದು ನನಗೆ ತಿಳಿದಿಲ್ಲ. ನನಗೆ ಅರ್ಥವಾಗುತ್ತಿಲ್ಲ' ಎಂದು ಅವರು ಹೇಳಿದರು.

ಸ್ಪಷ್ಟನೆ ಕೋರಿದ ಸಿಎಂ ಸಿದ್ದರಾಮಯ್ಯ

ಕಾಂಗ್ರೆಸ್ ಸರ್ಕಾರದ ಗ್ಯಾರಂಟಿ ಯೋಜನೆಗಳ ಬಗ್ಗೆ ಬಹಿರಂಗವಾಗಿಯೇ ಹೇಳಿಕೆ ನೀಡಿರುವ ಆರ್‌ವಿ ದೇಶಪಾಂಡೆ ಅವರಿಗೆ ಕರೆ ಮಾಡಿರುವ ಸಿಎಂ ಸಿದ್ದರಾಮಯ್ಯ ಅವರು, ತಮ್ಮ ಹೇಳಿಕೆಗೆ ಸಂಬಂಧಿಸಿದಂತೆ ಸ್ಪಷ್ಟನೆ ನೀಡುವಂತೆ ಸೂಚಿಸಿದ್ದಾರೆ. ಬೆಂಗಳೂರಿಗೆ ಬಂದ ಬಳಿಕ ಸ್ಪಷ್ಟನೆ ನೀಡುವುದಾಗಿ ಸಿಎಂಗೆ ದೇಶಪಾಂಡೆ ಸೂಚಿಸಿರುವುದಾಗಿ ವರದಿಯಾಗಿದೆ.

ಅವರು ಸಿಎಂ ಆದಾಗ ಗ್ಯಾರಂಟಿ ನಿಲ್ಲಿಸಲಿ: ಜಿ ಪರಮೇಶ್ವರ

ಆರ್‌ವಿ ದೇಶಪಾಂಡೆ ಹೇಳಿಕೆ ವಿಚಾರವಾಗಿ ಮಾತನಾಡಿದ ಗೃಹ ಸಚಿವ ಪರಮೇಶ್ವರ, ಅವರು ಸಿಎಂ ಆದಾಗ ಬೇಕಿದ್ರೆ ಗ್ಯಾರಂಟಿ ನಿಲ್ಲಿಸಲಿ. ಅಭಿವೃದ್ಧಿ ಕುಂಠಿತವಾಗಿರುವುದು ಎಲ್ಲಿ? ಅಭಿವೃದ್ಧಿ ಕಾಮಗಾರಿಗೆ ಸಿಎಂ ಚಾಲನೆ ನೀಡುತ್ತಿದ್ದಾರೆ. ನಮ್ಮ ಜಿಲ್ಲೆಗೆ ಸಿಎಂ ಮೂರು ಬಾರಿ ಭೇಟಿ ನೀಡಿ–ದ್ದಾರೆ. ಇವರು ಹೇಳಿದ್ರೆ ಮಾತ್ರ ಅಭಿವೃದ್ಧಿ ಕುಂಠಿತ ಆಗಲ್ಲ. ಅವರ ಅಭಿಪ್ರಾಯ ಹೇಳಿದ್ದಾರೆ.

### 70 ನೇ ಕರ್ನಾಟಕ ರಾಜ್ಯೋತ್ಸವ ಆಚರಣೆ ಪೂರ್ವಭಾವಿ ಸಭೆ

## ನಾಡಿನ ಕಲೆ, ಸಂಸ್ಕೃತಿ ಬಿಂಬಿಸುವ ನಾಡ ಉತ್ಸವ ಅದ್ದೂರಿ ಆಚರಣೆ ಜಿಲ್ಲಾ ಕ್ರೀಡಾಂಗಣದಲ್ಲಿ ಜಿಲ್ಲಾ ಉಸ್ತುವಾರಿ ಸಚಿವರಿಂದ ರಾಷ್ಟ್ರಧ್ವಜಾರೋಹಣ

**ದಾವಣಗೆರೆ :** 70 ನೇ ಕರ್ನಾಟಕ ರಾಜ್ಯೋತ್ಸವವನ್ನು ನವೆಂಬರ್ 1 ರಂದು ರಾಜ್ಯಾದ್ಯಂತ ಆಚರಣೆ ಮಾಡಲಾಗುತ್ತಿದ್ದು ಜಿಲ್ಲಾಡಳಿತದಿಂದ ನವೆಂಬರ್ 1 ರಂದು ಬೆಳಗ್ಗೆ 10 ಗಂಟೆಗೆ ಜಿಲ್ಲಾ ಕ್ರೀಡಾಂಗಣದಲ್ಲಿ ಏರ್ಪಡಿಸಿರುವ ಕಾರ್ಯಕ್ರಮದಲ್ಲಿ ಗಣಿ ಮತ್ತು ಭೂ ವಿಜ್ಞಾನ, ತೋಟಗಾರಿಕೆ ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಎಸ್.ಎಸ್. ಮಲ್ಲಿಕಾರ್ಜುನ್ ರಾಷ್ಟ್ರಧ್ವಜಾರೋಹಣ ನೆರವೇರಿಸುವರು ಎಂದು ಅಪರ ಜಿಲ್ಲಾಧಿಕಾರಿ ಶೀಲವಂತ ಶಿವಕುಮಾರ್ ತಿಳಿಸಿದರು.

ಅವರು ಸೋಮವಾರ ಜಿಲ್ಲಾಡಳಿತ ಭವನದ ತುಂಗಭದ್ರಾ ಸಭಾಂಗಣದಲ್ಲಿ ಏರ್ಪಡಿಸಲಾದ ರಾಜ್ಯೋತ್ಸವ ಪೂರ್ವಭಾವಿ ಸಭೆಯಲ್ಲಿ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ನವಂಬರ್ 1 ರಂದು ಬೆಳಗ್ಗೆ 8 ಗಂಟೆಗೆ ಹೈಸ್ಕೂಲ್ ಮೈದಾನದ ಬಳಿಯಿಂದ ಕನ್ನಡಾಂಬೆ ಭುವನೇಶ್ವರಿ ಭಾವಚಿತ್ರದೊಂದಿಗೆ ಜಾನಪದ ಕಲಾತಂಡಗಳು ಸೇರಿದಂತೆ ವಿವಿಧ ಕಲಾ



ಪ್ರಕಾರಗಳೊಂದಿಗೆ ಮೆರವಣಿಗೆಯು ಜಿಲ್ಲಾ ಕ್ರೀಡಾಂಗಣದ ವರೆಗೆ ಸಾಗಲಿದೆ.

ಜಿಲ್ಲಾ ಕ್ರೀಡಾಂಗಣದಲ್ಲಿ ಬೆಳಗ್ಗೆ 10 ಗಂಟೆಗೆ ರಾಷ್ಟ್ರಧ್ವಜರೋಹಣ ನಡೆಯಲಿದೆ. ವಿವಿಧ ತುಕಡಿಗಳಿಂದ ಆಕರ್ಷಕ ಪಥಸಂಚಲನ ನಡೆಯಲಿದ್ದು ನಂತರ ಶಾಲಾ ವಿದ್ಯಾರ್ಥಿಗಳಿಂದ ನಾಡಿನ ಕಲೆ, ಸಂಸ್ಕೃತಿಯನ್ನು ಬಿಂಬಿಸುವ ನೃತ್ಯರೂಪಕಗಳು ಪ್ರದರ್ಶನಗೊಳ್ಳಲಿದೆ. ಜಿಲ್ಲಾ ಆಡಳಿತದಿಂದ ಜಿಲ್ಲೆಯಲ್ಲಿ ವಿವಿಧ ಕ್ಷೇತ್ರಗಳಲ್ಲಿ ಸಾಧನೆ ಮಾಡಿದ ಸಾಧಕರನ್ನು ಗುರುತಿಸಿ ರಾಜ್ಯೋತ್ಸವ ಸನ್ಮಾನ ಮಾಡಲಾಗುತ್ತದೆ. ಇದಕ್ಕೆ ಕನ್ನಡಪರ ಸಂಘಟನೆಗಳ ಪದಾಧಿಕಾರಿಗಳು ತಮ್ಮ ಅಭಿಪ್ರಾಯಗಳನ್ನು ವ್ಯಕ್ತಪಡಿಸಿ ಅತ್ಯಂತ ಪಾರದರ್ಶಕವಾಗಿ ಸಾಧಕರನ್ನು ಗುರುತಿಸಿ ಗೌರವಯುತವಾಗಿ ಸನ್ಮಾನಿಸುವ ಕೆಲಸವಾಗಬೇಕೆಂದರು.

ಸಂಜೆಯ ಕಾರ್ಯಕ್ರಮದಲ್ಲಿ ಭಾಗವಹಿಸುವ ಮಕ್ಕಳ ಪೋಷಕರು ಮಾತ್ರ ಆಗಮಿಸಲಿದ್ದು ಸಾರ್ವಜನಿಕರೂ ಬರುವಂತಾಗಬೇಕು. ಮತ್ತು ಮೆರವಣಿಗೆ ಸೇರಿದಂತೆ ಜಿಲ್ಲಾ ಕ್ರೀಡಾಂಗಣದಲ್ಲಿ ನಡೆಯುವ ಕಾರ್ಯಕ್ರಮವನ್ನು ಅಚ್ಚುಕಟ್ಟಾಗಿ ನೆರವೇರಿಸಲು ಸಂಬಂಧಿಸಿದ ಇಲಾಖೆ ಅಧಿಕಾರಿಗಳು ಈಗಿನಿಂದಲೇ ಸಿದ್ಧತೆ ಮಾಡಿಕೊಳ್ಳುವಂತೆ ಸೂಚನೆ ನೀಡಿದರು.

ಸಭೆಯಲ್ಲಿ ಭಾಗವಹಿಸಿದ ವಿವಿಧ ಕನ್ನಡಪರ ಸಂಘಟನೆಗಳ ಪದಾಧಿಕಾರಿಗಳು ಭಾಗವಹಿಸಿ ತಮ್ಮ ಅನಿಸಿಕೆ, ಸಲಹೆಗಳನ್ನು ನೀಡಿದರು.

ಸಭೆಯಲ್ಲಿ ಕನ್ನಡ ಅಭಿವೃದ್ಧಿ ಪ್ರಾಧಿಕಾರದ ಸದಸ್ಯರು ಹಾಗೂ ನಿ.ಪ್ರೊ; ಎ.ವಿ.ರಾಮಚಂದ್ರಪ್ಪ, ಪಾಲಿಕೆ ಆಯುಕ್ತೆ ರೇಣುಕಾ, ಜಿಲ್ಲಾ ಪಂಚಾಯತ್ ಮುಖ್ಯ ಲೆಕ್ಕಾಧಿಕಾರಿ ಗಿರೀಶ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕರ ರವಿಚಂದ್ರ, ಕ.ಸಾ.ಪ ಅಧ್ಯಕ್ಷ ವಾಮದೇವಪ್ಪ, ವಿವಿಧ ಕನ್ನಡಪರ ಸಂಘಟನೆಗಳ ಪದಾಧಿಕಾರಿಗಳು, ಜಿಲ್ಲಾ ಮಟ್ಟದ ಅಧಿಕಾರಿಗಳು ಉಪಸ್ಥಿತರಿದ್ದರು.

## ಮಾತೃಭಾಷೆ ಹಾಗೂ ಸಾಹಿತ್ಯದ ಬಗ್ಗೆ ಎಲ್ಲರಲ್ಲೂ ಒಲವು ಮತ್ತು ಚಿಂತನೆಗಳನ್ನು ಬಿತ್ತುವ ಕೆಲಸ ಪ್ರಸ್ತುತ ಅವಶ್ಯ : ಚನ್ನಮಲ್ಲಿಕಾರ್ಜುನ ಶಿವಾಚಾರ್ಯ ಶ್ರೀ



**ಹೊನ್ನಾಳಿ:** ಮಾತೃಭಾಷೆ ಹಾಗೂ ಸಾಹಿತ್ಯದ ಬಗ್ಗೆ ಎಲ್ಲರಲ್ಲೂ ಒಲವು ಮತ್ತು ಚಿಂತನೆಗಳನ್ನು ಬಿತ್ತುವ ಕೆಲಸ ಪ್ರಸ್ತುತ ಅವಶ್ಯವಾಗಿ ಆಗಬೇಕಿದೆ ಹಿರೇಕಲ್ಮಠದ ಡಾ.ಒಡೆಯರ್ ಚನ್ನಮಲ್ಲಿಕಾರ್ಜುನ ಶಿವಾಚಾರ್ಯ ಸ್ವಾಮಿಜಿ ತಮ್ಮ ಅಭಿಮತ ವ್ಯಕ್ತಪಡಿಸಿದರು.

ಭಾನುವಾರ ಸಂಜೆ ಶಿವಮೊಗ್ಗದ ಭಾರತಾಂಭೆ ಭಾವಸುಧೆ ಸಂಸ್ಥೆ, ಶ್ರೀ ಚನ್ನಪ್ಪಸ್ವಾಮಿ ಜನಸೇವಾ ಟ್ರಸ್ಟ್ ವತಿಯಿಂದ ರಾಷ್ಟ್ರೀಯ ಮಟ್ಟದ ಸಾಂಸ್ಕೃತಿಕ ಸಮ್ಮೇಳನ,ಸಾಧಕರಿಗೆ ಪ್ರಶಸ್ತಿ ಪ್ರಧಾನ ಹಾಗೂ ಪುಸ್ತಕ ಬಿಡುಗಡೆ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಇತ್ತೀಚಿಗೆ ಮೊಬೈಲ್,ಟಿ.ವಿ.ಮಾಧ್ಯಮ ಮತ್ತು ಸಾಮಾಜಿಕ ಜಾಲತಾಣಗಳ ಹಾವಳಿಯಿಂದ ನಮ್ಮ ಮಾತೃಭಾಷೆ,ಸಂಸ್ಕಾರ ಹಾಗೂ ಸನ್ಮಾರ್ಗದ ಪರಿಚಯವೇ ಇಲ್ಲದ ಹಾಗೆ ಯುವಕರು ವರ್ತಿಸುತ್ತಿದ್ದಾರೆ ಎಂದು ಬೇಸರ ವ್ಯಕ್ತಪಡಿಸಿದರು.

ಆಧುನಿಕತೆಯನ್ನು ಮೈಗೂಡಿಸಿಕೊಂಡಿರುವ ಪಾಲಕರು ಸಹ ಮಾತೃಭಾಷೆಯ ವ್ಯಾಮೋಹವನ್ನು ಬಿಟ್ಟು ಅನ್ಯ ಭಾಷೆಯ ಬಗ್ಗೆ ಮೋಗ ವ್ಯಕ್ತಪಡಿಸುತ್ತಿರುವುದು ಮುಂದಿನ ದಿನಗಳಲ್ಲಿ ನಮ್ಮ ಜೀವನ ಪದ್ದತಿಗಳ ಮೇಲೂ ವ್ಯೆತಿರಿಕ್ತ ಪರಿಣಾಮ ಬೀರುವ ಸಾಧ್ಯತೆಗಳಿರುವುದರಿಂದ ಈಗಲೇ ಪಾಲಕರು, ಕನ್ನಡಪರ ಹಿತೈಷಿಗಳು ಸಾಹಿತಿಗಳು ಈ ಬಗ್ಗೆ ಸಮಗ್ರವಾಗಿ ಚಿಂತಿಸಿ ಎಲ್ಲರಲ್ಲೂ ಮಾತೃಭಾಷೆ ಬಗ್ಗೆ ಗೌರವ ಮೂಡುವ ರೀತಿಯಲ್ಲಿ ಗಂಭೀರವಾಗಿ ಕಾರ್ಯೋನ್ಮುಖರಗಬೇಕಾಗಿದೆ ಎಂದು ಕರೆ ನೀಡಿದರು.

ಸಾಹಿತಿ ಭವ್ಯ ಸುಧಾಕರ್ ಅವರು ಸ್ಥಾಪಿಸಿರುವ ಸಂಸ್ಥೆಯೇ ಹೆಸರೇ ಭಾರತಾಂಭೆ ಭಾವಸುಧೆ ಎಂದು ಹೆಸರಿಟ್ಟು ಸಮಾಜಮುಖಿ ಕೆಲಸ ಮಾಡುತ್ತಿದ್ದಾರೆ ಅವರ ಜೊತೆ ನಾವೆಲ್ಲರೂ ಕೂಡ ಕೈಜೋಡಿಸಿ ಅವರಿಗೆ ಸಹಕಾರ ನೀಡಿದರೆ ಅವರು ಮತ್ತಷ್ಟು ಮುಂದಕ್ಕೆ ಹೋಗಿ ಸಮಾಜದ ಕೆಲಸ ಮಾಡುತ್ತಾರೆ ಎಂದರು.

ಮದ್ರಾಸ್ ವಿಶ್ವವಿದ್ಯಾನಿಲಯದ ಪ್ರಾಧ್ಯಾಪಕಿ ಡಾ.ಸೆಲ್ವಿ ಮಾತನಾಡಿ, 12 ಶತಮಾನದಿಂದ ಇಂದಿನವರೆವಿಗೂ ವಚನಗಳು ಪ್ರತಿಯೊಬ್ಬ ವ್ಯಕ್ತಿಗೂ ಸಂಸ್ಕಾರ ಹಾಗೂ ಭದ್ರತೆಯನ್ನು ನೀಡಿದೆ.ಹಾಗಾಗಿ ಇಂದಿಗೂ ವಚನಗಳು ಪ್ರತಿಯೊಬ್ಬರ ಮನಸ್ಸಿನಲ್ಲೂ ಹಾಸುಹೊಕ್ಕಾಗಿದೆ,ಪ್ರತಿಯೊಂದು ವಚನದಲ್ಲೂ ಭಾವಸುಧೆ ಹರಿಯುವುರಿಂದ ಎಲ್ಲಾ ಸಾಹಿತ್ಯಾಸಕ್ತರಿಗೂ ಸುಲಭವಾಗಿ ಅರ್ಥವಾಗುವಂತೆ ಇದೆ ಎಂದರು.

ಸಮ್ಮೇಳನದ ಸರ್ವಾಧ್ಯಕ್ಷ ಕವಿ ಜಯಪ್ಪಹೊನ್ನಾಳಿ ಮಾತನಾಡಿ, ವೇದನೆ ಇಲ್ಲದೆ ಸಾಧನೆ ಖಂಡಿತಾ ಸಾಧ್ಯವಿಲ್ಲ, ಒಂದು ಸುಂದರವಾದ ಕಾರ್ಯಕ್ರಮ ನಡೆಯಬೇಕಾದರೆ ಅದಕ್ಕೂ ಹಿಂದಿನ ಬಹು ದಿನಗಳು ಶ್ರಮಪಟ್ಟರೆ ಮಾತ್ರ ಇಂತಹ ಕಾರ್ಯಕ್ರಮಗಳು ಯಶಸ್ವಿಯಾಗಲು ಸಾಧ್ಯ ಎಂದು ತಮ್ಮ ಅನಿಸಿಕೆ ವ್ಯಕ್ತಪಡಿಸಿದರು. ಇಂತಹ ಭಾಷ ಸಾಹಿತ್ಯ ಸಂಬಂಧ ಕಾರ್ಯಕ್ರಮಗಳಿಗೆ ಆಗಮಿಸುವವರ ಸಂಕ್ಯೆ ಕಡಿಮೆಯಾಗಬಹುದು ಆದರೆ ಆ ಕಾರ್ಯಕ್ರಮದಲ್ಲಿ ಇದ್ದ ಭಾಷಾಭಿಮಾನಿಗಳು ಸಾಹಿತಿಗಳ ಭಾಷಣವನ್ನು ಅನುಸರಿದರೆ ಸಾಕು ಭಾಷಾಭಿಮಾನ ಬೆಳೆಯುತ್ತದೆ,ಆದರೆ ಸಾಹಿತಿಗಳ ಮಾತನ್ನು ಆಲಿಸುವವರ ಪ್ರಾಮಾಣಿಕರ ಸಂಖ್ಯೆ ಹೆಚ್ಚಾಗಬೇಕಷ್ಟೆ ಎಂದರು.

ಭಾರತಾಂಭೆ ಭಾವಸುಧೆ ಸಂಸ್ಥೆಯ ಸಂಸ್ಥಾಪಕಿ ಭವ್ಯ ಸುಧಾಕರ್ ಜಗಮನೆ ಪ್ರಾಸ್ತಾವಿಕವಾಗಿ ಮಾತನಡಿದರು.ವಚನಕಾರರಾದ ಗಂಗಾಧರಪ್ಪ ಹಾಗೂ ಎಂಪಿಎಂ ಕೊಟ್ರಯ್ಯ ಮಾತನಡಿದರು.

ತಮಿಳುನಾಡಿನ, ಪ್ರಾಧ್ಯಾಪಕರಾದ ಡಾ.ತಮಿಳ್ ಸೆಲ್ವಿ, ವಿಶೇಷ ಅತಿಥಿಗಳಾಗಿ ಬೆಣ್ಣೂರು ಕೃಷಿ ಸಹಕಾರಿ ಸಂಘದ ನಿರ್ದೇಶಕ ಲೋಕೇಶ್.ಎನ್,ಈ, ಆಧುನಿಕ ವಚನಕಾರರಾದ ಕೊಟ್ರಯ್ಯ, ಎಂಪಿಎಂ,ಗಂಗಾಧರಪ್ಪ, ಹಾಚಿ ಇಟ್ಟಿಗಿ ಹಾಗೂ ಶೋಭಾ ಇವರನ್ನು ಸನ್ಮಾನಿಸಿದರು.

## ರೈತರು ಕೃಷಿ ಚಟುವಟಿಕೆಗಳಲ್ಲಿ ಸಾವಯವ ಪದ್ಧತಿ ಅಳವಡಿಸಿಕೊಳ್ಳಲು ಮಹಿಮ ಜೆ. ಪಟೇಲ್ ಕರೆ

**ಚನ್ನಗಿರಿ:** ರೈತರು ಕೃಷಿ ಚಟುವಟಿಕೆಗಳಲ್ಲಿ ಸಾವಯವ ಪದ್ದತಿಗಳನ್ನು ಅಳವಡಿಸಿಕೊಂಡು ತಾವು ಬೆಳೆದಂತಹ ಅಹಾರ ಪದಾರ್ಥಗಳನ್ನು ನಾವೇ ಬಳಕೆ ಮಾಡಬೇಕು ಇಲ್ಲವಾದಲ್ಲಿ ಮುಂದಿನ ದಿನಗಳಲ್ಲಿ ಬಾರಿ ಸಂಕಷ್ಟ ಅನುಭವಿಸಬೇಕಾಗುತ್ತದೆ ಎಂದು ಮಾಜಿ ಶಾಸಕ ಮಹಿಮ ಜೆ.ಪಟೇಲ್ ಹೇಳಿದರು.

ಸೋಮವಾರ ಪಾಂಡೋಮಟ್ಟಿ ವಿರಕ್ತ ಮಠದಲ್ಲಿ ತಾಲೂಕು ಕೃಷಿಕ ಸಮಾಜ ಮತ್ತು ಪಾಂಡೋಮಟ್ಟಿ ವಿರಕ್ತ ಮಠದ ಸಂಯುಕ್ತಾಶ್ರಯದಲ್ಲಿ ಹಮ್ಮಿಕೊಳ್ಳಲಾಗಿದ್ದ ಕೃಷಿ ವಿಚಾರ ಸಂಕಿರಣ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿ ರಾಜ್ಯದಾದ್ಯಂತ ಸಾವಿರಾರು ರೈತರು ಸಾವಯವ ಪದ್ದತಿಗಳ ಮೊರೆ ಹೋಗುತ್ತಿದ್ದು ಇಂತಹ ವಿಚಾರ ಸಂಕಿರಣಗಳು ನಮಗೆ ಅನಿವಾರ್ಯವಾಗಿವೆ ಎಂದರು. ರೈತರು ಕೃಷಿ ಚಟುವಟಿಕೆಗಳಲ್ಲಿ ಉತ್ತಮ ಸಾವಯವ ಪದ್ದತಿಯನ್ನು ಅಳವಡಿಸಿಕೊಳ್ಳುವ ಮೂಲಕ ಉತ್ತಮ ಬೆಳೆ ಬೆಳೆದು ಆರೋಗ್ಯ ಮತ್ತು ಅರ್ಥಿಕವಾಗಿ ಸದೃಡರಾಗಬೇಕು.



ಸರಕಾರವು ರೈತರ ಬಳಿ ಬರುವಂತಾಗಬೇಕು ಮತ್ತು ಚನ್ನಗಿರಿ ತಾಲೂಕಿನ ಪಾಂಡೋಮಟ್ಟಿ ಮಠದಲ್ಲಿ ಪ್ರಾರಂಭವಾದ ಈ ಕಾರ್ಯಕ್ರಮ ಇಡೀ ತಾಲೂಕನ್ನು ಸಾವಯವ ತಾಲೂಕು ಅಗಿ ಮಾಡುವಂತಾಗಬೇಕು ಎಂದರು. ನಾನು ಸಹ ಕೃಷಿಯಲ್ಲಿ ನನ್ನನ್ನು ತೊಡಗಿಸಿಕೊಂಡಿದ್ದು ಸಂಪೂರ್ಣ ಸಾವಯವ ಪದ್ದತಿ ಅಳವಡಿಸಿಕೊಂಡಿದ್ದು ನಾನು ಸಹ ಅಕ್ಕಿ ಬೆಳೆಯುತ್ತಿದ್ದೇನೆ. ರೈತರು ಒಂದಾಗಿ ಯೋಚಿಸದೇ ಇದ್ದರೆ ಯಾರು ಬದುಕಲು ಸಾಧ್ಯವಿಲ್ಲ. ಕೃಷಿ ಅಧಿಕಾರಿಗಳು ರೈತರಿಗೆ ಸಮರ್ಪಕ ಮಾಹಿತಿ ನೀಡಬೇಕು. ಕೃಷಿ ವಿಶ್ವವಿದ್ಯಾಲಯಗಳ ಅಲೋಚನೆಗಳು ಬದಲಾಗಬೇಕಿದ್ದು ಇಂದಿನ ಕೃಷಿ ಸಚಿವ ಚಲುವರಾಯ ಸ್ವಾಮಿಯವರು ಇದರ ಬಗ್ಗೆ ಆಸಕ್ತಿ ತೋರಿದ್ದು ಮಾಹಿತಿಯನ್ನು ಪಡೆದಿದ್ದಾರೆ ಎಂದರು. ರಾಜಕಾರಣಿಗಳಿಂದ ಕಲಿಯುವುದು ಏನು ಇಲ್ಲ ರಾಜಕಾರಣಿಗಳು ರೈತರ ಬಳಿ ಕಲಿಯುವುದು ಸಾಕಷ್ಟಿಸಿದೆ. ಇಂದಿನ ಸರಕಾರದ ಯೋಜನೆಗಳು ಯಾವ ರೀತಿ ಇದೆ ಎಂದರೆ ಶರವಾತಿ ಕಣಿವೆ ಒಳಗೆ ಪಂಪಡ್ ಸ್ಟೋರೇಜ್ ಪ್ರಾಜೆಕ್ಟ್ ಮಾಡುತ್ತಿದ್ದು ಸುಮಾರು 400 ಎಕೆರೆ ಪ್ರದೇಶದಲ್ಲಿ 16.000 ಮರಗಳನ್ನು ಕಡಿದು ಸುಮಾರು 10 ಕೋಟಿ ಖರ್ಚು ಮಾಡಿ 2500 ಮೆಗಾವ್ಯಾಟ್ ವಿದ್ಯುತ್ ಬಳಕೆ ಮಾಡಿ ನೀರನ್ನು ಮೇಲೆ ಎತ್ತಿ ಮತ್ತು ಅದೇ ನೀರನ್ನು ಕೆಳಗೆ ತಂದು 2.000 ಮೆಗಾವ್ಯಾಟ್ ಉತ್ಪಾದಿಸುವುದು ಎಂತಹ ವಿಪರ್ಯಾಸವಾಗಿದೆ. ಸರಕಾರಗಳು ಚುನಾವಣಾ ಬಾಂಡ್‌ನಲ್ಲಿ ಹೆಚ್ಚು ಖರೀದಿ ಮಾಡಿದ ಗುತ್ತಿಗೆದಾರರಿಗೆ ಕಾಮಗಾರಿಗಳನ್ನು ಮಂಜೂರು ಮಾಡಿದ್ದಾರೆ. ಇಂತಹ ಯೋಜನೆಗಳಿಂದ ರಾಜ್ಯ ಮತ್ತು ರೈತರು ಅಭಿವೃದ್ದಿಯಾಗಲು ಸಾಧ್ಯವೇ ರೈತರು ಎಚ್ಚೆತ್ತುಕೊಳ್ಳಬೇಕು ಎಂದರು.

# ರಾಶಿ ಭವಿಷ್ಯ

### ಮೇಷ ರಾಶಿ

ಕೆಲಸದಲ್ಲಿ ಹಿರಿಯರಿಂದ ಒತ್ತಡ ಮತ್ತು ಮನೆಯಲ್ಲಿ ಅಪಶ್ರುತಿ ನಿಮ್ಮ ಏಕಾಗ್ರತೆಗೆ ತೊಂದರೆ ತರಬಹುದು. ವ್ಯಾಪಾರ ಸಾಲಕ್ಕಾಗಿ ನಿಮ್ಮ ಬಳಿ ಬರುವವರನ್ನು ನಿರ್ಲಕ್ಷಿಸಿ. ಕುಟುಂಬದ ಸದಸ್ಯರು ನಿಮ್ಮ ಜೀವನದಲ್ಲಿ ಒಂದು ವಿಶೇಷ ಸ್ಥಾನವನ್ನು ಹೊಂದಿರುತ್ತಾರೆ. ಪ್ರೀತಿಯಲ್ಲಿ ನಿಮ್ಮ ಅಸಭ್ಯ ವರ್ತನೆಗೆ ಕ್ಷಮೆ ಕೋರಿ. ಹೊಸ ಯೋಜನೆಗಳು ಮತ್ತು ವಿಚಾರಗಳನ್ನು ಕಾರ್ಯರೂಪಕ್ಕೆ ತರಲು ಒಳ್ಳೆಯ ದಿನ.

### ವೃಷಭ ರಾಶಿ

ವಿಶ್ರಾಂತಿ ತೆಗೆದುಕೊಳ್ಳಿ ಮತ್ತು ಕೆಲಸದ ನಡುವೆ ಸಾಧ್ಯವಾದಷ್ಟೂ ವಿಶ್ರಾಂತಿ ಪಡೆಯಲು ಪ್ರಯತ್ನಿಸಿ. ಇಂದು ಹಣದ ಆಗಮನವು ನಿಮ್ಮನ್ನು ಯಾವುದೇ ಸಮಸ್ಯೆಗಳಿಂದ ಮುಕ್ತಗೊಳಿಸಬಹುದು ಕೆಲವರಿಗೆ ಕುಟುಂಬದಲ್ಲಿ ಒಂದು ಹೊಸ ಆಗಮನ ಸಂಭ್ರಮಾಚರಣೆ ಮತ್ತು ಆನಂದದ ಕ್ಷಣಗಳನ್ನು ತೆರೆದಿಡುತ್ತದೆ. ಸಾಮಾಜಿಕ ಅಡೆತಡೆಗಳನ್ನು ದಾಟಲು ಸಾಧ್ಯವಾಗುವುದಿಲ್ಲ. ಹಗಲುಗನಸು ನಿಮ್ಮ ಪತನಕ್ಕೆ ಕಾರಣವಾಗುತ್ತದೆ – ಇತರರು ನಿಮ್ಮ ಕೆಲಸ ಮಾಡುತ್ತಾರೆಂದು ನಿರೀಕ್ಷಿಸಬೇಡಿ.

### ಮಿಥುನ ರಾಶಿ

ಸಾಮಾಜಿಕ ಜೀವನಕ್ಕಿಂತ ಆರೋಗ್ಯಕ್ಕೆ ಆದ್ಯತೆ ನೀಡಬೇಕು. ಇಂದು ಯಾವುದೇ ಸಹಾಯವಿಲ್ಲದೆ, ನೀವು ಹಣವನ್ನು ಗಳಿಸುವಲ್ಲಿ ಸಾಮರ್ತ್ಯರಾಗಿರುತ್ತೀರಿ. ಕೋಪ ಅಲ್ಪಾವಧಿ ಹಾಗೂ ಅದು ನಿಮ್ಮನ್ನು ತೊಂದರೆಯಲ್ಲಿ ಸಿಲುಕಿಸಬಹುದೆಂದು ಅರ್ಥ ಮಾಡಿಕೊಳ್ಳುವ ಸಮಯ. ಕಳೆದ ಸಂತೋಷದ ನೆನಪುಗಳು ನಿಮ್ಮನ್ನು ವ್ಯಸ್ತವಾಗಿಡುತ್ತವೆ. ಚೆನ್ನಾಗಿ ಅರ್ಥಮಾಡಿಕೊಳ್ಳದೇ ಯಾವುದೇ ವ್ಯಾಪಾರ / ಕಾನೂನುಬದ್ಧ ಕಡತಕ್ಕೆ ಸಹಿ ಮಾಡಬೇಡಿ.

### ಕರ್ಕ ರಾಶಿ

ಕ್ರೀಡೆಗಳು ಮತ್ತು ಇತರೆ ಹೊರಾಂಗಣ ಚಟುವಟಿಕೆಗಳಲ್ಲಿ ಭಾಗವಹಿಸುವುದು ನಿಮ್ಮ ಕಳೆದುಕೊಂಡ ಚೈತನ್ಯವನ್ನು ಸಂಗ್ರಹಿಸಲು ಸಹಾಯ ಮಾಡುತ್ತದೆ. ನಿಮ್ಮ ಹಿಂದಿನ ಸಾಲವನ್ನು ಇಂದಿನ ವರೆಗೂ ಮರುಪಾವತಿ ಮಾಡದೇ ಇರುವ ನಿಮ್ಮ ಸಂಬಂಧಿಕರಿಗೆ ಇಂದು ಸಾಲ ಕೊಡಬಾರದು. ಒಂದು ಹಳೆಯ ಸಂಪರ್ಕ ನಿಮಗೆ ಕೆಲವು ಸಮಸ್ಯೆಗಳನ್ನು ಸೃಷ್ಟಿಸಬಹುದು ನಿಮ್ಮ ಪ್ರೀತಿಪಾತ್ರರು ನಿಮ್ಮನ್ನು ದ್ವೇಷಿಸಿದರೂ ನೀವು ಪ್ರೀತಿ ತೋರಿಸಬೇಕು.

### ಸಿಂಹ ರಾಶಿ

ನೀವು ಇತರರೊಡನೆ ನಿಮ್ಮ ಖುಷಿಯ ಕ್ಷಣಗಳನ್ನು ಹಂಚಿಕೊಳ್ಳುತ್ತಿದ್ದಂತೆ ನಿಮ್ಮ ಆರೋಗ್ಯ ಅರಳುತ್ತದೆ. ಆದರೆ ಇದನ್ನು ನಿರ್ಲಕ್ಷಿಸುವುದು ನಿಮಗೆ ತೊಂದರೆ ತರುತ್ತದೆ. ರಾತ್ರಿಯ ವೇಳೆಯಲ್ಲಿ ಇಂದು ನೀವು ಹಣದ ಪ್ರಯೋಜನವನ್ನು ಪಡೆಯುವ ಪೂರ್ತಿ ಸಾಧ್ಯತೆ ಇದೆ ಏಕೆಂದರೆ ನಿಮ್ಮ ಮೂಲಕ ಕೊಟ್ಟಿರುವ ಹಣ ಇಂದು ನಿಮಗೆ ಮರಳಿ ಸಿಗಬಹುದು. ಒಬ್ಬ ಸ್ನೇಹಿತ ತನ್ನ ವೈಯಕ್ತಿಕ ಸಮಸ್ಯೆಗಳನ್ನು ಪರಿಹರಿಸುವಲ್ಲಿ ನಿಮ್ಮ ಸಲಹೆ ಪಡೆದುಕೊಳ್ಳುತ್ತಾರೆ. ನಿಮ್ಮ ಪ್ರಿಯತಮೆಗೆ ನಿಮ್ಮ ಅಸಡ್ಡೆಯ ಗಮನ ಮನೆಯಲ್ಲಿ ಒತ್ತಡದ ಕ್ಷಣಗಳನ್ನು ತರಬಹುದು

### ಕನ್ಯಾ ರಾಶಿ

ಕುಡಿಯುವ ಮತ್ತು ತಿನ್ನುವಾಗ ಎಚ್ಚರದಿಂದಿರಿ. ಅಸಡ್ಡೆ ನಿಮಗೆ ಅನಾರೋಗ್ಯ ತರಬಹುದು. ಇಂದು ನೀವು ನಿಮ್ಮ ಮಕ್ಕಳ ಕಾರಣದಿಂದ ಆರ್ಥಿಕ ಲಬಹವನ್ನು ಪಡೆಯುವ ಸಾಧ್ಯತೆ ಕಂಡುಬರುತ್ತಿದೆ. ಇದರಿಂದ ನೀವು ತುಂಬಾ ಸಂತೋಷಪಡುತ್ತೀರಿ. ನಿಮ್ಮ ಕುಟುಂಬದ ಜೊತೆ ಕಟ್ಟುನಿಟ್ಟಾಗಿ ವರ್ತಿಸಬೇಡಿ ಇದು ಶಾಂತಿ ಭಂಗವುಂಟುಮಾಡಬಹುದು. ಪ್ರಣಯ ಸಂಬಂಧದಲ್ಲಿ ನಿಮ್ಮನ್ನು ತಪ್ಪಾಗಿ ತಿಳಿದುಕೊಳ್ಳುವ ಸಾಧ್ಯತೆಯಿದೆ.

### ತುಲಾ ರಾಶಿ

ನಿಮ್ಮ ಜಗಳಗಂಟ ನಡವಳಿಕೆ ನಿಮ್ಮ ಸಂಬಂಧವನ್ನು ಶಾಶ್ವತವಾಗಿ ಹಾಳು ಮಾಡಬಹುದಾದ್ದರಿಂದ ಅದನ್ನು ನಿಯಂತ್ರಣದಲ್ಲಿಡಿ. ನೀವು ತೆರೆದ ಮನಸ್ಸನ್ನು ಹೊಂದುವ ಮೂಲಕ ಮತ್ತು ಯಾರಾದರ ವಿರುದ್ಧ ಪೂರ್ವಾಗ್ರಹವನ್ನು ಕೈಬಿಡುವ ಮೂಲಕ ಇದರಿಂದ ಹೊರಬರಬಹುದು. ಹಣಕಾಸು ಸ್ಥಿತಿ ಊಹಾಪೋಹ ಅಥವಾ ಅನಿರೀಕ್ಷಿತ ಲಾಭದ ಮೂಲಕ ಸುಧಾರಿಸುತ್ತವೆ. ಸಾಮಾಜಿಕ ಕೂಟಗಳಲ್ಲಿ ನಿಮ್ಮ ಹಾಸ್ಯದ ಪ್ರಕೃತಿ ನಿಮ್ಮನ್ನು ಜನಪ್ರಿಯಗೊಳಿಸುತ್ತದೆ. ನೀವು ಸ್ವಲ್ಪ ಪ್ರೀತಿ ಹಂಚಿಕೊಂಡಲ್ಲಿ ಇಂದು ನಿಮ್ಮ ಪ್ರಿಯತಮೆ ನಿಮ್ಮ ದೇವತೆಯಾಗುತ್ತಾಳೆ.

### ವೃಶ್ಚಿಕ ರಾಶಿ

ನಿಮ್ಮ ಸಾಮಾನ್ಯ ಜ್ಞಾನದ ಜೊತೆಗೆ ನಿಮ್ಮ ನಿರಂತರ ಪ್ರಯತ್ನ ಖಂಡಿತವಾಗಿಯೂ ಯಶಸ್ಸು ತರುವುದರಿಂದ ತಾಳ್ಮೆಯಿಂದಿರಿ. ಹಣದ ಪ್ರಾಮುಖ್ಯತೆ ನಿಮಗೆ ಚೆನ್ನಾಗಿ ಗೊತ್ತಿದೆ, ಆದ್ದರಿಂದ ಇಂದು ನಿಮ್ಮ ಮೂಲಕ ಉಳಿಸಲಾಗಿರುವ ಹಣ ನಿಮ್ಮ ತುಂಬಾ ಕೆಲಸಕ್ಕೆ ಬರಬಹುದು ಮತ್ತು ನೀವು ಯಾವುದೇ ದೊಡ್ಡ ಸಮಸ್ಯೆಯಿಂದ ಹೊರಬರಬಹುದು. ಒಂದು ಹಳೆಯ ಸಂಪರ್ಕ ನಿಮಗೆ ಕೆಲವು ಸಮಸ್ಯೆಗಳನ್ನು ಸೃಷ್ಟಿಸಬಹುದು ನಿಮ್ಮ ಪ್ರೀತಿಪಾತ್ರರ ಭಾವನೆಗಳನ್ನು ಇಂದು ಅರ್ಥಮಾಡಿಕೊಳ್ಳಿ.

### ಧನು ರಾಶಿ

ನಿಮ್ಮ ಆರೋಗ್ಯ ಸುಧಾರಿಸಲು ಸಹಕಾರಿಯಾಗುವ ಕೆಲಸಗಳನ್ನು ಮಾಡಬಹುದಾದ ಒಂದು ದಿನ. ನಿಮ್ಮ ಸೃಜನಶೀಲ ಪ್ರತಿಭೆಯನ್ನು ಸರಿಯಾಗಿ ಬಳಸಿದಲ್ಲಿ ಅದು ಅತ್ಯಂತ ಲಾಭದಾಯಕವೆಂದು ಸಾಬೀತಾಗಬಹುದು. ನೀವು ಕುಟುಂಬದಲ್ಲಿ ಒಂದು ಸಂಧಿಗಾರನಂತೆ ವರ್ತಿಸುತ್ತೀರಿ. ಎಲ್ಲರ ಸಮಸ್ಯೆಗಳಿಗೂ ಕಿವಿಗೊಡಿ ಹಾಗೂ ವಿಷಯಗಳನ್ನು ನಿಯಂತ್ರಣದಲ್ಲಿರಿಸಿಕೊಳ್ಳಿ.

### ಮಕರ ರಾಶಿ

ಧ್ಯಾನ ಮತ್ತು ಆತ್ಮ ಸಾಕ್ಷಾತ್ಕಾರ ಪ್ರಯೋಜನಕಾರಿಯಾಗಬಹುದು. ಸಹೋದರ–ಸಹೋದರಿಯರ ಸಹಾಯದಿಂದ ಇಂದು ನೀವು ಅರ್ಥಿಕವಾಗಿ ಲಾಭವನ್ನು ಪಡೆಯಬಹುದು. ನಿಮ್ಮ ಸಹೋದರ ಸಹೋದರಿಯರ ಸಲಹೆ ತೆಗೆದುಕೊಳ್ಳಿ ಕುಟುಂಬದ ಪರಿಸ್ಥಿತಿ ಇಂದು ನೀವು ಯೋಚಿಸುವ ಹಾಗೆ ಇರುವುದಿಲ್ಲ. ಇಂದು ಮನೆಯಲ್ಲಿ ಯಾವುದೇ ವಿಷಯದ ಬಗ್ಗೆ ಅಪಶ್ರುತಿ ಉಂಟಾಗುವ ಸಾಧ್ಯತೆ ಇದೆ. ಅಂತಹ ಪರಿಸ್ಥಿಯಲ್ಲಿ ನಿಮ್ಮನ್ನು ನಿಯಂತ್ರಿಸಿ.

### ಕುಂಭ ರಾಶಿ

ಒತ್ತಡದ ದಿನದ ಹೊರತಾಗಿಯೂ ಆರೋಗ್ಯ ಪರಿಪೂರ್ಣವಾಗಿರುತ್ತದೆ. ಇಂದು ಹೂಡಿಕೆಗಳನ್ನು ಮಾಡಬಾರದು. ನೀವು ಕಛೇರಿಯಲ್ಲಿ ಹೆಚ್ಚು ಸಮಯ ಕಳೆದರೆ ನಿಮ್ಮ ಮನೆಯ ಜೀವನಕ್ಕೆ ಹಾನಿಯಾಗಬಹುದು. ನಿಮ್ಮ ನಗು ಯಾವುದೇ ಅರ್ಥ ಹೊಂದಿಲ್ಲ ನಗುವಿಗೆ ಧ್ವನಿಯಿಲ್ಲ ನಿಮ್ಮ ಸಂಗವಿಲ್ಲದಿದ್ದಾಗ ಹೃದಯ ಬಡಿಯುವುದನ್ನು ಮರೆಯುತ್ತದೆ.

### ಮೀನ ರಾಶಿ

ಇಂದು ನೀವು ಹಲವಾರು ಒತ್ತಡಗಳು ಮತ್ತು ಭಿನ್ನಾಭಿಪ್ರಾಯಗಳನ್ನು ಎದುರಿಸಬೇಕಾಗಬಹುದು ಹಾಗೂ ಇದು ನಿಮಗೆ ಕಿರಿಕಿರಿ ಹಾಗೂ ಆತಂಕದ ಭಾವನೆಗಳನ್ನು ಉಂಟುಮಾಡಬಹುದು. ನಿಮ್ಮ ಮನೆಗೆ ಸಂಬಂಧಿಸಿದ ಹೂಡಿಕೆ ಲಾಭದಾಯಕವಾಗಿರುತ್ತದೆ. ಮಕ್ಕಳಿಂದ ಅನಿರೀಕ್ಷಿತ ಸುದ್ದಿ ಸಂತೋಷದ ಕ್ಷಣಗಳನ್ನು ತರುತ್ತದೆ. ನಿಮ್ಮ ಪ್ರೀತಿ ಅಸಮ್ಮತಿಯನ್ನು ಆಮಂತ್ರಿಸಬಹುದು.

# ವಿಭಾಗ ಮಟ್ಟದ ಫುಟ್ ಬಾಲ್ ಕ್ರೀಡಾ ಕೂಟಕ್ಕೆ ಚಾಲನೆ



**ಶಿವಮೊಗ್ಗ :** ಕ್ರೀಡಾಪಟುಗಳು ಕ್ರೀಡಾ ಚಟುವಟಿಕೆಗಳಲ್ಲಿ ಭಾಗವಹಿಸಿ, ಆಗಿದ್ದಾಗ ಮಾತ್ರ ಆರೋಗ್ಯವಂತರಾಗಿರಲು ಸಾಧ್ಯವಾಗುತ್ತದೆ ಎಂದು ರಾಜ್ಯ ಸರ್ಕಾರಿ ನೌಕರ ಸಂಘದ ರಾಜ್ಯಾಧ್ಯಕ್ಷ ಸಿ. ಎಸ್. ಷಡಾಕ್ಷರಿ ಅಭಿಪ್ರಾಯ ಪಟ್ಟರು.

ಅವರು ಸೆಕ್ರೆಡ್ ಹಾರ್ಟ್ ಕ್ರೀಡಾಂಗಣದಲ್ಲಿ ಎರಡು ದಿನ ನಡೆಸಲಾದ ಜಿಲ್ಲಾಡಳಿತ ಶಿವಮೊಗ್ಗ, ಜಿಲ್ಲಾ ಪಂಚಾಯತ್, ಶಿವಮೊಗ್ಗ, ಶಾಲಾ ಶಿಕ್ಷಣ ಇಲಾಖೆ, ಉಪ ನಿರ್ದೇಶಕರ ಕಛೇರಿ, ಶಿವಮೊಗ್ಗ, ಸೆಕ್ರೆಡ್ ಹಾರ್ಟ್ ಪ್ರೌಢಶಾಲೆ ಶಿವಮೊಗ್ಗ ಹಾಗು ಜಿಲ್ಲಾ ಫುಟ್ ಬಾಲ್ ಅಸೋಸಿಯೇಷನ್ ಶಿವಮೊಗ್ಗ ಇವರ ಸಂಯುಕ್ತ ಆಶ್ರಯದಲ್ಲಿ ಆಯೋಜಿಸಲಾಗಿದ್ದ 14 ಮತ್ತು 17 ವರ್ಷ ವಯೋಮಿತಿಯೊಳಗಿನ ಬಾಲಕ ಮತ್ತು ಬಾಲಕಿಯರ ಬೆಂಗಳೂರು ವಿಭಾಗ ಮಟ್ಟದ ಫುಟ್ ಬಾಲ್ ಕ್ರೀಡಾ ಕೂಟಕ್ಕೆ ಚಾಲನೆ ನೀಡಿ

ಮಾತನಾಡುತ್ತಾ, ಓದಿನ ಜೊತೆಗೆ ಕ್ರೀಡೆಯಲ್ಲಿ ಭಾಗವಹಿಸಿ,ಕ್ರೀಡೆಯಲ್ಲಿ ತಮ್ಮ ದೈಹಿಕ ಹಾಗೂ ಮಾನಸಿಕ ಸಾಮರ್ಥ್ಯವನ್ನು ಪರೀಕ್ಷಿಸಿಕೊಳ್ಳಬಹುದಾಗಿದೆ ಎಂದರು.

ಕ್ರೀಡಾಪಟುಗಳಲ್ಲಿ ಅತ್ಯಂತ ಸಾಮರಸ್ಯವಿರುತ್ತದೆ. ಇದು ಕ್ರೀಡಾ ಕ್ಷೇತ್ರದ ಗುಟ್ಟಾಗಿದೆ ಎಂದ ಅವರು, ಕ್ರೀಡೆ ತಮ್ಮ ಮಾನಸಿಕ ಬುದ್ದಿ ಮಟ್ಟವನ್ನು ಹೆಚ್ಚಿಸುವಲ್ಲಿ ಸಹಕಾರಿಯಾಗಿದೆ ಹಾಗಾಗಿ ಪ್ರತಿಯೊಬ್ಬ ವಿದ್ಯಾರ್ಥಿಯೂ ಕೂಡ ಶೈಕ್ಷಣಿಕ ಚಟುವಟಿಕೆಯ ಜೊತೆಗೆ ಕ್ರೀಡಾ ಚಟುವಟಿಕೆಗಳಲ್ಲೂ ಕೂಡ ಕಡ್ಡಾಯವಾಗಿ ಪಾಲ್ಗೊಳ್ಳಬೇಕು.

ಅಂತರಾಷ್ಟ್ರೀಯ ಕ್ರೀಡಾಪಟುಗಳಾದ ಪೀಲೆ. ಮೆರ್ಡೂನಾ ಮುಂತಾದ ವ್ಯಕ್ತಿಗಳ ದಂತಕಥೆಗಳನ್ನು ನೆನಪಿಸಿ ವಿದ್ಯಾರ್ಥಿಗಳು ಸತತ ಪ್ರಯತ್ನ ಪಟ್ಟರೆ ನೀವು ಸಹ ಒಳ್ಳೆಯ ಫುಟ್ಬಾಲ್ ಕ್ರೀಡಾಪಟುಗಳಾಗಬಹುದೆಂದು ಸತತವಾಗಿ ಅಭ್ಯಾಸದಿಂದ ಕ್ರೀಡೆಯಲ್ಲಿ ಉತ್ತಮ ಸಾಧನೆ ಮಾಡಲು ಸಾಧ್ಯವಾಗುತ್ತದೆ ಎಂದರು.

ಸೆಕ್ರೆಡ್ ಹಾರ್ಟ್ ಕಾರ್ಯದರ್ಶಿಗಳಾದ ಫಾದರ್ ರೋಷನ್ ಪಿಂಟೋ ಮಾತನಾಡುತ್ತಾ, ಇಂದಿನ ದಿನಮಾನಗಳಲ್ಲಿ ವಿದ್ಯಾರ್ಥಿಗಳು ಮೊಬೈಲ್,ಟಿವಿಗಳ ಹಾವಳಿಯಿಂದ ಕ್ರೀಡೆಗೆ ಎಲ್ಲೋ ಒಂದು ರೀತಿ ಪ್ರಾಮುಖ್ಯತೆ ಕಡಿಮೆಯಾಗುತ್ತಾ ಇದೆ ಎಂಬುದು ನನ್ನ ಭಾವನೆ. ಓದಿಗೆ ಕೊಡುವಷ್ಟು ಪ್ರಾಮುಖ್ಯತೆಯನ್ನು, ಪಠ್ಯೇತರ ಚಟುವಟಿಕೆಗಳಿಗೂ ಸಮಾನ ಪ್ರಾಮುಖ್ಯತೆಯನ್ನು ಕೊಡಬೇಕು ಎಂದರು.

ಕ್ರೀಡೆಯಲ್ಲಿ ಭಾಗವಹಿಸುವುದರಿಂದ ಶಾರೀರಿಕ ಹಾಗೂ ದೈಹಿಕವಾಗಿ ಸದೃಢರಾಗಲು ಸಾಧ್ಯವಾಗುತ್ತದೆ. ಯಾಕೆಂದರೆ ಒಟ್ಟಾರೆ ದೈಹಿಕ ಸಾಮರ್ಥ್ಯವನ್ನು ಕಾಣಬಹುದು. ಕ್ರೀಡೆಯಲ್ಲಿ ನಾಯಕತ್ವದ ಗುಣ ಬೆಳೆಸುತ್ತದೆ.

ಸೋಲು ಗೆಲುವನ್ನು ಹೇಗೆ ಒಂದೇ ಸಮನಾಗಿ ತೆಗೆದುಕೊಳ್ಳಬಹುದು ಎಂಬುದನ್ನು ಕ್ರೀಡೆಯಲ್ಲಿ ಕಾಣಬಹುದು.

ಅಂಕಗಳು ಒಂದು ಸಲ ಕಡಿಮೆ ಆಗುತ್ತದೆ, ಹೆಚ್ಚು ಆಗುತ್ತದೆ, ಇಂತಹ ಸಂದರ್ಭದಲ್ಲಿ ಪ್ರತಿಭಾನ್ವಿತ ವಿದ್ಯಾರ್ಥಿಗಳು ಖಿನ್ನತೆಗೆ ಒಳಗಾಗುತ್ತಾರೆ. ಆದರೆ ಕ್ರೀಡೆಯಲ್ಲಿ ಭಾಗವಹಿಸುವುದರಿಂದ ಇಂತಹ ನೂನ್ಯತೆಗಳಿಂದ ದೂರವಾಗಬಹುದು, ಹಾಗಾಗಿ ಪ್ರತಿದಿನ ವಿದ್ಯಾರ್ಥಿಗಳು ಅರ್ಧ ಗಂಟೆ ಕ್ರೀಡೆಯಲ್ಲಿ ಭಾಗವಹಿಸುವುದರಿಂದ ಉತ್ತಮ ಆರೋಗ್ಯ, ಧೈರ್ಯವಂತರಾಗಲು ಕಾರಣವಾಗುತ್ತದೆ ಎಂದು ಕ್ರೀಡಾಪಟುಗಳಿಗೆ ಕಿವಿಮಾತು ಹೇಳಿದರು.

ಕಾರ್ಯಕ್ರಮದಲ್ಲಿ ಸೆಕ್ರೆಡ್ ಹಾರ್ಟ್ ವ್ಯವಸ್ಥಾಪಕರಾದ ಫಾದರ್ ಸ್ಟ್ಯಾನಿ ಡಿಸೋಜಾ, ಕ್ಯಾಂಪಸ್ ಡೈರೆಕ್ಟರ್ ಫಾದರ್ ಪ್ರಾನ್ಸಿಸ್ ನರೋನ್ಹಾ,

ಬಸವೇಶ್ವರ ಪಟ್ಟಣ ಪತ್ತಿನ ಸಹಕಾರ ಸಂಘದ ಅಧ್ಯಕ್ಷರಾದ ಬಳ್ಳೇಕೆರೆ ಸಂತೋಷ್,

ಶಾಲಾ ಶಿಕ್ಷಣ ಇಲಾಖೆ ಉಪ ನಿರ್ದೇಶಕರಾದ ಮಂಜುನಾಥ ಎಸ್. ಆರ್., ವಾಯು ಮಾಲಿನ್ಯ ವಿಭಾಗದ ಅಧಿಕಾರಿ, ಶಾಲೆಯ ಹಳೆಯ ವಿದ್ಯಾರ್ಥಿ ಹರ್ಷ, ಕೆಪಿಟಿಸಿಎಲ್ ನ ಮೋಹನ್ ಕುಮಾರ್ ಹಾಗೂ ಜಿಲ್ಲಾ ದೈಹಿಕ ಶಿಕ್ಷಣಾಧಿಕಾರಿ ಎಂ ಪ್ರಕಾಶ್. ನಿವೃತ್ತ ತಾಲೂಕು ದೈಹಿಕ ಶಿಕ್ಷಣ ಪರಿವೀಕ್ಷಕರಾದ ಶ್ರೀ ನಿರಂಜನ್ ಮೂರ್ತಿ ಇನ್ನೂ ಮುಂತಾದವರು ಉಪಸ್ಥಿತರಿದ್ದರು.

# ಮಕ್ಕಳು ಸ್ಕೌಟ್ಸ್ ಗೈಡ್ಸ್ ನಂತಹ ಶಿಸ್ತಿನ ಸೇವಾ ತರಬೇತಿಗಳನ್ನು ಪಡೆಯುವುದು ಉತ್ತಮ



**ದಾವಣಗೆರೆ:** ಓದಿನ ಜೊತೆಗೆ ಮಕ್ಕಳು ಸ್ಕೌಟ್ಸ್ ಗೈಡ್ಸ್ ನಂತಹ ಶಿಸ್ತಿನ ಸೇವಾ ತರಬೇತಿಗಳನ್ನು ಪಡೆದು ಮುಂದೆ ದೇಶದ ಉತ್ತಮ ಪ್ರಜೆಗಳಾಗಿ, ನಿಮ್ಮ ತಂದೆ–ತಾಯಿ, ನಾಡಿಗೆ, ದೇಶಕ್ಕೆ, ಸ್ಕೌಟ್ಸ್ ಗೈಡ್ಸ್ ಸಂಸ್ಥೆಗೆ ಕೀರ್ತಿ ತರುವಂತಾಗಿರಿ ಎಂದು ಭಾರತ್ ಸ್ಕೌಟ್ ಅಂಡ್ ಗೈಡ್ಸ್ ಕರ್ನಾಟಕದ ಕೊಂಡಜ್ಜಿ ಬಸಪ್ಪ ಸ್ಥಳೀಯ ಸಂಸ್ಥೆ ಅಧ್ಯಕ್ಷರು, ದೂಡಾ ಅಧ್ಯಕ್ಷರಾದ ದಿನೇಶ ಕೆ.ಶೆಟ್ಟಿ ಆಶಿಸಿದರು.

ನಗರದ ಕುಂದುವಾಡ ಕೆರೆ ಆವರಣದಲ್ಲಿ ಭಾನುವಾರ ಬೆಳಿಗ್ಗೆ ದಿ ಭಾರತ್ ಸ್ಕೌಟ್ ಅಂಡ್ ಗೈಡ್ಸ್ ಕರ್ನಾಟಕದ ಕೊಂಡಜ್ಜಿ ಬಸಪ್ಪ ಸ್ಥಳೀಯ ಸಂಸ್ಥೆಯ ಆಶ್ರಯದಲ್ಲಿ ಕುಂದುವಾಡ ಕೆರೆಯ ತೀರದಲ್ಲಿ

"ಸ್ವಚ್ಚ ದಾವಣಗೆರೆ – ಹಸಿರು ದಾವಣಗೆರೆ" ಧ್ಯೇಯವಾಕ್ಯದಡಿ ಆಯೋಜಿಸಿದ ಸಮುದಾಯ ಸೇವಾ ಪರಿಸರ ಸ್ವಚ್ಚತಾ ಸೇವೆ ಕಾರ್ಯಕ್ರಮಕ್ಕೆ ಅವರು ಚಾಲನೆ ನೀಡಿ ಮಾತನಾಡಿದರು.

ಸ್ವಚ್ಛತೆ ಮತ್ತು ಸೇವೆ ನಮ್ಮ ಜೀವನದ ಅವಿಭಾಜ್ಯ ಅಂಗವಾಗಿದೆ. ನಿಮಗೆ ತಂದೆ ತಾಯಿ, ಶಿಕ್ಷಕರು ಕಷ್ಟಪಟ್ಟು ಕಲಿಸುತ್ತಾರೆ. ಇದರ ಜೊತೆಗೆ ಪ್ರತಿದಿನ ಪತ್ರಿಕೆಗಳನ್ನು ಓದುವುದನ್ನು ಕಲಿಯಬೇಕು. ಇದರಿಂದ ನಿಮ್ಮ ಸಾಮಾನ್ಯ ಜ್ಞಾನ ಕೂಡಾ ಬೆಳೆಯುತ್ತದೆ. ವಿದ್ಯಾಭ್ಯಾಸ ಅಷ್ಟೇ ಅಲ್ಲ, ನಿಮಗೆ ಕ್ರೀಡೆ ಸೇರಿದಂತೆ ಕಲೆ, ಸಾಹಿತ್ಯ, ಸಾಂಸ್ಕೃತಿಕ ಕ್ಷೇತ್ರಗಳಲ್ಲಿ ಸಾಕಷ್ಟು ಅವಕಾಶಗಳಿವೆ. ಈ ನಿಟ್ಟಿನಲ್ಲಿ ಭಾರತ್ ಸ್ಕೌಟ್ ಅಂಡ್ ಗೈಡ್ಸ್ ಕೊಂಡಜ್ಜಿ ಬಸಪ್ಪ ಸ್ಥಳೀಯ ಸಂಸ್ಥೆ ಇಂತಹ ಸೇವಾ ಕಾರ್ಯವನ್ನು ಹಮ್ಮಿಕೊಂಡಿದೆ. ಇಂತಹ ಕಾರ್ಯಕ್ರಮಗಳ ಸದುಪಯೋಗ ಪಡೆದುಕೊಳ್ಳಿರಿ ಎಂದು ಕರೆ ನೀಡಿದರು. ಈ ಸಂದರ್ಭದಲ್ಲಿ ಪಾಲಿಕೆ ಮಾಜಿ ಸದಸ್ಯ ಮಂಜುನಾಥ ಗಡಿಗುಡಾಳ, ಉದ್ಯಮಿ ಗಿರೀಶ ಮಾಗಾನಹಳ್ಳಿ, ಸ್ಥಳೀಯ ಸಂಸ್ಥೆಯ ಕಾರ್ಯದರ್ಶಿ ಟಿ.ಎಂ.ರವೀಂದ್ರ ಸ್ವಾಮಿ, ಜಿಲ್ಲಾ ಸಂಸ್ಥೆಯ ಎಡಿಸಿ ಕಿರಣ್‌ಕುಮಾರ, ಗೈಡ್ ಕ್ಯಾಪ್ಟನ್ ಅನಿತಾ, ಎಚ್.ಎಂ.ರಜನಿ, ಸ್ಕೌಟ್ ಮಾಸ್ಟರ್ ಹನುಮಂತಪ್ಪ ಉಳ್ಳಾಗಡ್ಡಿ, ವಿಜಯ್ ಕುಮಾರ್, ಮಂಜುನಾಥ್, ಮಹೇಶ್ ಕುಮಾರ್, ಹರೀಶ್ ಕೆಂಗನಹಳ್ಳಿ, ಪೌರ ಕಾರ್ಮಿಕರು ಹಾಗೂ ತರಳಬಾಳು ವಸತಿ ಶಾಲೆ,

ಬಾಪೂಜಿ ಹೈಯರ್ ಪ್ರೈಮರಿ ಆಂಗ್ಲಮಾಧ್ಯಮ ಶಾಲೆ, ಮಾಗನೂರು ಬಸಪ್ಪ ಶಾಲೆ, ಸೇಂಟ್ ಪಾಲ್ಸ್ ಬಾಲಕಿಯರ ಶಾಲೆ, ಅನ್ಮೋಲ್ ಪಬ್ಲಿಕ್ ಶಾಲೆ, ಬಾಪೂಜಿ ಓಪನ್ ಸ್ಕೌಟ್ ಘಟಕ, ಮದರ್ ತೆರೇಸಾ ಗೈಡ್ ಕಂಪನಿ ಮಕ್ಕಳು ಭಾಗವಹಿಸಿದ್ದರು.

ಸ್ಕೌಟ್– ಗೈಡ್ ಮಕ್ಕಳು ಮನೆಯಿಂದಲೇ ಪೊರಕೆ, ಸುಣ್ಣ, ಕಸ ತುಂಬುವ ಚೀಲಗಳನ್ನು ತಂದು ಕೆರೆಯ ಸುತ್ತಮುತ್ತಲಿನ ರಸ್ತೆಗಳು, ಪಥಗಳು ಮತ್ತು ಸಾರ್ವಜನಿಕ ಸ್ಥಳಗಳನ್ನು ಶ್ರಮದಿಂದ ಸ್ವಚ್ಛಗೊಳಿಸಿದರು.

# ಹಸಿರು ಕ್ರಾಂತಿಯ ಹರಿಕಾರ ಜಯಪ್ರಕಾಶ್ ನಾರಾಯಣ್: ಜಯಣ್ಣ ಬಣ್ಣನೆ

**ದಾವಣಗೆರೆ:** ಹಸಿರು ಕ್ರಾಂತಿಯ ಹರಿಕಾರ, ಭೂದಾನ ತಂದ ಸುಧಾರಕ. ಸಮಾಜವಾದದ ಮೂಲಕ ದೇಶದಲ್ಲಿ ಸುಧಾರಣೆ ತರಲು ಪ್ರಯತ್ನಿಸಿದ ಪ್ರಮುಖ, ಖ್ಯಾತಿಯಿಂದ ದೂರವೇ ಉಳಿದ ಅಪ್ಪಟ ದೇಶಪ್ರೇಮಿ ಜಯಪ್ರಕಾಶ್ ನಾರಾಯಣ್ ಎಂದು ಜೆ.ಡಿ.ಯು. ಜಿಲ್ಲಾಧ್ಯಕ್ಷ ಹೆಚ್. ಜಯಣ್ಣ ಬಣ್ಣಿಸಿದರು.

ಶನಿವಾರ ನಗರದ ಗುಂಡಿ ಮಹದೇವಪ್ಪ ವೃತ್ತದ ಬಳಿ ಇರುವ ಜೆ.ಪಿ ಪಾರ್ಕ್ನಲ್ಲಿ ದೇಶಪ್ರೇಮಿ ಜಯಪ್ರಕಾಶ್ ನಾರಾಯಣ್ ಅವರ ಜಯಂತಿ ಅಂಗವಾಗಿ ಜಿಲ್ಲಾ ಸಂಯುಕ್ತ ಜನತಾದಳ ಪಕ್ಷದ ವತಿಯಿಂದ ಹಮ್ಮಿಕೊಂಡಿದ್ದ ಜೆ.ಪಿ. ಅವರ ಪುತ್ಥಳಿಗೆ ಪುಷ್ಪಾರ್ಚನೆ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.ಜಯಪ್ರಕಾಶ್ ನಾರಾಯಣ ಒಬ್ಬ ಅಪ್ಪಟ ಸಮಾಜವಾದಿ, ಗಾಂಧಿ ಹಾದಿಯಲ್ಲಿ ಮುನ್ನಡೆದ ಮಹಾ ನಿಷ್ಠಾವಂತ ಭಾರತಕ್ಕೆ ಸ್ವಾತಂತ್ರ್ಯ ದೊರೆತ ನಂತರ ಅಂದರೆ, ಮಹಾತ್ಮಗಾಂಧೀಜಿ ಇಲ್ಲದ ಸಂದರ್ಭದಲ್ಲಿ ಅವರ ಸ್ಥಾನ–ಗೌರವವನ್ನು ಕಾಯ್ದುಕೊಂಡ ಧುರೀಣರ ಪೈಕಿ ಜಯಪ್ರಕಾಶ ನಾರಾಯಣ ಸಹ ಒಬ್ಬರು. ಇವರು ಹಸಿರು ಕ್ರಾಂತಿಯ ಹರಿಕಾರ, ಭೂದಾನ ತಂದ ಸುಧಾರಕ. ಸಮಾಜವಾದದ ಮೂಲಕ ದೇಶದಲ್ಲಿ ಸುಧಾರಣೆ ತರಲು ಪ್ರಯತ್ನಿಸಿದ ಪ್ರಮುಖ, ಖ್ಯಾತಿಯಿಂದ ದೂರವೇ ಉಳಿದು ಅಪ್ಪಟ ದೇಶಪ್ರೇಮಿ ಎಂದು ಅವರು ಬಣ್ಣಿಸಿದರು.ಜೆ.ಪಿ. ಅವರು ಅನ್ಯಾಯದ ವಿರುದ್ಧ ಸತತವಾಗಿ ಹೋರಾಟ ಮಾಡಿ ರಾಜಕಾರಣಿಗಳ ಸರ್ವಾಧಿಕಾರಿ ಧೋರಣೆ, ಪ್ರಜಾಪ್ರಭುತ್ವದ ಮೂಲ ಸತ್ವವನ್ನು ಹಾಳು ಮಾಡುವವರ ವಿರುದ್ಧ ನಿಷ್ಠುರವಾಗಿ ಹೋರಾಟ ಮಾಡಿದ ದಿಟ್ಟ ನಾಯಕರಾಗಿದ್ದರು. ಹಾಗಾಗಿಯೇ ಅವರನ್ನು ಭಾರತದ ಜನತೆ ಪ್ರೀತಿಯಿಂದ ಜೆ.ಪಿ ಎಂದು ಕರೆಯುತ್ತಿದ್ದರು ಎಂದು ಹೇಳಿದರು.ಸ್ವಾವಲಂಬಿ ಯೋಜನೆಗಳನ್ನು ರೂಪಿಸುತ್ತಾ, ಜಾತಿಮತಿಗಳ ಸಂಕೋಲೆಗಳ ವಿರುದ್ಧ ಧ್ವನಿಯೆತ್ತುತ್ತಾ, ಭ್ರಷ್ಟಾಚಾರಗಳನ್ನು ಬಯಲಿಗೆಳೆಯುತ್ತಾ, ದೇಶ ಸೇವೆಗೆ ತಮ್ಮನ್ನು ತಾವು ತೊಡಗಿಸಿಕೊಂಡಿದ್ದರು. ಅವರ ವಿಚಾರಧಾರೆ ರಾಜಕೀಯ ಪ್ರಜ್ಞೆಯ ಪ್ರಸ್ತುತ ರಾಜಕೀಯದಲ್ಲಿ ಕಣ್ಮರೆಯಾಗಿರುವುದು ಬೇಸರದ ಸಂಗತಿ ಹೇಳಿದರುಈ ಸಂದರ್ಭದಲ್ಲಿ ಜೆ.ಡಿ.ಯು ಪಕ್ಷದ ನೀಲಗಿರಿಯಪ್ಪ, ಶಿವಯೋಗಿ, ಕೆ.ಚಂದ್ರಣ್ಣ, ಶ್ರೀನಿವಾಸ್, ಕುಮಾರಸ್ವಾಮಿ, ಇಂದ್ರಮ್ಮ ಸೇರಿದಂತೆ ಜೆಪಿ ಅವರ ಅಭಿಮಾನಿಗಳು ಉಪಸ್ಥಿತರಿದ್ದರು.

# ಬೀದಿ ನಾಯಿಗಳ ನಿಯಂತ್ರಣಕ್ಕೆ ಪ್ರಾಣಿದಯಾ ಸಂಘ ಅಡ್ಡಿಯಾಗಿದೆ

**ಚಿಕ್ಕಮಗಳೂರು:** ನಗರದಲ್ಲಿ ಬೀದಿ ನಾಯಿಗಳ ನಿಯಂತ್ರಣಕ್ಕೆ ಪ್ರಾಣಿದಯಾ ಸಂಘ ಅಡ್ಡಿಯಾಗಿದೆಎಂಬುದು ಸತ್ಯಕ್ಕೆದೂರವಾದ ವಿಷಯಎಂದು ಪ್ರಾಣಿದಯಾ ಸಂಘದ (ಎಸ್‌ಪಿಸಿಎ) ಸದಸ್ಯೆ ನಳಿನಾ ಡಿಸಾ ತಿಳಿಸಿದ್ದಾರೆ. ಇತ್ತೀಚೆಗೆ ನಗರಸಭೆಅಧ್ಯಕ್ಷರು ಮತ್ತು ಪೌರಾಯುಕ್ತರು ಬೀದಿ ನಾಯಿಗಳ ನಿಯಂತ್ರಣಕ್ಕೆ ಪ್ರಾಣಿದಯಾ ಸಂಘ ಅಡ್ಡಿಯಾಗಿದೆಎಂದು ಹೇಳಿಕೆ ನೀಡಿದ್ದು, 2008 ರಿಂದ ಪ್ರಾಣಿರಕ್ಷಣೆ ಮಾಡುತ್ತಿರುವ ಪ್ರಾಣಿದಯಾಸಂಘ ಅನಿಮಲ್‌ಕೇರಿಂಗ್‌ಟ್ರಸ್ಟ್ ನಗರಸಭೆಯೊಂದಿಗೆ ಕೈ ಜೋಡಿಸಿ ಸಂತಾನ ಹರಣಚಿಕಿತ್ಸೆ ಮಾಡಬೇಕೆಂದು ಅನೇಕ ವೈದ್ಯರನ್ನು ಸಂಪರ್ಕಿಸಿ ಹಾಸನ ಜಿಲ್ಲೆಯ ವೈದ್ಯರನ್ನುಕರೆಸಲಾಗಿತ್ತುಎಂದಿದ್ದಾರೆ.ಕೆಲವು ವ್ಯಕ್ತಿಗಳ ಕುಮ್ಮಕ್ಕಿನಿಂದ ವೈದ್ಯರಿಗೆ ಹೆದರಿಸಿ ಅವರು ವಾಪಾಸ್ ಹೋಗುವಂತೆ ಮಾಡಿದ್ದಾರೆ.ಸಂತಾನ ಹರಣಚಿಕಿತ್ಸೆಯೇ ಬೀದಿ ನಾಯಿಗಳ ನಿಯಂತ್ರಣಕ್ಕಿರುವಒಂದೇಒಂದುದಾರಿಯೆಂದು ಅನೇಕ ಬಾರಿ ಹೇಳಿದ್ದು, ಬೀದಿ ನಾಯಿಗಳ ನಿಯಂತ್ರಣಕ್ಕೆ ಪ್ರಾಣಿದಯಾ ಸಂಘ ಅಡ್ಡಿಯಾಗುತ್ತಿದೆ ಎಂಬ ಹೇಳಿಕೆ ಸತ್ಯಕ್ಕೆದೂರವಾದದ್ದುಎಂದುಅವರು ಸ್ಪಷ್ಟಪಡಿಸಿದ್ದಾರೆ.

# ಶ್ರೀ ಕೊಪ್ಪದಂಬ ದೇವಿಯ 30ನೇ ವರ್ಷದ ಕೆಂಡದಾರ್ಚನೆ

**ದಾವಣಗೆರೆ:** ಹರಿಹರ ರಸ್ತೆಯಲ್ಲಿರುವ ಶ್ರೀಕ್ಷೇತ್ರ ನವಸ್ಥಾನದ ಶ್ರೀ ಶನೇಶ್ಚರ ಸ್ವಾಮಿಯ ದೇವಸ್ಥಾನದಲ್ಲಿರುವ ಶ್ರೀ ಕೊಪ್ಪದಂಬ ದೇವಿಯ 30ನೇ ವರ್ಷದ ಕೆಂಡದಾರ್ಚನೆಯು ಅ.14ರಂದು ನಡೆಯಲಿದೆ.ಅಂದು ಬೆಳಗ್ಗೆ 9 ಗಂಟೆಗೆ ಕುಂಬೋತ್ಸವ ಹಾಗೂ ರಾಜಬೀದಿಗಳಲ್ಲಿ ಪಲ್ಲಕ್ಕಿಯ ಉತ್ಸವದ ನಂತರ ಬೆಳಗ್ಗೆ 10ಕ್ಕೆ ಕೆಂಡದಾರ್ಚನೆ ನಡೆಯಲಿದೆ. ಇದಕ್ಕೂ ಮುನ್ನಾ ದಿನ ಅ.13ರ ಸೋಮವಾರ ರಾತ್ರಿ ಹರಿಹರದ ತುಂಗಭದ್ರ ನದಿಯಲ್ಲಿ ಗಂಗೆ ಪೂಜೆ, ಎಡೆ ಪೂಜೆ ಸೇರಿದಂತೆ 101 ಪೂಜೆ ಮುಗಿಸಿಕೊಂಡು ನಗರದ ಗ್ರಾಮದೇವತೆಯಾದ ಶ್ರೀ ದುರ್ಗಾಂಬಿಕಾ ದೇವಸ್ಥಾನಕ್ಕೆ ತೆರಳಿ ಪೂಜೆಗೈದು, ಅಲ್ಲಿಂದ ಕುಂಬೋತ್ಸವದೊಂದಿಗೆ ಪ್ರಮುಖ ರಾಜಬೀದಿಗಳಲ್ಲಿ ಪಲ್ಲಕ್ಕಿ ಉತ್ಸವ ನಡೆಯಲಿದೆ. ಪಲ್ಲಕ್ಕಿ ಮೆರವಣಿಗೆಯಿಂದ ಶ್ರೀ ಕ್ಷೇತ್ರ ನವಸ್ಥಾನಕ್ಕೆ ಆಗಮಿಸಿದ ನಂತರ ಕೆಂಡದಾರ್ಚನೆಯ ತರುವಾಯ ಮಧ್ಯಾಹ್ನ 12 ಗಂಟೆಯಿಂದ ಅನ್ನದಾಸೋಹ ನಡೆಯಲಿದೆ ಎಂದು ಶ್ರೀ ಕೊಪ್ಪದಾಂಬ ಟ್ರಸ್ಟ್ ತಿಳಿಸಿದೆ.


**ಮಾನ್ಯ ಸಿವಿಲ್ ಜಡ್ಜ್ ಮತ್ತು ಜೆ. ಎಂ ಎಫ್ ಸಿ ನ್ಯಾಯಾಲಯ ಜಗಳೂರು.**

ಸಿ.ಆರ್.ಮಿಸ್ ನಂ: 820/2025

**ಅರ್ಜಿದಾರರು:**1) ಜಯಮ್ಮ @ ಜಯಬಾಯಿ ಕೋಂ ನಾಗರಾಜನಾಯ್ಕ ವಯಸ್ಸು 55 ವರ್ಷ, ಕೆಲಸ: ಗೃಹಿಣಿ ವಾಸ ಗಾಂಧಿನಗರ, ಜಗಳೂರು ತಾಲ್ಲೂಕು, ಹಾಲಿವಾಸ ಬಸವಾಪುರ ಗ್ರಾಮ,ಬಿಳಿಚೋಡು ಹೋಬಳಿ ಜಗಳೂರು ತಾಲ್ಲೂಕು, ದಾವಣಗೆರೆ ಜಿಲ್ಲೆ 2) ಭಾಗ್ಯಮ್ಮ ಕೋಂ ವೆಂಕಟೇಶನಾಯ್ಕ ವಯಸ್ಸು 50 ವರ್ಷ, ಕೆಲಸ: ಗೃಹಿಣಿ ವಾಸ ಭರಮಸಾಗರ ಗ್ರಾಮ, ಚಿತ್ರದುರ್ಗ ತಾಲ್ಲೂಕು, ಚಿತ್ರದುರ್ಗ ಜಿಲ್ಲೆ 3) ಗಜೇಂದ್ರನಾಯ್ಕ ಬಿನ್ ಕೃಷ್ಣನಾಯ್ಕ ವಯಸ್ಸು 35 ವರ್ಷ, ಕೆಲಸ: ಜಿರಾಯಿತಿ ವಾಸ ಗಾಂಧಿನಗರ ಗ್ರಾಮ, ಜಗಳೂರು ತಾಲ್ಲೂಕು, ದಾವಣಗೆರೆ ಜಿಲ್ಲೆ

**ವಿರುದ್ಧ**

**ಎದುರುದಾರರು** :– ತಹಶೀಲ್ದಾರರು, ತಾಲ್ಲೂಕು ಕಛೇರಿ, ಜಗಳೂರು ಟೌನ್, ಜಗಳೂರು ತಾಲ್ಲೂಕು, ದಾವಣಗೆರೆ ಜಿಲ್ಲೆ.

## ಸಾರ್ವಜನಿಕ ನೋಟಿಸ್

ಮೇಲ್ಕಂಡ ಪ್ರಕರಣವನ್ನು ತಂದೆಯಾದ ಕೃಷ್ಣನಾಯ್ಕ ಬಿನ್ ರಾಮಚಂದ್ರನಾಯ್ಕ ಇವರು ದಿನಾಂಕ:20.12.2004ರಂದು ಜಗಳೂರು ತಾಲ್ಲೂಕು, ಗಾಂಧಿನಗರ ಗ್ರಾಮದ ಅರ್ಜಿದಾರರ ಮನೆಯಲ್ಲಿ ಸ್ವಾಭಾವಿಕವಾಗಿ ತೀರಿ ಕೊಂಡಿದ್ದರಿಂದ ಸದರಿ ಅಂಶವನ್ನು ಎದುರುದಾರರು ನೊಂದಾಯಿಸಿ ಕೊಂಡು ಮರಣ ಸಮರ್ಥನಾ ಪತ್ರವನ್ನು ನೀಡುವಂತೆ ಕೋರಿ, ಅರ್ಜಿ ಸಲ್ಲಿಸಿರುತ್ತಾರೆ. ಸದರಿ ಅರ್ಜಿದಾರರ ಅರ್ಜಿಯನ್ನು ಮಾನ್ಯ ನ್ಯಾಯಾಲಯವು ನೊಂದಾಯಿಸಿಕೊಂಡು ಪ್ರಕರಣವನ್ನು ದಿನಾಂಕ:–17–11–2025ರ ಬೆಳಿಗ್ಗೆ 11.00 ಗಂಟೆಗೆ ವಿಚಾರಣೆಗೆ ನಿಗದಿಪಡಿಸಿದ್ದು ಅರ್ಜಿದಾರರ ಅರ್ಜಿಗೆ ಯಾರಾದರೂ ತಕರಾರು ಇದ್ದಲ್ಲಿ ತಾವಾಗಲೀ, ತಮ್ಮ ಪರ ವಕೀಲರ ಮುಖಾಂತರವಾಗಲೀ, ನಿಗದಿತ ದಿನಾಂಕ ಸಮಯದಂದು ಮೇಲ್ಕಂಡ ನ್ಯಾಯಾಲಯದಲ್ಲಿ ತಮ್ಮ ಅಹವಾಲು ಸಲ್ಲಿಸಬಹುದು. ತಪ್ಪಿದ್ದಲ್ಲಿ ಪ್ರಕರಣವನ್ನು ಏಕಪಕ್ಷೀಯವಾಗಿ ತೀರ್ಮಾನಿಸಲಾಗುವುದು ತಿಳಿಯಿರಿ. ನ್ಯಾಯಾಲಯದ ಅಪ್ಪಣೆಯ ಮೇರೆಗೆ ದಿನಾಂಕ:–13.10.2025ರಂದು ನೀಡಲಾಗಿದೆ.

**ನ್ಯಾಯಾಲಯದ ಅಪ್ಪಣೆಯ ಮೇರೆಗೆ**

**ಅರ್ಜಿದಾರರ ಪರ ವಕೀಲರು**
(ಕೆ.ವಿ ರುದ್ರೇಶ್)

**ಶಿರಸ್ತೇದಾರ್**
ಸಿವಿಲ್ ಜಡ್ಜ್ ಹಾಗೂ ಜೆ. ಎಂ. ಎಫ್. ಸಿ ನ್ಯಾಯಾಲಯ ಜಗಳೂರು.



**ಮಾನ್ಯ ಸಿವಿಲ್ ಜಡ್ಜ್ ಮತ್ತು ಜೆ. ಎಂ ಎಫ್ ಸಿ ನ್ಯಾಯಾಲಯ ಜಗಳೂರು.**

ಸಿ.ಆರ್.ಮಿಸ್ ನಂ: 821/2025

**ಅರ್ಜಿದಾರರು:**1) ಜಯಮ್ಮ @ ಜಯಬಾಯಿ ಕೋಂ ನಾಗರಾಜನಾಯ್ಕ ವಯಸ್ಸು 55 ವರ್ಷ, ಕೆಲಸ: ಗೃಹಿಣಿ ವಾಸ ಗಾಂಧಿನಗರ, ಜಗಳೂರು ತಾಲ್ಲೂಕು, ಹಾಲಿವಾಸ ಬಸವಾಪುರ ಗ್ರಾಮ,ಬಿಳಿಚೋಡು ಹೋಬಳಿ ಜಗಳೂರು ತಾಲ್ಲೂಕು, ದಾವಣಗೆರೆ ಜಿಲ್ಲೆ 2) ಭಾಗ್ಯಮ್ಮ ಕೋಂ ವೆಂಕಟೇಶನಾಯ್ಕ ವಯಸ್ಸು 50 ವರ್ಷ, ಕೆಲಸ: ಗೃಹಿಣಿ ವಾಸ ಭರಮಸಾಗರ ಗ್ರಾಮ, ಚಿತ್ರದುರ್ಗ ತಾಲ್ಲೂಕು, ಚಿತ್ರದುರ್ಗ ಜಿಲ್ಲೆ 3) ಗಜೇಂದ್ರನಾಯ್ಕ ಬಿನ್ ಕೃಷ್ಣನಾಯ್ಕ ವಯಸ್ಸು 35 ವರ್ಷ, ಕೆಲಸ: ಜಿರಾಯಿತಿ ವಾಸ ಗಾಂಧಿನಗರ ಗ್ರಾಮ, ಜಗಳೂರು ತಾಲ್ಲೂಕು, ದಾವಣಗೆರೆ ಜಿಲ್ಲೆ

**ವಿರುದ್ಧ**

**ಎದುರುದಾರರು** :– ತಹಶೀಲ್ದಾರರು, ತಾಲ್ಲೂಕು ಕಛೇರಿ, ಜಗಳೂರು ಟೌನ್, ಜಗಳೂರು ತಾಲ್ಲೂಕು, ದಾವಣಗೆರೆ ಜಿಲ್ಲೆ.

## ಸಾರ್ವಜನಿಕ ನೋಟಿಸ್

ಮೇಲ್ಕಂಡ ಪ್ರಕರಣವನ್ನು ತಾಯಿಯಾದ ಶ್ರೀಮತಿ ಶಾಂತಮ್ಮ ಕೋಂ ಲೇಟ್ ಕೃಷ್ಣನಾಯ್ಕ ಇವರು ದಿನಾಂಕ:03.11.2005ರಂದು ಜಗಳೂರು ತಾಲ್ಲೂಕು, ಗಾಂಧಿನಗರ ಗ್ರಾಮದ ಅರ್ಜಿದಾರರ ಮನೆಯಲ್ಲಿ ಸ್ವಾಭಾವಿಕವಾಗಿ ತೀರಿ ಕೊಂಡಿದ್ದರಿಂದ ಸದರಿ ಅಂಶವನ್ನು ಎದುರುದಾರರು ನೊಂದಾಯಿಸಿ ಕೊಂಡು ಮರಣ ಸಮರ್ಥನಾ ಪತ್ರವನ್ನು ನೀಡುವಂತೆ ಕೋರಿ, ಅರ್ಜಿ ಸಲ್ಲಿಸಿರುತ್ತಾರೆ. ಸದರಿ ಅರ್ಜಿದಾರರ ಅರ್ಜಿಯನ್ನು ಮಾನ್ಯ ನ್ಯಾಯಾಲಯವು ನೊಂದಾಯಿಸಿಕೊಂಡು ಪ್ರಕರಣವನ್ನು ದಿನಾಂಕ:–17–11–2025ರ ಬೆಳಿಗ್ಗೆ 11.00 ಗಂಟೆಗೆ ವಿಚಾರಣೆಗೆ ನಿಗದಿಪಡಿಸಿದ್ದು ಅರ್ಜಿದಾರರ ಅರ್ಜಿಗೆ ಯಾರಾದರೂ ತಕರಾರು ಇದ್ದಲ್ಲಿ ತಾವಾಗಲೀ, ತಮ್ಮ ಪರ ವಕೀಲರ ಮುಖಾಂತರವಾಗಲೀ, ನಿಗದಿತ ದಿನಾಂಕ ಸಮಯದಂದು ಮೇಲ್ಕಂಡ ನ್ಯಾಯಾಲಯದಲ್ಲಿ ತಮ್ಮ ಅಹವಾಲು ಸಲ್ಲಿಸಬಹುದು. ತಪ್ಪಿದ್ದಲ್ಲಿ ಪ್ರಕರಣವನ್ನು ಏಕಪಕ್ಷೀಯವಾಗಿ ತೀರ್ಮಾನಿಸಲಾಗುವುದು ತಿಳಿಯಿರಿ. ನ್ಯಾಯಾಲಯದ ಅಪ್ಪಣೆಯ ಮೇರೆಗೆ ದಿನಾಂಕ:–13.10.2025ರಂದು ನೀಡಲಾಗಿದೆ.

**ನ್ಯಾಯಾಲಯದ ಅಪ್ಪಣೆಯ ಮೇರೆಗೆ**

**ಅರ್ಜಿದಾರರ ಪರ ವಕೀಲರು**
(ಕೆ.ವಿ ರುದ್ರೇಶ್)

**ಶಿರಸ್ತೇದಾರ್**
ಸಿವಿಲ್ ಜಡ್ಜ್ ಹಾಗೂ ಜೆ. ಎಂ. ಎಫ್. ಸಿ ನ್ಯಾಯಾಲಯ ಜಗಳೂರು.

# ಬಾಲಿಯಲ್ಲಿ ಅಂತರರಾಷ್ಟ್ರೀಯ ಚಿರಂತನ ಸಾಂಸ್ಕೃತಿಕ ಉತ್ಸವ










ದಾವಣಗೆರೆ: ಚಿರಂತನ ಸಾಂಸ್ಕೃತಿಕ ಸಂಸ್ಥೆ ಮತ್ತು ಬಾಲಿ ಸರ್ಕಾರದ ಸಹಯೋಗದೊಂದಿಗೆ ಇತ್ತೀಚಿಗೆ ಬಾಲಿಯಲ್ಲಿ ಆಯೋಜಿಸಿದ್ದ ಅಂತರಾಷ್ಟ್ರೀಯ ಸಂಗೀತ ನೃತ್ಯೋತ್ಸವ ವಿಜೃಂಭಣೆಯಿಂದ ನಡೆಯಿತು.

ಅಮೇರಿಕಾ, ಆಸ್ಟ್ರೇಲಿಯಾ, ಮಲೇಶಿಯಾ, ಭಾರತ ಹಾಗೂ ಬಾಲಿ ದೇಶದ 100 ಕ್ಕೂ ಹೆಚ್ಚು ಕಲಾವಿದರು ಭರತನಾಟ್ಯ, ಸಮಕಾಲೀನ ನೃತ್ಯ, ಬಾಲಿಯ ಸಾಂಪ್ರದಾಯಿಕ ನೃತ್ಯಗಳು ಹಾಗೂ ಜಾನಪದ ನೃತ್ಯಗಳನ್ನು ಬಹು ಆಕರ್ಷಕವಾಗಿ ಪ್ರದರ್ಶಿಸಿದರು. ಇಂಡೋನೇಷಿಯಾನ್ ಇನ್ಸ್ಟಿಟ್ಯೂಟ್ ಆಫ್ ಆರ್ಟ್ಸ್ ಯುನಿವರ್ಸಿಟಿಯ ಸಿಟ್ರಾ ಕೆಲಾಂಜೆನ್ ಹಾಲ್ ಸಭಾಂಗಣದಲ್ಲಿ ನಡೆಸ ಈ ಸಾಂಸ್ಕೃತಿಕ ಉತ್ಸವದಲ್ಲಿ ಬಾಲಿಯ 300ಕ್ಕೂ ಹೆಚ್ಚು ಪ್ರೇಕ್ಷಕರು ಪಾಲ್ಗೊಂಡಿದ್ದರು.

ಅಮೇರಿಕದ ಸಂಸ್ಕಾರ್ ಸ್ಕೂಲ್ ಆಫ್ ಡಾನ್ಸ್ ನ ಕಲಾವಿದರು ಕೃಷ್ಣನ ಜೀವನದ ವಿವಿಧ ಮಜಲು ಗಳನ್ನು ಹಾಗೂ ಯಮುನಾ ನದಿಯ ಪ್ರಾಮುಖ್ಯತೆಯನ್ನು ಕುಚುಪುಡಿ ನೃತ್ಯದಲ್ಲಿ ಸುಂದರವಾಗಿ ಬಿಂಬಿಸಿದರು. ಬೆಂಗಳೂರಿನ ಶಿವಪ್ರಿಯ ನೃತ್ಯ ತಂಡದ ಕಲಾವಿದರು ಗಣಪತಿ ವಂದನೆ ಹಾಗೂ ನರಸಿಂಹ ಅವತಾರದ ನೃತ್ಯ ರೂಪಕಗಳನ್ನು ಪ್ರದರ್ಶಿಸಿದರು, ಮಲೇಷಿಯಾದ ಎಸ್. ಬಿ. ಎನ್. ಎ. ಪರ್ಫಾರ್ಮಿಂಗ್ ಆರ್ಟ್ಸ್ ಕಲಾವಿದರು ಈ ನೃತ್ಯ ರೂಪಕದಲ್ಲಿ ಪಾಲ್ಗೊಂಡಿದ್ದರು.ಬೆಂಗಳೂರಿನ ನಟರಾಜ ನೃತ್ಯ ಸಂಸ್ಥೆ ಹಾಗೂ ಆಸ್ಟ್ರೇಲಿಯಾದ ನಾಟ್ಯ ಗೃಹ ಸಂಸ್ಥೆ ಯ ಕಲಾವಿದರು ಭರತನಾಟ್ಯ ಪ್ರಸ್ತುತಿಯನ್ನು ಪ್ರದರ್ಶಿಸಿದರು. ಹಾಸನದ ನೃತ್ಯ ವಿಹಾರ ನೃತ್ಯ ಶಾಲೆಯ ವತಿಯಿಂದ 'ಮೇಳಪಟ್ಟಿ' ವಿಶೇಷ ಭರತನಾಟ್ಯ ಪ್ರದರ್ಶನ ನೀಡಲಾಯಿತು. ಚಿರಂತನ ತಂಡದ ಕಲಾವಿದೆಯರು ಬೇಲೂರಿನ ಶಿಲಾ ಬಾಲಿಕೆಯರ ನೃತ್ಯ ಭಂಗಿಗಳ ವರ್ಣನೆಯನ್ನು ಭರತನಾಟ್ಯ ದ ಮುಖಾಂತರ ತೋರಿಸಿಕೊಟ್ಟರು.

ಹಾಗೂ ಕನ್ನಡದ ಜನಪದ ಗೀತೆಗೆ ಜಾನಪದ ನೃತ್ಯ ಪ್ರದರ್ಶನವನ್ನು ನೀಡಿದರು. ಚಿರಂತನದ ವಿದ್ಯಾರ್ಥಿನಿಯರಾದ ಅದಿತಿ. ಎಂ.ಕೆ , ವೈಷ್ಣವಿ.ಎನ್, ಆದ್ಯ ಆರ್ ಮೀನಿಗಿ , ನವ್ಯ .ವಿ . ರಾಯ್ಕರ್ , ಮತ್ತು ತನುಜ.ಜಿ.ಸಿ ಭಾಗವಹಿಸಿದ್ದರು. ಈ ಕಾರ್ಯಕ್ರಮದಲ್ಲಿ ಬಂದಿದ್ದ ಎಲ್ಲಾ ಗುರುಗಳಿಗೆ ಸನ್ಮಾನ ಮಾಡಲಾಯಿತು. ಬಾಲಿ ಯ ಸೆನೆಟರ್ ಆದ ಡಾ. ಇ ಗುಸ್ತಿನೂರ ಆರ್ಯವೇದಕರ್ಣ ಮಹೇಂದ್ರದತ್ತ ರವರು ಕಾರ್ಯಕ್ರಮದ ಅಧ್ಯಕ್ಷತೆಯನ್ನು ವಹಿಸಿದ್ದರು. ಬಾಲಿಯ ಖ್ಯಾತ ನೃತ್ಯ ಪಟುಗಳನ್ನು ಹಾಗೂ ವಿದ್ವಾಂಸರನ್ನು ಈ ಸಂದರ್ಭದಲ್ಲಿ ಸನ್ಮಾನಿಸಲಾಯಿತು. ಹಾಗೆಯೇ ಇಂಟರ್ನ್ಯಾಷನಲ್ ಎಕ್ಸಲೆನ್ಸ್ ಅವಾರ್ಡ್ಸ್ ಅಡಿಯಲ್ಲಿ ದಾವಣಗೆರೆಯ ಉದ್ಯಮಿ ಹಾಗೂ ಸಮಾಜ ಸೇವಕರಾದ ವಾಸುದೇವ ರಾಯ್ಕರ್ ಅವರನ್ನು ಮತ್ತು ವಕೀಲೆ ಹಾಗೂ ಜೆ ಸಿ ಐ ಸಂಸ್ಥೆಯ ಮುಖ್ಯಸ್ಥರಾದ ಎಂ ಎಸ್ ಅಲಕನಂದ ಅವರನ್ನು ಅಂತರರಾಷ್ಟ್ರೀಯ ಪ್ರಶಸ್ತಿಗಳೊಂದಿಗೆ ಗೌರವಿಸಲಾಯಿತು. ಸಂಸ್ಥೆಯ ಅಧ್ಯಕ್ಷರಾದ ಶ್ರೀಮತಿ ದೀಪ ಎನ್ ರಾವ್ ಹಾಗೂ ಹಾಗೂ ಕಾರ್ಯದರ್ಶಿ ಮಾಧವ್ ಪ್ರಸಾದ್ ಪದಕಿ ಕಾರ್ಯಕ್ರಮದ ಪೂರ್ಣ ಜವಾಬ್ದಾರಿ ಹೊತ್ತಿದ್ದರು.

### ಬಾಪೂಜಿ ನಗರದ ಶ್ರೀರಾಮ ಮಂದಿರದಲ್ಲಿ ಗಣಹೋಮ

## ಬದುಕಿನ ಸಾರ್ಥಕತೆಗೆ ಧರ್ಮಪಾಲನೆ ಅಗತ್ಯ

**ಶಿವಮೊಗ್ಗ:** ಬಾಪೂಜಿನಗರದಲ್ಲಿರುವ ಶ್ರೀರಾಮ ಮಂದಿರದಲ್ಲಿ ಇಂದು ಭಾನುವಾರ ಬೆಳಿಗ್ಗೆ ಲೋಕಕಲ್ಯಾಣಾರ್ಥವಾಗಿ ಗಣಹೋಮ ಹಾಗೂ ಶ್ರೀ ಸತ್ಯನಾರಾಯಣ ಪೂಜೆ ಸಾಂಗವಾಗಿ ನೆರವೇರಿತು.

ಈ ಸಂದರ್ಭದಲ್ಲಿ ಮಾತನಾಡಿದ ನಗರದ ಗಾಂಧಿ ಪಾರ್ಕ್‌ನ ಭುವನೇಶ್ವರಿ ಶೆಟಲ್ ಕಾಕ್ ಸ್ನೇಹಿತರ ಬಳಗದ ಜಿ. ಕೃಷ್ಣಪ್ಪ ಗೌಡ, ಪೂಜೆ– ಹೋಮ, ಪುರಾಣ ಮತ್ತು ಪ್ರವಚನಗಳಿಂದ ಆಸ್ತಿಕರಲ್ಲಿ ಧಾರ್ಮಿಕ ಜಾಗೃತಿ ಮೂಡುತ್ತದೆ. ಮಾನಸಿಕ ನೆಮ್ಮದಿ, ಸುಖ, ಶಾಂತಿಗೆ ಧಾರ್ಮಿಕ ಚಿಂತನೆಗಳು, ಉತ್ತಮ ವಿಚಾರಗಳು ಅಗತ್ಯ ಎಂದು ಪ್ರತಿಪಾದಿಸಿದರು.

ಪುರಾಣ ಕೇಳುವುದರಿಂದ ಒಳ್ಳೆಯ ಆಲೋಚನೆಗಳು ಮೂಡುತ್ತವೆ. ಈ ಮೂಲಕ ನಮ್ಮ ತನು, ಮನ ಶುದ್ಧಿಗೊಳಿಸಿಕೊಳ್ಳಬೇಕು. ಮಾನವ ಜೀವನ ಸಾರ್ಥಕಗೊಳಿಸಲು ಧರ್ಮ ಪರಿಪಾಲನೆ ಮುಖ್ಯವಾಗಿದೆ ಎಂದರು.

ಧಾರ್ಮಿಕವಾಗಿ ಹಾಗೂ ವೈಚಾರಿಕವಾಗಿ ಚಿಂತಿಸದ ಜನರು ಇಂದು ತೊಂದರೆಯಲ್ಲಿ ಸಿಲುಕುತ್ತಿದ್ದಾರೆ. ನಾವು ನಿಂತ ನೆಲ, ಕುಡಿಯುವ ನೀರು, ತಿನ್ನುವ ಅನ್ನ, ಉಸಿರಾಡುವ ಗಾಳಿ, ತಿರುಗಾಡುವ ಭೂಮಿ ದೇವರ ಕೊಡುಗೆಯಾಗಿದೆ. ಅವನ್ನು ಕರುಣಿಸಿದ ಭಗವಂತನ ನೆನಪು ಮರೆಯಬಾರದು. ಧರ್ಮದ ನೀತಿ–ನಿಬಂಧನೆಗಳು ನಮ್ಮನ್ನು



ರಕ್ಷಿಸುತ್ತವೆ. ತಾನು ಎಲ್ಲರಿಗಾಗಿ ಅನ್ನುವುದೇ ನಿಜವಾದ ಧರ್ಮ ಎಂದು ಹೇಳಿದರು.

ಸಮಾಜದಲ್ಲಿ ಧಾರ್ಮಿಕ ಆಚರಣೆಗಳು ಮನಸ್ಸಿಗೆ ಶಾಂತಿ ನೀಡುತ್ತವೆ. ಧಾರ್ಮಿಕ ಕಾರ್ಯಗಳನ್ನು ಸಮಾಜದ ಎಲ್ಲ ವರ್ಗದ ಜನರು ಸೇರಿ ಆಚರಣೆ ಮಾಡಿದಾಗ ಅದಕ್ಕೊಂದು ವಿಶೇಷ ಅರ್ಥ ಬರಲು ಸಾಧ್ಯ. ಧರ್ಮದ ಕಾಯಕದಿಂದ ಒಳ್ಳೆಯ ಫಲ ದೊರೆಯುತ್ತದೆ ಎಂದು ನುಡಿದರು.

ಮಂದಿರಗಳಲ್ಲಿ ನಡೆಯುವ ಧಾರ್ಮಿಕ ಕಾರ್ಯಕ್ರಮಗಳಲ್ಲಿ ಪಾಲ್ಗೊಳ್ಳುವ ಮೂಲಕ ಮಾನಸಿಕ ನೆಮ್ಮದಿ ಪಡೆಯಬಹುದು. ಮಾನವೀಯ ಮೌಲ್ಯಗಳೊಂದಿಗೆ ತೃಪ್ತಿದಾಯಕ ಜೀವನ ನಡೆಸಲು ಸಾಧ್ಯ. ಸಜ್ಜನರ ಸಂಗವು ಆತ್ಮಕಲ್ಯಾಣಕ್ಕೆ ದಾರಿಯಾಗುವುದು. ಭಕ್ತರ ಉದ್ಧಾರಕ್ಕೆ ಗುರುಕರುಣೆ ಮತ್ತು ಉತ್ತಮ ಸಂಸ್ಕಾರಗಳು ಅಗತ್ಯ. ಸ್ವಾರ್ಥ ರಹಿತ ಮತ್ತು ತ್ಯಾಗ ಸಹಿತ ಕಾಯಕದಿಂದ ಜೀವನದಲ್ಲಿ ಶಾಂತಿ ನೆಲೆಸುತ್ತದೆ ಎಂದರು.

ಮನುಷ್ಯ ಆಡಂಬರದ ಬೆನ್ನು ಹತ್ತಿ ಹಾಳಾಗುತ್ತಿದ್ದಾನೆ. ಮನುಷ್ಯನಿಗೆ ಶಾಂತಿ–ನೆಮ್ಮದಿ ಆಧ್ಯಾತ್ಮದಲ್ಲಿ ಮಾತ್ರ ಸಿಗುತ್ತದೆ. ಜಗತ್ತಿನಲ್ಲಿ ಎಲ್ಲರೂ ಹಣ ಗಳಿಸುತ್ತಾರೆ. ಸತ್ಯ ಶುದ್ಧ ಕಾಯಕ ಮಾಡಿ ಹಣ ಗಳಿಸಿದಾಗ ಮಾತ್ರ ಶಾಂತಿ, ನೆಮ್ಮದಿಯಿಂದ ಇರಬಹುದು ಎಂದರು.

ಶ್ರೀರಾಮ ಸೇವಾ ಸಮಿತಿ ಮಹಾಂತೇಶ್, ಸುಬ್ಬಣ್ಣ, ರಾಜಣ್ಣ, ರಾಜು, ದೇವಸ್ಥಾನದ ಅರ್ಚಕ ವೆಂಕಟೇಶ್ ಭಟ್ರು, ಶ್ರೀಧರ್ ಎನ್. ಎಂ., ಲೀಲಾಬಾಯಿ, ದೀಪಾ ಶ್ರೀಧರ್, ಎಂ. ಧೂಳಪ್ಪ ಮತ್ತಿತರರು ಭಾಗವಹಿಸಿದ್ದರು.

## ಚಳಿಗಾಲದಲ್ಲಿ ಭಾರತದೊಳಗೆ ನುಸುಳಲು ಕಾದು ಕುಳಿತ ಉಗ್ರರು, ಗಡಿಯಲ್ಲಿ ಸೇನೆ ಹೈಅಲರ್ಟ್

ಶ್ರೀನಗರ: ಚಳಿಗಾಲದ ಸಮಯದಲ್ಲಿ ಉಗ್ರರ ಒಳನುಸುಳುವಿಕೆ ತಡೆಯುವ ಸಲುವಾಗಿ ಕಾಶ್ಮೀರ ಕಣಿವೆ ಪ್ರದೇಶದಲ್ಲಿ ಭದ್ರತೆ ಬಿಗಿಗೊಳಿಸಲಾಗಿದೆ. ಎಲ್‌ಒಸಿಯಲ್ಲಿ ( ಗಡಿ ನಿಯಂತ್ರಣ ರೇಖೆ) ಉಗ್ರ ಲಾಂಚ್‌ಪ್ಯಾಡ್‌ಗಳು ಸಕ್ರಿಯಗೊಂಡಿರುವ ಹಿನ್ನೆಲೆ ಗಡಿಯುದ್ದಕ್ಕೂ (ಗಡಿ ಭದ್ರತಾ ಪಡೆ) ಕಟ್ಟೆಚ್ಚರ ವಹಿಸಿದೆ. ಹೌದು. ಗುಪ್ತಚರ ವರದಿಗಳ ಪ್ರಕಾರ, ಎಲ್‌ಒಸಿ ಗಡಿಯುದ್ಧಕ್ಕೂ ಹಲವಾರು ಲಾಂಚ್ ಪ್ಯಾಡ್‌ಗಳಲ್ಲಿ ಭಯೋತ್ಪಾದಕರು ಕಣಿವೆಯೊಳಗೆ ನುಸುಳಲು ಕಾಯುತ್ತಿದ್ದಾರೆ.

ಚಳಿಗಾಲದ ಸಂದರ್ಭದಲ್ಲಿ ಇದು ನಡೆಯುತ್ತಿರುತ್ತದೆ. ಹಾಗಾಗಿ ಚಳಿಗಾಲಕ್ಕೂ ಮುನ್ನವೇ ಕಟ್ಟೆಚ್ಚರ ವಹಿಸಲಾಗಿದೆ ಎಂದು ಬಿಎಸ್‌ಎಫ್ ಮೂಲಗಳು ತಿಳಿಸಿವೆ.ಉತ್ತರ ಕಾಶ್ಮೀರದ ಬಂಡಿಪೋರಾ ಜಿಲ್ಲೆಯಲ್ಲಿ ನಡೆದ ವುಲರ್ 2.0 ಮ್ಯಾರಥಾನ್ ವೇಳೆ ಈ ಕುರಿತು ಬಿಎಸ್‌ಎಫ್ ಹೆಚ್ಚುವರಿ ಮಹಾನಿರ್ದೇಶಕ ಸತೀಶ್ ಎಸ್. ಖಂಡ್ರೆ ಮಾತನಾಡಿದರು.

ಚಳಿಗಾಲ ಶುರುವಾಗುತ್ತಿದ್ದಂತೆ ಭಯೋತ್ಪಾದಕರ ಒಳನುಸುಳುವಿಕೆ ಪ್ರಯತ್ನವು ಸಾಮಾನ್ಯವಾಗಿ ಹೆಚ್ಚಾಗುತ್ತದೆ. ಹಾಗಾಗಿ ಗಡಿಯಲ್ಲಿ ಕಣ್ಗಾವಲು ಬಲಪಡಿಸಿದ್ದೇವೆ. ನಮ್ಮ ಸೈನಿಕರು, ಅಧಿಕಾರಿಗಳನ್ನ ಅಲರ್ಟ್ ಮಾಡಿದ್ದೇವೆ. ಗುಪ್ತಚರ ಮಾಹಿತಿಯ ಪ್ರಕಾರ, ಈಗಾಗಲೇ ಗಡಿಯಲ್ಲಿ ಹಲವಾರು



ಭಯೋತ್ಪಾದಕ ಲಾಂಚ್ ಪ್ಯಾಡ್‌ಗಳನ್ನ ಸಕ್ರಿಯಗೊಳಿಸಿದೆ. ಅಲ್ಲಿಂದ ಭಯೋತ್ಪಾದಕರು ಒಳನುಸುಳಲು ತಯಾರಿ ನಡೆಸುತ್ತಿದ್ದಾರೆ.

ಸದ್ಯಕ್ಕೆ ಎಷ್ಟು ಉಗ್ರರು ಇದ್ದಾರೆ ಅನ್ನೋದು ಅಂದಾಜು ಮಾಡುವುದು ಕಷ್ಟ. ಆದ್ರೆ ಕೆಲ ಚಟುವಟಿಕೆಗಳು ಸಕ್ರಿಯಗೊಂಡಿರುವ ಬಗ್ಗೆ ವರದಿ ಬಂದಿದೆ. ಹಾಗಾಗಿ ನಾವು ಗಡಿಯ ಎಲ್ಲಾ ಭಾಗದಲ್ಲು ಸಕ್ರಿಯವಾಗಿದ್ದೇವೆ ಎಂದು ತಿಳಿಸಿದ್ದಾರೆ.

ಗುಪ್ತಚರ ವರದಿ ಬೆನ್ನಲ್ಲೇ ಗಡಿಯಲ್ಲಿ ಭದ್ರತೆ ಬಿಗಿಗೊಳಿಸಲಾಗಿದೆ. ಬಿಎಸ್‌ಎಫ್ ಹಾಗೂ ಭಾರತೀಯ ಸೇನೆ ಸಂಪೂರ್ಣ ಸಿದ್ಧವಾಗಿದ್ದು, ಜಂಟಿಯಾಗಿ ಕಣ್ಗಾವಲು ನಿಯೋಜಿಸಲಾಗಿದೆ. ನಮ್ಮ ಸೈನಿಕರ ಕಣ್ತಪ್ಪಿಸಿ ಬರಲು ಯಾರಿಂದಲೂ ಸಾಧ್ಯವಿಲ್ಲ ಎಂದಿದೆ ಬಿಎಸ್‌ಎಪ್.ಚಳಿಗಾಲದಲ್ಲಿ ಏಕೆ ನುಸುಳುವಿಕೆ ಹೆಚ್ಚಳ?ಚಳಿಗಾಲದಲ್ಲಿ ಹಿಮಪಾತದಿಂದಾಗಿ ಕಾಶ್ಮೀರ ಕಣಿವೆಯಲ್ಲಿ ಅನೇಕ ಮಾರ್ಗಗಳು ಮುಚ್ಚಿಕೊಳ್ಳುತ್ತವೆ. ಇದರ ಉಪಯೋಗ ಪಡೆದುಕೊಳ್ಳುವ ಭಯೋತ್ಪಾದಕರು ಒಳಗೆ ನುಸುಳಲು ಯತ್ನಿಸುತ್ತಾರೆ. ಹೀಗಾಗಿ ಬಿಎಸ್‌ಎಫ್ ಹಗಲು ಮತ್ತು ರಾತ್ರಿ ಕಣ್ಗಾವಲು ಇರಿಸಿದೆ. ಡ್ರೋನ್‌ಗಳನ್ನು ಸಹ ನಿಯೋಜನೆ ಮಾಡಲಾಗಿದೆ.

## ಎತ್ತಿನಬಂಡಿ ಕ್ರೀಡಾ ಆಯೋಜನೆ

**ಗದಗ :** ಯುವ ಸಬಲೀಕರಣ ಮತ್ತು ಕ್ರಿಡಾ ಇಲಾಖೆಗೆ ಸಂಬಂದಿಸಿದಂತೆ ಸನ್ಮಾನ್ಯ ಮುಖ್ಯ ಮಂತ್ರಿಗಳು ತಮ್ಮ 2025/26ನೇಸಾಲಿನ ಆಯವ್ಯಯ ಭಾಷಣದ ಕಂಡಿಕೆ ಸಂಖ್ಯೆ 397ರಲ್ಲಿ ಗ್ರಾಮೀಣ ಕ್ರೀಡೆಗಳನ್ನು ಪೋತ್ಸಾಹಿಸಲು ಹಾಗೂ ಉತ್ತೇಜಿಸಲು ಎತ್ತಿನಬಂಡಿ ಕ್ರಿಡೆಯನ್ನು ರಾಜ್ಯದ ವಿವಿಧ ಜಿಲ್ಲೆಗಳಲ್ಲಿ ಆಯೋಜಿಸುವ 15 ಸಂಘ ಸಂಸ್ಥೆಗಳಿಗೆ ತಲಾ 2 ಲಕ್ಷಗಳಂತೆ ಅನುದಾನ ನೀಡಿ ಪ್ರೋತ್ಸಾಯಿಸಲಾಗುವುದು.

ಗದಗ ಜಿಲ್ಲೆಯಲ್ಲಿ ಎತ್ತನಬಂಡಿ ಕ್ರೀಡೆಯನ್ನು ಆಯೋಜಿಸಲು ಆಸಕ್ತಿಯುಳ್ಳವರು ತಮ್ಮ ಸಂಘ ಸಂಸ್ಥೆಯ ಪೂರ್ಣ ವಿವರವನ್ನು ಸಹಾಯಕ ನಿರ್ದೇಶಕರ ಕಾರ್ಯಾಲಯ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಕೆ.ಎಚ್ ಪಾಟೀಲ ಜಿಲ್ಲಾ ಕ್ರಿಡಾಂಗಣ ಗದಗ ಇಲ್ಲಿಗೆ ದಿನಾಂಕ 16/10/2025 ರೊಳಗಾಗಿ ಪ್ರಸ್ತಾವನೆಯನ್ನು ಸಲ್ಲಿಸಲು ಕೊರಿದೆ.

## ಸಿಎಂ ಸಿದ್ದರಾಮಯ್ಯ ಆಯೋಜಿಸಿರುವ ಸಚಿವರ ಔತಣಕೂಟ

**ಬೆಂಗಳೂರು:** ನಗರ ಸ್ಥಳೀಯ ಸಂಸ್ಥೆಗಳ ಚುನಾವಣೆ ಸಮೀಪಿಸುತ್ತಿರುವುದು, ರಾಜ್ಯ ಸರ್ಕಾರಕ್ಕೆ ಎರಡೂವರೆ ವರ್ಷ ತುಂಬುತ್ತಿರುವ ಹಿನ್ನೆಲೆ ಹಾಗೂ ಸಚಿವ ಸಂಪುಟ ಪುನರ್‌ರಚನೆಯ ಕಾರಣಕ್ಕಾಗಿ ಇಂದು ಸಂಜೆ ನಡೆಯಲಿರುವ ಸಚಿವರ ಔತಣಕೂಟ ಭಾರೀ ಕುತೂಹಲ ಕೆರಳಿಸಿದೆ.

ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಸಂಪುಟದ ಎಲ್ಲಾ ಸಚಿವರಿಗೂ ತಪ್ಪದೇ ಔತಣಕೂಟದಲ್ಲಿ ಭಾಗವಹಿಸಿ ಎಂದು ಆಹ್ವಾನ ನೀಡಿದ್ದಾರೆ. ಮುಖ್ಯಮಂತ್ರಿಯವರು ಇಂದು ಧಾರವಾಡ, ಬಾಗಲಕೋಟೆ ಜಿಲ್ಲಾ ಪ್ರವಾಸ ಮುಗಿಸಿಕೊಂಡು ಸಂಜೆ ನಗರಕ್ಕೆ ವಾಪಸ್ ಆಗಲಿದ್ದಾರೆ.ಈಗಾಗಲೇ ನಿಗದಿತ ಕಾರ್ಯಸೂಚಿಗಳು ಸಿದ್ಧವಾಗಿದ್ದು, ಅದರಂತೆ ಊಟದ ಜೊತೆ ಚರ್ಚೆಗಳು ನಡೆಯಲಿವೆ. ಪ್ರಮುಖವಾಗಿ ರಾಜ್ಯದಲ್ಲಿ ಕೋಮು ಸೌಹಾರ್ಧತೆಯನ್ನು ಹದಗೆಡಿಸಲು ವಿರೋಧ ಪಕ್ಷಗಳು ನಡೆಸುತಿರುವ ನಿರಂತರವಾದ ಸಂಚನ್ನು ಹತ್ತಿಕ್ಕುವುದು, ಇತ್ತೀಚಿನ ದಿನಗಳಲ್ಲಿ ಕೆಲವು ಇಲಾಖೆಗಳಲ್ಲಿನ ಕಾಮಗಾರಿ ಬಿಲ್‌ಗಳನ್ನು ಪಾವತಿಸಲು ಕಮಿಷನ್ ಪಡೆಯಲಾಗುತ್ತಿದೆ ಎಂಬ ಆರೋಪಗಳು ತೀವ್ರವಾಗಿ ಕೇಳಿ ಬರುತ್ತಿದ್ದು, ಅದಕ್ಕೆ ಕಡಿವಾಣ ಹಾಕಲು ಸಿದ್ದರಾಮಯ್ಯ ಅವರು ಸಚಿವರ ಜೊತೆ ಸಮಾಲೋಚನೆ ನಡೆಸಲಿದ್ದಾರೆ ಎಂದು ತಿಳಿದು ಬಂದಿದೆ.

ನಗರ ಸ್ಥಳೀಯ ಸಂಸ್ಥೆಗಳ ಪೈಕಿ ಗ್ರೇಟರ್ ಬೆಂಗಳೂರಿನ 5 ಮಹಾನಗರ ಪಾಲಿಕೆಗಳು, ವಿವಿಧ ನಗರ ಸಭೆಗಳು, ಗ್ರಾಮೀಣ ಸ್ಥಳೀಯ ಸಂಸ್ಥೆಗಳ ಪೈಕಿ ಜಿಲ್ಲಾ ಪಂಚಾಯತ್, ತಾಲ್ಲೂಕು ಪಂಚಾಯತ್ ಚುನಾವಣೆಗಳು ರಾಜ್ಯ ಸರ್ಕಾರಕ್ಕೆ ಸವಾಲಿನ ಸನ್ನಿವೇಶ ಸೃಷ್ಟಿಸಿವೆ.

ಈ ಹಿನ್ನೆಲೆಯಲ್ಲಿ ಪ್ರತಿಯೊಬ್ಬ ಸಚಿವರಿಗೂ ನಿರ್ದಿಷ್ಟ ಜವಾಬ್ದಾರಿಗಳನ್ನು ಹಂಚಲು ಸಿದ್ದರಾಮಯ್ಯ ಮುಂದಾಗಿದ್ದಾರೆ. ಸ್ಥಳೀಯ ಸಂಸ್ಥೆಗಳು ಪಕ್ಷದ ತಳಪಾಯವಾಗಿದ್ದು, ಕೆಳ ಹಂತದ ನಾಯಕತ್ವವನ್ನು ಬೆಳೆಸಲು ಹೆಚ್ಚು ಮಹತ್ವ ಪಡೆದುಕೊಂಡಿದೆ.

ಹೀಗಾಗಿ ಆಯಾ ಜಿಲ್ಲಾ ಉಸ್ತುವಾರಿ ಸಚಿವರು ಜವಾಬ್ದಾರಿ ತೆಗೆದುಕೊಂಡು ಜಿಲ್ಲೆಯ ಜನಪ್ರತಿನಿಧಿಗಳು ಮತ್ತು ಸಚಿವರ ವಿಶ್ವಾಸದೊಂದಿಗೆ ಚುನಾವಣಾ ರಣತಂತ್ರವನ್ನು ರೂಪಿಸಬೇಕು. ಅಭ್ಯರ್ಥಿಗಳ ಆಯ್ಕೆ ಸಂದರ್ಭದಲ್ಲಿ ಗೊಂದಲಗಳಾಗದಂತೆ ಎಚ್ಚರಿಕೆ ವಹಿಸಬೇಕೆಂದು ಸೂಚಿಸಲಿದ್ದಾರೆ ಎಂದು ತಿಳಿದು ಬಂದಿದೆ.

ಕೆಪಿಸಿಸಿ ಅಧ್ಯಕ್ಷ ಡಿ.ಕೆ.ಶಿವಕುಮಾರ್ ಅವರ ಬಣ ನಾಯಕತ್ವ ಬದಲಾವಣೆ ಬಗ್ಗೆ ವ್ಯಾಪಕ ಚರ್ಚೆ ಮಾಡುತ್ತಿದ್ದು ಕೆಲ ಸಚಿವರು ಇದಕ್ಕೆ ಸಂಬಂಧಪಟ್ಟಂತೆ ಪ್ರತಿಕ್ರಿಯೆ ನೀಡುತ್ತಿರುವುದರಿಂದ ಗೊಂದಲಗಳು ಸೃಷ್ಟಿಯಾಗುತ್ತಿವೆ.

ಯಾವುದೇ ಹಂತದಲ್ಲೂ ಸಚಿವರು ಅಧಿಕಾರ ಹಂಚಿಕೆಯ ಬಗ್ಗೆ ಪ್ರತಿಕ್ರಿಯಿಸಬಾರದು. ಅಭಿವೃದ್ಧಿ ಕಾರ್ಯಗಳತ್ತ ಮಾತ್ರ ಗಮನ ಹರಿಸಬೇಕೆಂದು ಎಚ್ಚರಿಕೆ ನೀಡಲಿದ್ದಾರೆ.

# ಟಾಟಾ ಟ್ರಸ್ಟ್‌ನಲ್ಲಿ ಒಳಜಗಳ

## ಟಾಟಾ ಮತ್ತು ಮಿಸ್ತ್ರಿ ನೇತೃತ್ವದಲ್ಲಿ ಎರಡು ಗುಂಪುಗಳಾಗಿರುವ ಟಾಟಾ ಟ್ರಸ್ಟ್

**ನವದೆಹಲಿ:** ದೇಶದ ಅತ್ಯಂತ ಮೌಲ್ಯಯುತವಾದ ಉದ್ಯಮ ಸಮೂಹದ ಮೇಲೆ ನಿಯಂತ್ರಣ ಹೊಂದಿರುವ ಟಾಟಾ ಟ್ರಸ್ಟ್ ಟ್ರಸ್ಟಿಗಳ ನಡುವೆ ಸಂಘರ್ಷ ಶುರುವಾಗಿದೆ. ಆಡಳಿತಕ್ಕೆ ಸಂಬಂಧಿಸಿದ ವಿಚಾರಗಳು, ಆಡಳಿತ ಮಂಡಳಿಯ ನೇಮಕಾತಿಗಳು ಇದಕ್ಕೆ ಕಾರಣ ಎಂದು ಮೂಲಗಳು ಹೇಳಿವೆ.

ಟಾಟಾ ಸಮೂಹದ ಕಂಪನಿಗಳ ಮಾಲೀಕತ್ವ ಹೊಂದಿರುವ ಟಾಟಾ ಸನ್ಸ್‌ನಲ್ಲಿ ಟಾಟಾ ಟ್ರಸ್ಟ್, ಶೇಕಡ 66ರಷ್ಟು ಪಾಲು ಹೊಂದಿ ಹಾದ

ಟ್ರಸ್ಟ್ ನಲ್ಲಿ ಎರಡು . ಗುಂಪುಗಳಾಗಿವೆ, ಒಂದು ಗುಂಪು ಟ್ರಸ್ಟ್‌ನ ಅಧ್ಯಕ್ಷ ನೋಯಲ್ ಟಾಟಾ ಅವರೊಂದಿಗೆ ಗುರುತಿಸಿಕೊಂಡಿದೆ. ನಾಲ್ಕು ಮಂದಿ ಟ್ರಸ್ಟಿಗಳ ಇನ್ನೊಂದು ಗುಂಪು ಮೆಹಿ ಮಿಸ್ತ್ರಿ ಅವರೊಂದಿಗೆ ಗುರುತಿಸಿಕೊಂಡಿದೆ ಎಂದು ಮೂಲಗಳು ಹೇಳಿವೆ.

ಅವರು ಶಾಪೂರ್ಜಿ ಪಲ್ಲೊಂಜಿ ಕುಟುಂಬದ ಜೊತೆ ನಂಟು ಹೊಂದಿದ್ದಾರೆ. ಈ ಕುಟುಂಬವು ಟಾಟಾ ಸನ್ಸ್‌ನಲ್ಲಿ ಶೇ 18.37ರಷ್ಟು ಷೇರುಪಾಲು ಹೊಂದಿದೆ. ಪ್ರಮುಖ ವಿಚಾರಗಳಲ್ಲಿ ತಮಗೆ ಮಾಹಿತಿ ಒದಗಿಸುತ್ತಿಲ್ಲ ಎಂದು ಮಿಸ್ತ್ರಿ ಅವರು ಭಾವಿಸಿದ್ದಾರೆ ಎನ್ನಲಾಗಿದೆ.

ಬಿಕ್ಕಟ್ಟು ಶುರುವಾಗಲು ಮೂಲ ಕಾರಣ ಟಾಟಾ ಸನ್ಸ್‌ನ ಮಂಡಳಿಯ ಸ್ಥಾನಎಂದು ಮೂಲವೊಂದು ತಿಳಿಸಿದೆ. ಟಾಟಾ ಸಮೂಹದ ಸರಿಸುಮಾರು 400 ಕಂಪನಿಗಳ ಮೇಲೆ ಟಾಟಾ ಸನ್ಸ್ ನಿಯಂತ್ರಣ ಹೊಂದಿದೆ. ರೂ 400 ಕಂಪನಿಗಳಲ್ಲಿ 30 ಕಂಪನಿಗಳು ಷೇರುಪೇಟೆಯಲ್ಲಿ ನೋಂದಾಯಿತವಾಗಿವೆ.

ಟಾಟಾ ಟ್ರಸ್ಟ್‌ನ ಅರು ಮಂದಿ ಟ್ರಸ್ಟಿಗಳ ಸಭೆಯೊಂದರಲ್ಲಿ ಬಿಕ್ಕಟ್ಟು ಶುರುವಾಯಿತು. ಎಂಬುದು ದಾನ ಕಾರ್ಯದಲ್ಲಿ ತೊಡಗಿರುವ ಹಲವು ಟ್ರಸ್ಟ್‌ಗಳ ಒಕ್ಕೂಟದಂತಿದೆ. ಸೆಪ್ಟೆಂಬರ್ 11ರಂದು ನಡೆದ ಈ ಸಭೆಯು ಟಾಟಾ ಸನ್ಸ್ ಆಡಳಿತ ಮಂಡಳಿಗೆ ವಿಜಯ್ ಅವರನ್ನು ಮರುನೇಮಕ ಪರಿಗಣಿಸುವ

### ಕೇಂದ್ರ ಸರ್ಕಾರದ ಮಧ್ಯ ಪ್ರವೇಶ?

ಟಾಟಾ ಟ್ರಸ್ಟ್ ನಲ್ಲಿನ ಒಳಜಗಳವು ಉದ್ಯಮ ಸಮೂಹದ ಕೆಲಸಗಳ ಮೇಲೆ ಪರಿಣಾಮ ಉಂಟುಮಾಡುವ ಭೀತಿ ಎದುರಾಗಿರುವ ಕಾರಣದಿಂದಾಗಿ ಕೇಂದ್ರ ಸರ್ಕಾರದ ಮಧ್ಯಪ್ರವೇಶವು ಅನಿವಾರ್ಯವಾಗಿದೆ ಎಂದು ಮೂಲಗಳು ಹೇಳಿವೆ.

'ಟಾಟಾ ಸಮೂಹವು ದೇಶದ ಅರ್ಥವ್ಯವಸ್ಥೆಯ ಪಾಲಿಗೆ ಎಷ್ಟೊಂದು ಮಹತ್ವದ್ದು ಎಂಬುದನ್ನು ಪರಿಗಣಿಸಿದಾಗ, ಒಬ್ಬ ವ್ಯಕ್ತಿಗೆ ಅದರ ಮೇಲೆ ನಿಯಂತ್ರಣ ಸಾಧಿಸಲು ಅವಕಾಶ ನೀಡಬಹುದೇ ಎಂಬುದು ಸರ್ಕಾರದ ಮುಂದಿರುವ ಮುಖ್ಯ ಪ್ರಶ್ನೆಯಾಗಿದೆ' ಎಂದು ಮೂಲವೊಂದು ಹೇಳಿದೆ.

ಟಾಟಾ ಸನ್ಸ್ ಕಂಪನಿಯನ್ನು ಸೆಪ್ಟೆಂಬರ್ 30ಕ್ಕೆ ಮೊದಲು ಷೇರುಪೇಟೆಯಲ್ಲಿ ನೋಂದಾಯಿಸಬೇಕು ಎಂದು ಆರ್‌ಬಿಐಗಡುವು ವಿಧಿಸಿತ್ತು, ಆದರೆ, ಇದರಿಂದ ವಿನಾಯಿತಿ ನೀಡುವಂತೆ ಕೋರಿ ಟಾಟಾಸನ್ಸ್ ಅರ್ಜಿ ಸಲ್ಲಿಸಿದ್ದು, ಅದು ಆರ್‌ಬಿಐ ಪರಿಶೀಲನೆಯಲ್ಲಿದೆ.

ಮಹಿ ಮಿಸ್ತ್ರಿ ನೇತೃತ್ವದಲ್ಲಿ ನಾಲ್ಕು ಮಂದಿ ಟ್ರಸ್ಟಿಗಳು, ಟಾಟಾ ಟ್ರಸ್ಟ್‌ನಲ್ಲಿ ನೋಯಲ್ ಟಾಟಾ ಅವರ ನಾಯಕತ್ವದ ಮಹತ್ವವನ್ನು ಕುಗ್ಗಿಸಲು ಯತ್ನಿಸುತ್ತಿದ್ದಾರೆ ಎಂದು ಸಮೂಹದಲ್ಲಿ ಕೆಲವರು ಭಾವಿಸಿದ್ದಾರೆ.

ನೋಯಲ್ ಟಾಟಾ, ಎನ್.ಚಂದ್ರಶೇಖರನ್ ಅವರು ಕೇಂದ್ರ ಗೃಹ ಸಚಿವ ಅಮಿತ್ ಶಾ ಮತ್ತು ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಅವರನ್ನು ಮಂಗಳವಾರ ಭೇಟಿ ಮಾಡಿದ್ದಾರೆ.ವೇಣು ಶ್ರೀನಿವಾಸನ್, ಡೇರಿಯಸ್ ಖಂಬಾಟ ಅವರೂ ಈ ಭೇಟಿ ವೇಳೆ ಜೊತೆಗಿದ್ದರು.

ಹೊಂದಿತ್ತು. ನಿರ್ದೇಶಕರನ್ನಾಗಿ ಮಾಡುವುದನ್ನು ಕಾರ್ಯಸೂಚಿಯನ್ನು ಟಾಟಾ ಟ್ರಸ್ಟ್‌ನಲ್ಲಿ ಏಳು ಮಂದಿ ಟ್ರಸ್ಟಿ ಗಳು ಇದ್ದಾರೆ.ಸಿಂಗ್ ಅವರೂ ಒಬ್ಬಟ್ರಸ್ಟಿ,

ಸಿಂಗ್ ಅವರ ಮರುನೇಮಕದ ಪ್ರಸ್ತಾವವನ್ನು ಟ್ರಸ್ಟ್‌ನ ಅಧ್ಯಕ್ಷ ನೋಯಲ್ ಟಾಟಾ ಮತ್ತು ವೇಣು ಶ್ರೀನಿವಾಸನ್ (ಟಿವಿಎಸ್ ಸಮೂಹದ

ಗೌರವಾಧ್ಯಕ್ಷ) ಅವರು ಸಭೆಯಲ್ಲಿ ಮಂಡಿಸಿದರು. ಆದರೆ ಇದಕ್ಕೆ ಮೆಹಿ ಮಿಸ್ತ್ರಿ, ಪ್ರಮಿತ್ ಝಾವರಿ, ಜೆಹಾಂಗಿರ್ ಎಚ್‌ಸಿ ಜೆಹಾಂಗಿರ್ ಮತ್ತು ಡೇರಿಯಸ್ ಖಂಬಾಟ ವಿರೋಧ ವ್ಯಕ್ತಪಡಿಸಿದರು. ಹೀಗಿ ಪ್ರಸ್ತಾವ ತಿರಸ್ಕೃತಗೊಂಡಿತು.

ಇದಾದ ನಂತರ ನಾಲ್ಕು ಮಂದಿ ಟ್ರಸ್ಟಿಗಳು ಮೆಹಿ ಮಿಸ್ತ್ರಿ ಅವರನ್ನು ಟಾಟಾ ಸನ್ಸ್ ಆಡಳಿತ ಮಂಡಳಿಗೆ ನೇಮಕ ಮಾಡುವ ಪ್ರಸ್ತಾವ ಮಂಡಿಸಿದರು. ಆದರೆ ಇದಕ್ಕೆ ನೋಯಲ್ ಟಾಟಾ

ಮತ್ತು ವೇಣು ಶ್ರೀನಿವಾಸನ್ ವಿರೋಧ ದಾಖಲಿಸಿದರು. ನಂತರದಲ್ಲಿ ಸಿಂಗ್ ಅವರು 653650 ಆಡಳಿತ ಮಂಡಳಿಗೆ ರಾಜೀನಾಮೆ ನೀಡಿದರು.

ಟಾಟಾ ಟ್ರಸ್ಟ್‌ನ ಇನ್ನೊಂದು ಸಭೆಯು ಇದೇ 10ರಂದು ನಡೆಯಲಿದೆ.

ಅದರ ಕಾರ್ಯಸೂಚಿ ಗೊತ್ತಾಗಿಲ್ಲ. ಈ ಕುರಿತು ಪ್ರತಿಕ್ರಿಯಿಸಲು ಟಾಟಾ ಟ್ರಸ್ಟ್, ಟಾಟಾ ಸನ್ಸ್ ನಿರಾಕರಿಸಿವೆ. ವೇಣು ಶ್ರೀನಿವಾಸನ್, ಮೆಹ್ಲಿ ಮಿಸ್ತ್ರಿ ಅವರಿಂದ ಪ್ರತಿಕ್ರಿಯೆ ಸಿಕ್ಕಿಲ್ಲ.

## ಕಿಲ್ಲರ್ ಕಫ್ ಸಿರಪ್ ಪ್ರಕರಣದ ಬೆನ್ನು ಬಿದ್ದ ಇಡಿ

**ಚೆನ್ನೈ :** ಮಧ್ಯಪ್ರದೇಶದಲ್ಲಿ ಮಕ್ಕಳ ಸಾವಿಗೆ ಕಾರಣವಾದ ಕೋಲ್ಡ್ರಿಫ್ ಕೆಮ್ಮಿನ ಸಿರಪ್ ತಯಾರಕರಾದ ಶ್ರೀ ಸ್ರಿಸನ್ ಫಾರ್ಮಾಸ್ಯುಟಿಕಲ್ಸ್ ಮತ್ತು ತಮಿಳುನಾಡಿನ ಎಫ್‌ಡಿಎಯ ಉನ್ನತ ಅಧಿಕಾರಿಗಳಿಗೆ ಸಂಬಂಧಿಸಿದ ಸ್ಥಳಗಳ ಮೇಲೆ ಇಡಿ ಇಂದು ದಾಳಿ ನಡೆಸಿದೆ ಎಂದು ಅಧಿಕೃತ ಮೂಲಗಳು ತಿಳಿಸಿವೆ.

ಚೆನ್ನೈನಲ್ಲಿ ಕನಿಷ್ಠ ಏಳು ಸ್ಥಳಗಳನ್ನು ಹಣ ವರ್ಗಾವಣೆ ತಡೆ ಕಾಯ್ದೆ (ಪಿಎಂಎಲ್‌ಎ) ಅಡಿಯಲ್ಲಿ ಜಾರಿ ನಿರ್ದೇಶನಾಲಯವು ಒಳಗೊಳ್ಳುತ್ತದೆ ಎಂದು ತಿಳಿದುಬಂದಿದೆ. ಮಧ್ಯಪ್ರದೇಶ ಮತ್ತು ತಮಿಳುನಾಡಿನಲ್ಲಿ ಸ್ರಿಸನ್ ಫಾರ್ಮಾಸ್ಯುಟಿಕಲ್ ವಿರುದ್ಧ ದಾಖಲಾಗಿರುವ ಪೊಲೀಸ್ ದೂರುಗಳನ್ನು ಗಮನದಲ್ಲಿಟ್ಟುಕೊಂಡು ಫೆಡರಲ್ ತನಿಖಾ ಸಂಸ್ಥೆ ಹಣ ವರ್ಗಾವಣೆ ವಿರೋಧಿ ಕಾನೂನಿನಡಿಯಲ್ಲಿ ಕ್ರಿಮಿನಲ್ ಪ್ರಕರಣವನ್ನು ದಾಖಲಿಸಿದ ನಂತರ ಈ ಕ್ರಮ ಕೈಗೊಳ್ಳಲಾಗಿದೆ.ಮಧ್ಯಪ್ರದೇಶದಲ್ಲಿ ಐದು ವರ್ಷದೊಳಗಿನ ಕನಿಷ್ಠ 22 ಮಕ್ಕಳು ಕೋಲ್ಡ್ರಿಫ್ ನೀಡಿದ ನಂತರ ಸಾವನ್ನಪ್ಪಿದ್ದಾರೆ.2011 ರಲ್ಲಿ ತಮಿಳುನಾಡು ಆಹಾರ ಮತ್ತು ಔಷಧ ಆಡಳಿತ (ಟಿಎನ್‌ಎಫ್‌ಡಿಎ) ಪರವಾನಗಿ ಪಡೆದ ಕಾಂಚೀಪುರಂ ಮೂಲದಸ್ರಿಸನ್ ಫಾರ್ಮಾಸ್ಯುಟಿಕಲ್ಸ್ , ಅದರ ಕಳಪೆ ಮೂಲಸೌಕರ್ಯ ಮತ್ತು ರಾಷ್ಟ್ರೀಯ ಔಷಧ ಸುರಕ್ಷತಾ ನಿಯಮಗಳ ಬಹು ಉಲ್ಲಂಘನೆಗಳ ಹೊರತಾಗಿಯೂ ಒಂದು ದಶಕಕ್ಕೂ ಹೆಚ್ಚು ಕಾಲ ಅನಿಯಂತ್ರಿತವಾಗಿ ಕಾರ್ಯಾಚರಣೆಗಳನ್ನು ಮುಂದುವರೆಸಿದೆ ಎಂದು ಕೇಂದ್ರ ಔಷಧ ಗುಣಮಟ್ಟ ನಿಯಂತ್ರಣ ಸಂಸ್ಥೆ (ಸಿಡಿಎಸ್‌ಸಿಒ) ತಿಳಿಸಿದೆ.ಕೆಮ್ಮಿನ ಸಿರಪ್‌ನಲ್ಲಿ ಡೈಥಿಲೀನ್ ಗ್ಲೈಕಾಲ್ ಎಂಬ ವಿಷಕಾರಿ ವಸ್ತುವನ್ನು ಅಪಾಯಕಾರಿಯಾಗಿ ಕಲಬೆರಕೆ ಮಾಡಿರುವುದು ಕಂಡುಬಂದಿದೆ.ಸ್ರೆಸನ್ ಫಾರ್ಮಾಸ್ಯುಟಿಕಲ್‌ನ ಮಾಲೀಕ ಜಿ ರಂಗನಾಥನ್ ಅವರನ್ನು ಅಕ್ಟೋಬರ್ 9 ರಂದು ಮಧ್ಯಪ್ರದೇಶ ಪೊಲೀಸರು ಬಂಧಿಸಿದರು.ಮಕ್ಕಳ ಸಾವಿನ ನಂತರ, ಮಧ್ಯಪ್ರದೇಶ ಸರ್ಕಾರ ಇಬ್ಬರು ಡ್ರಗ್ ಇನ್ಸ್ ಪೆಕ್ಟರ್‌ಗಳು ಮತ್ತು ಯ ಉಪ ನಿರ್ದೇಶಕರನ್ನು ಅಮಾನತುಗೊಳಿಸಿತು.ರಾಜ್ಯದ ಡ್ರಗ್ ಕಂಟ್ರೋಲರ್ ಅನ್ನು ವರ್ಗಾಯಿಸಿ, ಸಾವಿನ ಬಗ್ಗೆ ತನಿಖೆಗೆ ಆದೇಶಿಸಿತು, ಆದರೆ ಪೊಲೀಸರು ನಿರ್ಲಕ್ಷ್ಯದ ಆರೋಪದ ಮೇಲೆ ಚಿಂದ್ವಾರ ಜಿಲ್ಲೆಯ ವೈದ್ಯರನ್ನು ಬಂಧಿಸಿದರು.

# ಕರ್ಮ ಸಿದ್ಧಾಂತದ ಸೇಡಿನ ವ್ಯಥೆ

## 17೦ ಕಾವೇರಿ ಎಕ್ಸ್‌ಪ್ರೆಸ್ ಬಸ್ ದುರಂತದ ಕಥೆ

ನಂದೀಶ್ ನಿರ್ದೇಶನದ ರಿಷಿ ಅಭಿನಯದ ಪೌರಾಣಿಕ ಹಿನ್ನೆಲೆ ಕಥೆಯುಳ್ಳ ರುದ್ರ ಗರುಡ ಪುರಾಣ ಸಿನಿಮಾ ರಿಲೀಸ್ ಆಗಿದೆ. ಪೊಲೀಸ್ ಅಧಿಕಾರಿಯ ಪಾತ್ರದಲ್ಲಿ ನಟ ರಿಷಿ ತಮ್ಮ ವಿಶಿಷ್ಟ ಅಭಿನಯದ ಮೂಲಕ ಪ್ರೇಕ್ಷಕರನ್ನು ಮಂತ್ರ ಮುಗ್ಧರನ್ನಾಗಿಸಿದ್ದಾರೆ. ಮೇಲ್ನೋಟಕ್ಕೆ ಸಿನಿಮಾ ಪೊಲೀಸ್ ಕಥೆ ಎಂದಂತೆ ಕಂಡು ಬರುತ್ತದೆ, ಆದರೆ ಈ ಸಿನಿಮಾದಲ್ಲಿ ಮಾಟ-ಮಂತ್ರ, ಸಸ್ಪೆನ್ಸ್ ಥ್ರಿಲ್ಲರ್ ಜೊತೆಗೆ ಹಾಸ್ಯ ಮಿಳಿತವಾಗಿದೆ.

ರುದ್ರ (ಋಷಿ), ಎಂಬ ಪೊಲೀಸ್ ಅಧಿಕಾರಿ ತನ್ನ ನೇರ ಹಾಗೂ ಪ್ರಾಮಾಣಿಕ ಕೆಲಸದಿಂದಾಗಿ ಹಲವು ಕಡೆ ವರ್ಗಾವಣೆಯಾಗುತ್ತಾನೆ. ತನ್ನ ದಿಟ್ಟ ಕರ್ತವ್ಯ ನಿರ್ವಹಣೆಯಿಂದಾಗಿ ಇಲಾಖೆಯ ಹಿರಿಯ ಅಧಿಕಾರಿಗಳ ಜೊತೆ ವೈಮನಸ್ಯ ಕೂಡ ಬೆಳೆಯುತ್ತದೆ. ಅಂತಿಮವಾಗಿ ರುದ್ರನನ್ನು ಬೆಂಗಳೂರಿನಿಂದ ಮೈಸೂರಿಗೆ ವರ್ಗಾಯಿಸಲಾಗುತ್ತದೆ. ಆದರೆ ತನ್ನ ವೃತ್ತಿಯಲ್ಲಿ ಹಿನ್ನಡೆಯಾಗಿದ್ದಕ್ಕೆ ರುದ್ರ ಬೇಸರಗೊಳ್ಳುವುದಿಲ್ಲ ತನ್ನ ಕರ್ತವ್ಯವನ್ನು ನಿಷ್ಠೆಯಿಂದಲೇ ಮಾಡುತ್ತಿರುತ್ತಾನೆ. ರೇಪಿಸ್ಟ್ ಒಬ್ಬನನ್ನು ಎನ್ ಕೌಂಟರ್ ಮಾಡಿದ್ದಕ್ಕೆ ಶಿಕ್ಷೆಯಾಗಿ, ಪೊಲೀಸ್ ಬ್ಯಾಂಕ್ ಗೆ ವರ್ಗಾವಣೆ ಮಾಡಲಾಗುತ್ತದೆ. ಮಾಡುವುದಕ್ಕೆ ಸೂಕ್ತವಾದ ಕೆಲಸವಿಲ್ಲದೆ ಒದ್ದಾಡುವ ರಿಷಿಗೆ, ಒಂದು ಜವಾಬ್ದಾರಿಯನ್ನು ವಹಿಸುತ್ತಾರೆ ಅವನ ಮೇಲಧಿಕಾರಿ. ಸಚಿವ ದೇವಿ ಶೆಟ್ಟಿಯ (ವಿನೋದ್ ಆಳ್ವ) ಮಗ ನಿಗೂಢವಾಗಿ ನಾಪತ್ತೆಯಾಗಿದ್ದು, ಆತನನ್ನು ಹುಡುಕುವ ಕೆಲಸವನ್ನು ಅವನ ಮೇಲೆ ಹೊರಿಸಲಾಗುತ್ತದೆ. ನಾಪತ್ತೆಯಾದ ಯುವಕ ಹೋಗಿದ್ದೆಲ್ಲಿಗೆ? ಈ ಕೇಸಿನಲ್ಲಿ ರಿಷಿ ಏನೆಲ್ಲಾ ಸವಾಲುಗಳನ್ನು ಎದುರಿಸುತ್ತಾನೆ ಎನ್ನುವುದು ಚಿತ್ರದ ಕಥೆ.

ಶಾಸಕ ದೇವಿ ಶೆಟ್ಟಿ (ವಿನೋದ್ ಆಳ್ವಾ) ಅವರ ಕಾಣೆಯಾದ ಮಗ ಮನು (ಆಕರ್ಷ್) ಅವರನ್ನು ಪತ್ತೆಹಚ್ಚಲು ರುದ್ರನನ್ನು ಅನಧಿಕೃತವಾಗಿ ನಿಯೋಜಿಸಿದಾಗ ಕಥೆಗೆ ಪ್ರಮುಖ ತಿರುವು ಸಿಗುತ್ತದೆ. ನಾಪತ್ತೆಯಾದ ವ್ಯಕ್ತಿಯನ್ನು ಹುಡುಕಲು ಹೋದ ರುದ್ರನ ತನಿಖೆಯಲ್ಲಿ 25 ವರ್ಷಗಳ ಹಿಂದಿನ 17೦



ಕಾವೇರಿ ಎಕ್ಸ್‌ಪ್ರೆಸ್ ಬಸ್‌ನ ನಿಗೂಢತೆಗೆ ಸಂಬಂಧಿಸಿದ ರಹಸ್ಯಗಳನ್ನು ಬಿಚ್ಚಿಡುತ್ತದೆ. ಈ ದೀರ್ಘಕಾಲ ಮರೆತುಹೋದ ದುರಂತದಲ್ಲಿ, ಚಾಲಕ ಸೇರಿದಂತೆ ಬಸ್ ನಲ್ಲಿದ್ದ ಎಲ್ಲರೂ ಅನುಮಾನಾಸ್ಪದವಾಗಿ ಸಾವನ್ನಪ್ಪಿರುತ್ತಾರೆ. ಅಲ್ಲಿಂದ ಕತೆಗೆ ಮತ್ತೊಂದು ಟ್ವಿಸ್ಟ್ ಸಿಗುತ್ತದೆ. 25 ವರ್ಷಗಳ ಹಿಂದೆ ನಡೆದ ಘಟನೆಗೂ, ಇದಕ್ಕೂ ಏನು ಸಂಬಂಧ? ಯಾವುದಾದರೂ ಅಗೋಚರ ಶಕ್ತಿ ಇದನ್ನೆಲ್ಲಾ ಮಾಡಿಸುತ್ತಿದೆಯಾ? ಉತ್ತರ ಗೊತ್ತಾಗಬೇಕಿದ್ದರೆ, 'ರುದ್ರ ಗರುಡ ಪುರಾಣ' ನೋಡಬೇಕು. ಆರಂಭದಲ್ಲಿ ತನಿಖೆಯಿಂದ ಶುರುವಾಗಿ ಕೊನೆ ಕೊನೆಗೆ ರಿವೇಂಜ್ ದಾರಿಯಲ್ಲಿ ಹೆಜ್ಜೆ ಇಟ್ಟು, ಆ ಪ್ರತೀಕಾರಕ್ಕಿರುವ ಪರಿಣಾಮಕಾರಿ ಫ್ಲ್ಯಾಷ್ ಬ್ಯಾಕ್ ಕತೆ ತೆರೆದುಕೊಳ್ಳುತ್ತದೆ.

ಒಂದೊಂದೆ ಗಂಟು ಬಿಡಿಸುತ್ತಾ ಹೋಗುವಾಗ, ಪ್ರೇಕ್ಷಕನಲ್ಲಿ ರೋಚಕ, ರೋಮಾಂಚಕ ಅನುಭವ ಆಗದೇ ಇರಲು ಸಾಧ್ಯವಿಲ್ಲ. ಅಷ್ಟರಮಟ್ಟಿಗೆ ಚಿತ್ರಕಥೆಯನ್ನು ಬಲವಾಗಿ ಹೆಣೆಯಲಾಗಿದೆ. ಚಿತ್ರದಲ್ಲಿ ಬರುವ ಉಪಕಥೆಗಳು ಮುಖ್ಯ ಕಥೆಗೆ ವೇಗ ಒದಗಿಸುವುದಲ್ಲದೇ, ಹೊಸ ಹೊಸ ಕೌತುಕಗಳನ್ನೂ ಸೃಷ್ಟಿಸುತ್ತದೆ. ಒಮ್ಮೆ ಥ್ರಿಲ್ಲರ್ ಚಿತ್ರವೆಂದೆನಿಸಿದ್ದು, ಇನ್ನೊಮ್ಮೆ ಹಾರರ್ ಚಿತ್ರ ಎಂದೆನಿಸಬಹುದು. ಒಟ್ಟಾರೆ, ಹಲವು ವಿಷಯಗಳನ್ನು ಸೇರಿಸಿ ಪ್ರೇಕ್ಷಕರನ್ನು ಕೂರಿಸಿಕೊಳ್ಳುವ ಪ್ರಯತ್ನ ಮಾಡಿದ್ದಾರೆ.

ಪ್ರವಾಸದ ಸಮಯದಲ್ಲಿ ಚಾಲಕನ ನಿರ್ಲಕ್ಷ್ಯದಿಂದ ಬಸ್ ಅಪಘಾತವಾಯಿತೆಂದು ಹೇಳಲಾಗುತ್ತದೆ. ಅದರೆ ರುದ್ರ ಅದರ ಬೆನ್ನತ್ತಿ ಹೋದಾಗ ದುರಂತಕ್ಕೆ ರಾಜಕೀಯ ಪಿತೂರಿ ಕಾರಣ ಎಂಬುದು ಬಹಿರಂಗವಾಗುತ್ತದೆ. ಪೊಲೀಸ್ ಪಾತ್ರದಲ್ಲಿ ರಿಷಿ ಹೊಸದಾಗಿ ಕಾಣಿಸಿಕೊಂಡಿರುವುದು ಚಿತ್ರದ ಮತ್ತೊಂದು ಹೆಚ್ಚುಗಾರಿಕೆ. ನಾಯಕಿ ಪ್ರಿಯಾಂಕ ಕುಮಾರ್ ಈ ಥ್ರಿಲ್ಲರ್ ತನಿಖೆಯಲ್ಲಿ ಆಗಾಗ ಬಂದು ಹೋಗುತ್ತಾರೆ. ಸಿಕ್ಕಿರುವ ಸೀಮಿತ ಅವಧಿಯಲ್ಲಿ ಪರದೆಯ ಮೇಲೆ ರಂಜಿಸುತ್ತಾರೆ. ವಿನೋದ್ ಆಳ್ವಾ ಶಾಸಕನಾಗಿ ಮತ್ತು ಹಿರಿಯ ಅಧಿಕಾರಿಯಾಗಿ ಅವಿನಾಶ್ ಅವರ ಗೌರವಾನ್ವಿತ ಪಾತ್ರವು ಚಿತ್ರಕ್ಕೆ ಪ್ರಮುಖ ಶಕ್ತಿಯಾಗಿದೆ. ಹಿನ್ನೆಲೆ ಸಂಗೀತವು ಜಟಿಲವಾಗಿದೆ, ಚಿತ್ರದ ವಿಷಯಕ್ಕೆ ಹೊಂದಿಕೆಯಾಗುವುದಿಲ್ಲ.

ಸಕಲೇಶಪುರದಲ್ಲಿ ನಡೆದ ಬಸ್ ಅಪಘಾತ ಭೂತ ಮತ್ತು ವರ್ತಮಾನಕ್ಕೆ ಕೊಂಡಿಯಾಗುತ್ತದೆ. ರುದ್ರನ ತಂದೆಯ ಆದರ್ಶಗಳು ಚಿತ್ರದ ಉದ್ದಕ್ಕೂ ಪ್ರತಿಧ್ವನಿಸುತ್ತವೆ, ಅವನ ಮಗನ ನೈತಿಕ ದಿಕ್ಸೂಚಿಯನ್ನು ರೂಪಿಸುತ್ತವೆ ಮತ್ತು ವ್ಯವಸ್ಥಿತ ಭ್ರಷ್ಟಾಚಾರವನ್ನು ಪ್ರಶ್ನಿಸುವ ಅವನ ಸಂಕಲ್ಪವನ್ನು ಉತ್ತೇಜಿಸುತ್ತವೆ. ಒಟ್ಟಾರೆ ರುದ್ರ ಗರುಡ ಪುರಾಣ ಹಾಸ್ಯ, ಹಾರರ್, ಸಸ್ಪೆನ್ಸ್ ಮತ್ತು ರೋಚಕತೆಯುಳ್ಳ ಕಥೆಯಾಗಿದ್ದು, ಫ್ಯಾಮಿಲಿ ಆಡಿಯೆನ್ಸ್ ಸೇರಿದಂತೆ ಎಲ್ಲಾ ವರ್ಗದ ಪ್ರೇಕ್ಷಕರಿಗೂ ಸಿನಿಮಾ ಇಷ್ಟವಾಗುತ್ತದೆ.

ಕನ್ನಡದಲ್ಲಿ ಇತ್ತೀಚಿನ ವರ್ಷಗಳಲ್ಲಿ ಹಲವು ಥ್ರಿಲ್ಲರ್ ಚಿತ್ರಗಳು ಬಂದಿವೆಯಾದರೂ, ಪ್ರೇಕ್ಷಕರನ್ನು ಹಿಡಿದಿಡುವ ಚಿತ್ರಗಳು ಕಡಿಮೆಯೇ. 'ರುದ್ರ ಗರುಡ ಪುರಾಣ' ಕಥೆ ಸೆಳೆದರೂ, ಇನ್ನಷ್ಟು ಬಿಗಿಯಾದ ನಿರೂಪಣೆ ಇದ್ದಿದ್ದರೆ, ಚಿತ್ರ ಇನ್ನಷ್ಟು ಪರಿಣಾಮಕಾರಿಗಿರುತ್ತಿತ್ತು.

# ಆಳವಿಲ್ಲದ ಕಡಲಿನಲ್ಲಿ ಭಟ್ಟರ ಹಳೇ ವೇದಾಂತ ಪುನರಾವರ್ತನೆ

**ಕನ್ನಡ ಚಿತ್ರಂಗಕ್ಕೆ ಎವರ್ ಗ್ರೀನ್ ಎಂಬಂತಹ ಮುಂಗಾರುಮಳೆ ಸಿನಿಮಾ ನೀಡಿದ್ದ ಈ. ಕೃಷ್ಣಪ್ಪ ಮತ್ತು ನಿರ್ದೇಶಕ ಯೋಗರಾಜ್ ಭಟ್ ಹಲವು ವರ್ಷಗಳ ನಂತರ ಮತ್ತೆ ಒಂದಾಗಿದ್ದಾರೆ. ಈ ಇಬ್ಬರ ಕಾಂಬಿನೇಷನ್ ನ ಮನದ ಕಡಲು ಸಿನಿಮಾ ರಿಲೀಸ್ ಆಗಿದೆ. ಸುಮುಖ, ರಾಶಿಕಾ ಶೆಟ್ಟಿ, ಅಂಜಲಿ ಅನೀಶ್ ಎಂಬ ಹೊಸ ಪ್ರತಿಭೆಗಳು ಸಿನಿಮಾದಲ್ಲಿ ನಟಿಸಿದ್ದಾರೆ.**

**ಮುಂಗಾರು ಮಳೆ ನಿರ್ದೇಶಕ-ನಿರ್ಮಾಪಕ ಮತ್ತೆ ಒಂದಾಗಿದ್ದಾರೆ, ಹೀಗಾಗಿ ಮತ್ತೆ ಮುಂಗಾರು ಮಳೆಯಂತ ಹಿಟ್ ಚಿತ್ರ ನೋಡಬಹುದು ಎಂದು ಹೋದ ಪ್ರೇಕ್ಷಕನಿಗೆ ನಿರಾಶೆ ಖಚಿತ. ಏಕೆಂದರೆ ಯೋಗರಾಜ್ ಭಟ್ಟರ ಈ ಹಿಂದಿನ ಸಿನಿಮಾಗಳ ಚಾಪು ಎದ್ದು ಕಾಣುತ್ತದೆ.**

ನೀಲಿ ನೀಲಿ ಕಡಲು ಎಂಬ ಅರ್ಥ ಪೂರ್ಣ ಹಾಡಿನೊಂದಿಗೆ ಸಿನಿಮಾ ಆರಂಭವಾಗುತ್ತದೆ. ಎಂಬಿಬಿಸ್ ವಿದ್ಯಾರ್ಥಿಯಾಗಿರುವ ಸುಮುಖ ತನ್ನ ವಿದ್ಯಾಭ್ಯಾಸವನ್ನು ಅರ್ಧಕ್ಕೆ ನಿಲ್ಲಿಸಿ, ಏಕಾಏಕಿ ಕಾಲೇಜು ಬಿಟ್ಟು ಊರು ಸುತ್ತಲು ಹೋಗುವ ಬೇಜವಬ್ದಾರಿ ಯುವಕನ ಪಾತ್ರವನ್ನು ಕೇಂದ್ರವಾಗಿ ಇಟ್ಟುಕೊಂಡು ಈ ಸಿನಿಮಾವನ್ನು ಮಾಡಿದ್ದಾರೆ. ಓಃಖ ಅರ್ಧಕ್ಕೆ ನಿಲ್ಲಿಸಿ ಜೀವನದ ಅರ್ಥ ಹುಡುಕಿಕೊಂಡು ಹೋಗುವ ಸುಮುಖನಿಗೆ ಕಡಲ ತೀರದಲ್ಲಿ ರಾಶಿಕಾ ಸಿಗುತ್ತಾಳೆ.

ಮೆಚ್ಚಿದ ಹುಡುಗಿ ರಾಶಿಕಾಳನ್ನು ಹುಡುಕಿಕೊಂಡು ಕಡಲ ಮಡಿಲಲ್ಲಿರುವ ದೋಣಿ ದುರ್ಗ ಅನ್ನೋ ಊರಿಗೆ ಸುಮುಖ ಬರುತ್ತಾನೆ, ನಾಯಕಿ ಜೊತೆ ಮತ್ತೊಬ್ಬಳು ಸಿಗುತ್ತಾಳೆ. ಪುರಾತತ್ವಶಾಸ್ತ್ರಜ್ಞೆ




ಅಂಜಲಿ, ಪ್ರೀತಿಯ ಸಂಕೀರ್ಣತೆಗಳ ಬಗ್ಗೆ ರಾಶಿಕಾಗೆ ಎಚ್ಚರಿಕೆ ನೀಡುತ್ತಾಳೆ, ಆದರೆ ಕಥೆ ತೆರೆದುಕೊಳ್ಳುತ್ತಿದ್ದಂತೆ, ಅವಳು ಕೂಡ ಸುಮುಖನ ಮೇಲಿನ ತನ್ನದೇ ಆದ ಪ್ರೇಮ ಭಾವನೆಗಳಲ್ಲಿ ಸಿಕ್ಕಿಹಾಕಿಕೊಳ್ಳುತ್ತಾಳೆ. ಅಲ್ಲಿಂದ ತ್ರಿಕೋನ ಪ್ರೇಮಕಥೆಗೆ ಟರ್ನಿಂಗ್ ಸಿಗುತ್ತದೆ.

ರಂಗಾಯಣ ರಘು ಆದಿವಾಸಿ ಪಾತ್ರದಲ್ಲಿ ನಟಿಸಿದ್ದಾರೆ. ಗಿಬ್ರಿಶ್ ಭಾಷೆ, ನಡೆಯುವ ಸನ್ನಿವೇಶಗಳೆಲ್ಲ ಭಟ್ಟರ ಹಿಂದಿನ ಸಿನಿಮಾಗಳನ್ನು ನೆನಪಿಗೆ ತರುತ್ತವೆ. ಮಳೆ, ಕಡಲು, ಹಸಿರು ಪ್ರಕೃತಿ ಇವೆಲ್ಲಾ ಭಟ್ಟರ ಸಿನಿಮಾಗಳಲ್ಲಿ ಹೇರಳವಾಗಿರುತ್ತದೆ. ಅದೇ ರೀತಿಯ ಪುನಾರವರ್ತನೆ ಇಲ್ಲಿಯೂ ಇದೆ. ಆದರೆ ಸಿನಿಮಾದ ಯಾವೊಂದು ಪಾತ್ರಗಳು ಬಿಡದಂತೆ ಮನಸ್ಸನ್ನು ಕಾಡುವುದಿಲ್ಲ, ಎದೆಬಿರಿವಷ್ಟು ಪ್ರೀತಿಯಿದ್ದರೂ ಮನ ತಣಿಯುವುದಿಲ್ಲ, ಯಾವ ಸನ್ನಿವೇಶವೂ ಆವರಿಸಿಕೊಳ್ಳುವುದಿಲ್ಲ, ಸಿನಿಮಾದ ಮೊದಲಾರ್ಧ ಹಾಸ್ಯದಿಂದ ಸ್ವಲ್ಪ ಸಮಯದವರೆಗೆ ನೋಡಿಸಿಕೊಂಡು ಹೋಗುತ್ತದೆ. ಚಿತ್ರದ ದ್ವಿತೀಯಾರ್ಧದ ನಿರೂಪಣೆ ಮತ್ತಷ್ಟು ಬಿಗಿ ಹಿಡಿತ ಬೇಡುತ್ತದೆ.

ಹೊಸ ಪ್ರತಿಭೆಗಳಿಗೆ ಸದಾ ಮಣೆ ಹಾಕುವ ಭಟ್ಟರು ಮನದ ಕಡಲು ಸಿನಿಮಾದಲ್ಲಿ ಮೂವರು ಹೊಸಬರಿಗೆ ಅವಕಾಶ ನೀಡಿದ್ದಾರೆ, ಆದರೆ ಅವರು ಪಾತ್ರವನ್ನು ಮತ್ತಷ್ಟು ಅನುಭವಿಸಲು ನಟನೆಯಲ್ಲಿ ಪಕ್ವವಾಗಬೇಕು. ಎಂದಿನಂತೆ ರಂಗಾಯಣ ರಘು ತಮ್ಮ ಹಾಸ್ಯದಿಂದ ನಗು ಮೂಡಿಸುತ್ತಾರೆ. ಯೋಗರಾಜ್ ಭಟ್ ಅವರ ದೀರ್ಘಕಾಲದ ಸಂಗೀತ ಮಿತ್ರ ಹರಿಕೃಷ್ಣ ಅವರ ಮ್ಯೂಸಿಕ್ ಭಾವನಾತ್ಮಕ ಏರಿಳಿತಗಳಿಗೆ ಪೂರಕವಾಗಿದೆ. ಸಂತೋಷ್ ರೈ ಪಾತಾಜೆ ಛಾಯಾಗ್ರಹಣ, ಸಮುದ್ರ, ಪರ್ವತಗಳು ಮತ್ತು ಹಚ್ಚ ಹಸಿರಿನ ಉಸಿರುಕಟ್ಟುವ ಸೌಂದರ್ಯವನ್ನು ಸೊಗಸಾಗಿ ಸೆರೆಹಿಡಿಯುತ್ತವೆ. ಈ ನೈಸರ್ಗಿಕ ಅಂಶಗಳು ಚಿತ್ರದ ಪ್ಲಸ್ ಪಾಯಿಂಟ್. ಉಳಿದಂತೆ ಯಾವುದೇ ಹಾಡು ಸನ್ನಿವೇಶ ಮನಸಲ್ಲಿ ಉಳಿಯುವುದಿಲ್ಲ.

## ಅಬ್ಬಬ್ಬಾ ರೋಮಾಂಚನ: ಅದ್ಭುತ ಸೃಷ್ಟಿಸಿದ ರಿಷಬ್ ಶೆಟ್ಟಿಗೆ ರಾಷ್ಟ್ರಪ್ರಶಸ್ತಿ ಕೊಡಲೇಬೇಕು- ತಮಿಳು ನಿರ್ದೇಶಕ ಅಟ್ಲೀ

ಇಡೀ ಭಾರತ ಕಾಂತಾರ ಅಧ್ಯಾಯ 1 ಬಗ್ಗೆ ಮಾತನಾಡುತ್ತಿದೆ. ದಕ್ಷಿಣ ಭಾರತೀಯ ಚಿತ್ರರಂಗದಲ್ಲಿ ಕನ್ನಡ ಚಿತ್ರಗಳು ಯಾವಾಗಲೂ ತಮ್ಮದೇ ಆದ ವಿಮರ್ಶಕರು ಮತ್ತು ಅಭಿಮಾನಿಗಳನ್ನು ಹೊಂದಿರುತ್ತವೆ. ಕೆಜಿಎಫ್ ಚಿತ್ರದ ನಂತರ ಭಾರತದಲ್ಲಿ ಕನ್ನಡ ಚಿತ್ರಗಳ ಮೇಲೆ ಪ್ರತ್ಯೇಕ ದೃಷ್ಟಿಕೋನವನ್ನು ಸೃಷ್ಟಿಸಲಾಗಿದೆ. ಈ ಪರಿಸ್ಥಿತಿಯಲ್ಲಿ ಕನ್ನಡ ಚಲನಚಿತ್ರೋದ್ಯಮವನ್ನು ಮತ್ತೊಮ್ಮೆ ವಿಶೇಷ ಗಮನ ಸೆಳೆದ ಚಿತ್ರ ಕಾಂತಾರ. ಈಗ ಕಾಂತಾರ ಅಧ್ಯಾಯ 1 ಬಿಡುಗಡೆಯಾಗಿದ್ದು, ಬಾಕ್ಸ್ ಆಫೀಸ್ ಕೊಳ್ಳೆ ಹೊಡೆಯುತ್ತಿದೆ. ಈ ಚಿತ್ರವನ್ನು ನೋಡಿದ ನಿರ್ದೇಶಕ ಅಟ್ಲೀ, ರಿಷಭ್ ಶೆಟ್ಟಿಗೆ ರಾಷ್ಟ್ರೀಯ ಪ್ರಶಸ್ತಿ ನೀಡಬೇಕು ಎಂದು ಹೇಳಿದ್ದಾರೆ.ಕಾಂತಾರ ಅಧ್ಯಾಯ 1 ಅಕ್ಟೋಬರ್ 2 ರಂದು ಬಿಡುಗಡೆಯಾಗಿದ್ದು ಯಶಸ್ವಿಯಾಗಿ ಪ್ರದರ್ಶನಗೊಳ್ಳುತ್ತಿದೆ. ಕಳೆದ ಒಂದು ವಾರದಲ್ಲಿಯೇ ಚಿತ್ರವು ವಿಶ್ವಾದ್ಯಂತ 509.25 ಕೋಟಿ ರೂ.ಗಳಿಗೂ ಹೆಚ್ಚು ಸಂಗ್ರಹಿಸಿದೆ ಎಂದು ಚಿತ್ರತಂಡ ತಿಳಿಸಿದೆ. ಈ ಮಾಹಿತಿ ಕನ್ನಡ ಚಿತ್ರೋದ್ಯಮವನ್ನು ಸಂತೋಷಪಡಿಸಿದೆ. ಏತನ್ಮಧ್ಯೆ, ಕಾಂತಾರ ಚಿತ್ರದ ಬಗ್ಗೆ ಮಾತನಾಡಿರುವ ಅಟ್ಲೀ, ಕಾಂತಾರ ಚಿತ್ರದ ನಿರ್ದೇಶಕ ಮತ್ತು ನಟ ರಿಷಭ್ ಶೆಟ್ಟಿಗೆ ರಾಷ್ಟ್ರೀಯ ಪ್ರಶಸ್ತಿ ಕೊಡಲೇಬೇಕು ಎಂದು ಹೇಳಿದರು.ನಾನು ಕಾಂತಾರ ಅಧ್ಯಾಯ 1 ಚಿತ್ರವನ್ನು ನೋಡಿದೆ. ನನಗೆ ಚಿತ್ರ ತುಂಬಾ ಇಷ್ಟವಾಯಿತು. ಚಿತ್ರ ನೋಡಿದ ನಂತರ, ನಾನು ನಿರ್ದೇಶಕ ಮತ್ತು ನಟ ರಿಷಭ್ ಶೆಟ್ಟಿ ಅವರಿಗೆ ಕರೆ ಮಾಡಿ ಅಭಿನಂದಿಸಿದೆ. ಒಂದೇ ಕಾಲಕ್ಕೆ ನಟನೆ ಮತ್ತು ನಿರ್ದೇಶನ ಕಂಡು ನನಗೆ ಆಶ್ಚರ್ಯವಾಯಿತು.

# ಯುವ ಮನಸ್ಸುಗಳ ಆಂತರಿಕ ಸಂಘರ್ಷ

## ಸ್ನೇಹ-ಸಂಬಂಧದಲ್ಲಿ ಸಂವಹನ-ನಂಬಿಕೆ ಬಹಳ ಮುಖ್ಯ!

ಸಿನಿಮಾದಲ್ಲಿ ಕಿರಣ್ ರಾಜ್ ಅವರು ಟೈಟಲ್ ರೋಲ್ ಅಂದರೆ ಮೇಘಾ ಪಾತ್ರವನ್ನ ನಿಭಾಯಿಸಿದ್ದಾರೆ. ರೌಡಿಗಳೊಂದಿಗೆ ಗೂಂಡಾಗಳ ಗುಂಪಿನೊಂದಿಗೆ ಹೋರಾಡುವುದರೊಂದಿಗೆ ಸಿನಿಮಾ ಪ್ರಾರಂಭವಾಗುತ್ತದೆ. ಆಗಷ್ಟೇ ಮೇಘಾ ತನ್ನ ಪ್ರೇಯಸಿಯಾಗಿದ್ದ ಹುಡುಗಿ ಪ್ರಿಯಾ (ಶ್ರೀವಿದ್ಯಾ)ಳೊಂದಿಗೆ ಬ್ರೇಕ್‌ಅಪ್ ಮಾಡಿಕೊಂಡಿರುತ್ತಾನೆ. ಆಕೆಯನ್ನ ಇನ್ನೆಂದೂ ನೋಡಲೇಬಾರದು ಎಂದು ಅಂದುಕೊಂಡಿರುತ್ತಾನೆ. ಆಂತರಿಕವಾಗಿ ತನ್ನ ಬ್ರೇಕ್‌ಅಪ್ ವಿಚಾರವಾಗಿ ತುಂಬ ಸಂಕಟ-ನೋವು ಪಡುತ್ತಿರುವ ಹೊತ್ತಲ್ಲೇ ಅವರ ಮೇಲೆ ಗೂಂಡಾಗಳು ಅಟ್ಯಾಕ್ ಮಾಡಿರುತ್ತಾರೆ. ಮೇಘಾ ಹೊಡೆದಾಡುತ್ತಾನೆ.


ಚರಣ್ ಎಚ್‌ಆರ್ ಚೊಚ್ಚಲ ನಿರ್ದೇಶನದ ಮೇಘ ಸಿನಿಮಾ ಕಥೆ ತಮ್ಮ ಸ್ನೇಹಿತರೊಬ್ಬರ ಜೀವನ ಆಧರಿಸಿದೆ ಎಂದು ಹೇಳಿದ್ದಾರೆ. ನೈಜ ಘಟನೆಯನ್ನು ಆಧರಿಸಿ ಪ್ರೀತಿ ಮತ್ತು ಸ್ನೇಹದ ಭಾವನೆಗಳನ್ನು ದೊಡ್ಡ ಪರದೆಯ ಮೇಲೆ ತಂದಿದ್ದಾರೆ, ಚೊಚ್ಚಲ ಸಿನಿಮಾದಲ್ಲಿಯೇ ಭರವಸೆ ಮೂಡಿಸಿದ್ದಾರೆ, ಆದರೆ ಮತ್ತಷ್ಟು ಹಾರ್ಡ್ ವರ್ಕ್ ಮಾಡುವ ಅವಶ್ಯಕತೆಯಿದೆ. ಎಂದಿನಂತೆ ಕಿರಣ್ ರಾಜ್ ಅಭಿನಯ ಚೆನ್ನಾಗಿದೆ. ಒಳ್ಳೊಳ್ಳೆ ಡೈಲಾಗ್‌ಗಳು ಇವೆ. ಅವರ ಡೈಲಾಗ್ ಡೆಲಿವರಿ ಮೆಚ್ಚುಗೆಗೆ ಪಾತ್ರವಾಗಿದೆ. ನಾಯಕಿ ಕಾಜಲ್ ಕೂಡ ತನ್ನ ಪಾತ್ರವನ್ನ ಅಚ್ಚುಕಟ್ಟಾಗಿ ನಿಭಾಯಿಸಿದ್ದಾರೆ.



ರಾಜೇಶ್ ನಟರಂಗ, ಶೋಭರಾಜ್ ಮತ್ತಿತರ ಕಲಾವಿದರ ನಟನೆ ಚಿತ್ರದ ಪ್ಲಸ್ ಪಾಯಿಂಟ್. ಸಿನಿಮಾದ ಸಂಗೀತ ಮೆಚ್ಚುವಂಥದ್ದು. ಕೆಲವೆಡೆ ಅನಾವಶ್ಯಕವಾಗಿ ಹಾಸ್ಯ ಸೇರಿಸಿದ್ದಾರೆ. ಸ್ನೇಹ, ಪ್ರೀತಿ ಮತ್ತು ಬಾಂಧವ್ಯದ ಸಂಕೀರ್ಣತೆಗಳನ್ನು ಸುಮಧುರ ಹಾಡುಗಳ ಮೂಲಕ ಚೆನ್ನಾಗಿ ವ್ಯಕ್ತಪಡಿಸಲಾಗಿದೆ, ಜೋಯಲ್ ಸಕ್ಕರಿ ಸರಳ ಮತ್ತು ಅರ್ಥಪೂರ್ಣ ಸಾಹಿತ್ಯ ಸಂಯೋಜಿಸಿದ್ದಾರೆ. ಛಾಯಾಗ್ರಾಹಕ ಗೌತಮ್ ನಾಯಕ್ ಮೈಸೂರಿನ ಸೌಂದರ್ಯ ಮತ್ತು ಚಿಕ್ಕಮಗಳೂರಿನ ಭೂದೃಶ್ಯಗಳನ್ನು ಅದ್ಭುತವಾಗಿ ಸೆರೆಹಿಡಿದಿದ್ದಾರೆ.

ಪ್ರೀತಿ, ನಷ್ಟ ಮತ್ತು ಹೆಚ್ಚಿನ ಜನರು ಜೀವನದಲ್ಲಿ ಅನುಭವಿಸುವ ಭಾವನೆಗಳ ಬಗೆಗಿನ ಕಥೆಯಾಗಿದೆ, ಚಿತ್ರದಲ್ಲಿ ಯಾವುದೇ ಸಂಬಂಧಗಳ ಸಮಸ್ಯೆಗೆ ಸುಲಭವಾದ ಉತ್ತರ ಸಿಗುವುಗಿಲ್ಲ. ಮೇಘ ಸಿನಿಮಾದಲ್ಲಿ ಪ್ರೀತಿ ಮತ್ತು ಸಂಬಂಧಗಳಲ್ಲಿ ಸಂವಹನದ ಪ್ರಾಮುಖ್ಯತೆಯನ್ನು ವಿವರಿಸುತ್ತದೆ. ಮನುಷ್ಯನಾಗುವುದಕ್ಕೆ ಯಾವ್ಯಾವ ಗುಣಗಳು ಬೇಕು ಎಂಬದನ್ನು ವಿವರಿಸುತ್ತದೆ. ಒಟ್ಟಾರೆ ಮೇಘ ಸಿನಿಮಾ ಯುವ ಮನಸ್ಸುಗಳ ನಡುವೆ ನಡೆಯುವ ಸಂಘರ್ಷಕ್ಕೆ ಹಿಡಿದ ಕನ್ನಡಿಯಾಗಿದೆ.

## ಅಭಿಮಾನಿಗಳ ಮನಗೆದ್ದ 'ದಿ ಡೆವಿಲ್' ಹಾಡು 'ಒಂದೇ ಒಂದು ಸಲ'; 53 ಲಕ್ಷಕ್ಕೂ ಅಧಿಕ ವೀಕ್ಷಣೆ



ದಿ ಡೆವಿಲ್' ಚಿತ್ರದ 'ಒಂದೇ ಒಂದು ಸಲ' ಹಾಡು ಇದೀಗ ಅಭಿಮಾನಿಗಳ ಮನಸ್ಸು ಗೆದ್ದಿದ್ದು, ಯೂಟ್ಯೂಬ್‌ನಲ್ಲಿ ಟ್ರೆಂಡಿಂಗ್ ಆಗಿದೆ. ದರ್ಶನ್ ಮತ್ತು ರಚನಾ ರೈ ಕಾಣಿಸಿಕೊಂಡಿರುವ ಈ ಹಾಡು ಆನ್‌ಲೈನ್‌ನಲ್ಲಿ ಸಂಚಲನ ಮೂಡಿಸಿದ್ದು, 53 ಲಕ್ಷಕ್ಕೂ ಅಧಿಕ ವೀಕ್ಷಣೆಗಳನ್ನು ಗಳಿಸಿದೆ. ಈ ಹಾಡು ಇದೀಗ ಪ್ಲಾಟ್‌ಫಾರ್ಮ್‌ನ ಟ್ರೆಂಡಿಂಗ್ ಮ್ಯೂಸಿಕ್ ವಿಡಿಯೋಗಳ ಪಟ್ಟಿಯಲ್ಲಿ ನಂ. 1 ಸ್ಥಾನದಲ್ಲಿದೆ.

ಪ್ರಕಾಶ್ ವೀರ್ ನಿರ್ದೇಶನದ ಮತ್ತು ರಚನಾ ರೈ ನಟಿಸಿರುವ ಬಹುನಿರೀಕ್ಷಿತ ಚಿತ್ರ 'ದಿ ಡೆವಿಲ್' ಚಿತ್ರತಂಡ ಮೊದಲ ಹಾಡು 'ಇದ್ರೆ ನೆಮ್ದಿಯಾಗ್ ಇರ್ಬೇಕ್' ಅನ್ನು ಆಗಸ್ಟ್ 15 ರಂದು ಬಿಡುಗಡೆ ಮಾಡಿದ್ದು, ಈಗಾಗಲೇ ಭರ್ಜರಿ ಯಶಸ್ಸು ಕಂಡಿದೆ. 'ತಾರಕ್' ಚಿತ್ರದ ನಂತರ ದರ್ಶನ್ ಮತ್ತು ಪ್ರಕಾಶ್ ವೀರ್ ಮತ್ತೆ ಒಂದಾಗಿದ್ದಾರೆ.ಚಿತ್ರವನ್ನು ಶ್ರೀ ಜೈಮಾತಾ ಕಂಬೈನ್ಸ್ ಬ್ಯಾನರ್ ಅಡಿಯಲ್ಲಿ ಜೆ ಜಯಮ್ಮ ಮತ್ತು ಪ್ರಕಾಶ್ ವೀರ್ ನಿರ್ಮಿಸಿದ್ದಾರೆ. ಈ ಚಿತ್ರಕ್ಕೆ ಪ್ರಕಾಶ್ ವೀರ್ ಅವರೇ ಕಥೆ ಮತ್ತು ಚಿತ್ರಕಥೆ ಬರೆದಿದ್ದು, ಆಕ್ಷನ್ ಕಟ್ ಹೇಳಿದ್ದಾರೆ. ಈ ಹಾಡಿಗೆ ಪ್ರಮೋದ್ ಮರವಂತೆ ಸಾಹಿತ್ಯ ಬರೆದಿದ್ದು, ಕಪಿಲ್ ಕಪಿಲನ್ ಮತ್ತು ಚಿನ್ಮಯಿ ಶ್ರೀಪಾದ ಹಾಡಿದ್ದಾರೆ. ಅಜನೀಶ್ ಲೋಕನಾಥ್ ಸಂಗೀತ ಸಂಯೋಜಿಸಿದ್ದಾರೆ ಮತ್ತು ಸಿಆರ್ ಬಾಬಿ ಹೆಚ್ಚುವರಿ ಗಾಯನ ಮಾಡಿದ್ದಾರೆ.

ಹಾಡನ್ನು ಥೈಲ್ಯಾಂಡ್‌ನಲ್ಲಿ ಅದ್ಭುತವಾದ ದ್ವೀಪದ ಹಿನ್ನೆಲೆಯಲ್ಲಿ ಚಿತ್ರೀಕರಿಸಲಾಗಿದೆ ಮತ್ತು ಸಂತು ಮಾಸ್ಟರ್ ಅವರ ನೃತ್ಯ ಸಂಯೋಜನೆಯಿದೆ.

# ಅಘೋರಿಗಳ ವಿಸ್ಮಯ ಪ್ರಪಂಚದಲ್ಲಿ ದುಷ್ಟ ಶಿಕ್ಷಕಿ, ಶಿಷ್ಟ ಪರಿಪಾಲಕಿ ಭೈರಾದೇವಿ

**ರಾಧಿಕಾ ಕುಮಾರಸ್ವಾಮಿ ಅಭಿನಯದ ಬಹುನಿರೀಕ್ಷಿತ ಚಿತ್ರ ಭೈರಾದೇವಿ ಬಿಡುಗಡೆಯಾಗಿದೆ. ಶ್ರೀಜೈ ನಿರ್ದೇಶನದ ಈ ಸಿನಿಮಾವು ಅಘೋರಿಗಳು ದೆವ್ವ ಮತ್ತು ದೇವರ ಬಗೆಗಿನ ಕಥೆಯಾಗಿದೆ.**

**ರಾಧಿಕಾ ಅಘೋರಿ ಪಾತ್ರಕ್ಕೆ ಬಣ್ಣ ಹಚ್ಚಿದ್ದಾರೆ. ಸಿನಿಮಾದಲ್ಲಿ ಕಾಶಿ ಹಾಗೂ ಮಣಿಕರ್ಣಿಕಾ ಘಾಟ್ ದರ್ಶನವೂ ಆಗುತ್ತೆ. ಜೊತೆಗೆ ಅಘೋರಿಗಳ ಲೈಫ್‌ಸ್ಟೈಲಿನ ಪರಿಚಯವೂ ಆಗುತ್ತದೆ. ಯಾವ ತೆಲುಗು ಸಿನಿಮಾಕ್ಕೂ ಕಡಿಮೆ ಇಲ್ಲದ ಹಾಗೆ ಬಹಳ ರಿಚ್ ಆಗಿ ಅಘೋರಿ ಲೈಫನ್ನು ತೋರಿಸಿದ್ದಾರೆ. ಬಹುತೇಕ ಕೌಟುಂಬಿಕ, ಪ್ರೀತಿ, ಪ್ರೇಮ ಕಥೆಗಳಲ್ಲಿ ನಟಿಸಿದ್ದ ರಾಧಿಕಾ ಕುಮಾರಸ್ವಾಮಿ ಹೊಸದೊಂದು ಪಾತ್ರದಲ್ಲಿ ಅಭಿನಯಿಸಿದ್ದಾರೆ, ಅವರ ಸಿನಿಮಾಗಳ ಮಟ್ಟಿಗೆ ಇದೊಂದು ಹೊಸ ಪ್ರಯೋಗವಾಗಿದೆ.**

ಚಿತ್ರದ ಶಕ್ತಿಯು ಅದರ ಶೀರ್ಷಿಕೆಯಲ್ಲಿ ಮಾತ್ರವಲ್ಲ ಕಥೆಯಲ್ಲಿಯೂ ಅಡಗಿದೆ. ಪ್ರಬಲವಾದ ಕಥಾವಸ್ತುವನ್ನು ಒಳಗೊಂಡಿರುವ ಭೈರಾದೇವಿ ಸಿನಿಮಾದಲ್ಲಿ ಪ್ರತಿಯೊಬ್ಬರ ಪಾತ್ರ ಅಧ್ಬುತವಾಗಿದೆ.

ಪೊಲೀಸ್ ಅಧಿಕಾರಿಯಾಗಿರುವ ಅರವಿಂದ್ ಗೆ (ರಮೇಶ್ ಅರವಿಂದ್) ತನ್ನ ಮೃತ ಹೆಂಡತಿಯ ಆತ್ಮ ದೆವ್ವದಿಂದ ಕಾಡುತ್ತದೆ. ಆಕೆ ದುರಂತವೊಂದರಲ್ಲಿ ತನ್ನ ಪ್ರಾಣ ತ್ಯಜಿಸಿರುತ್ತಾಳೆ. ಅರವಿಂದ್ ಮಗಳಿಗೆ ತಾಯಿಯ ಸಾವು ಅರಗಿಸಿಕೊಳ್ಳಲಾಗದು. ರಾತ್ರಿಯಲ್ಲಿ ತನ್ನ ಸತ್ತ ತಾಯಿಯನ್ನು






ನಿಗೂಢವಾಗಿ ಭೇಟಿಮಾಡುತ್ತಾಳೆ, ತನ್ನ ತಾಯಿ ತನ್ನ ಜೊತೆಗಿದ್ದಾಳೆ ಎಂದು ಆಕೆ ವರ್ತಿಸುವ ರೀತಿ ಮನೆಯಲ್ಲಿರುವವರ ನಿದ್ದೆಗೆಡಿಸುತ್ತದೆ. ಇದರೊಂದಿಗೆ ರಹಸ್ಯ ಕತೆಯೊಂದು ತೆರೆದುಕೊಳ್ಳುತ್ತದೆ.

ಅರವಿಂದ್ ಅವರ ಮಗಳೊಂದಿಗಿನ ಸಂಬಂಧವನ್ನು ಸಹಾನುಭೂತಿ ಮೂಡಿಸಲು ರಚಿಸಲಾಗಿದೆ, ಶಿಕ್ಷಕಿ ಲಕ್ಷ್ಮಿ (ಮಾಳವಿಕಾ ಅವಿನಾಶ್) ಇವರಿಬ್ಬರ ನಡುವೆ ನಿರ್ಣಾಯಕ ಸೇತುವೆಯಾಗಿ ಕಾರ್ಯನಿರ್ವಹಿಸುತ್ತಾರೆ. ಮಗುವಿಗೆ ಕಾಡುತ್ತಿರುವ ಸಮಸ್ಯೆ ಬಗ್ಗೆ ಆಕೆ ಸ್ಪಷ್ಟವಾಗಿ ಹೇಳುತ್ತಾಳೆ, ಅರವಿಂದನ ಕಾರಿನಲ್ಲಿ ಅಡಗಿರುವ ಯಾವುದೋ ಕೆಟ್ಟ ಶಕ್ತಿಯ ಸುಳಿವು ನೀಡುತ್ತಾಳೆ. ಹೀಗೆ ಕೌಟುಂಬಿಕ ಸಮಸ್ಯೆಯಲ್ಲಿ ಸಿಲುಕಿಕೊಳ್ಳುವ ಅರವಿಂದ್ ಗೆ ಆತನ ಸಹೋದ್ಯೋಗಿ ವೀರಯ್ಯ (ರಂಗಾಯಣ ರಘು) ನಿಗೂಢ ಆಚರಣೆಗಳ ಅಭ್ಯಾಸ ಮಾಡುವ ಅಘೋರಿಯಿಂದ ಸಹಾಯ ಪಡೆಯಲು ಶಿಫಾರಸು ಮಾಡುತ್ತಾರೆ.

ಇಲ್ಲಿಂದ ಕಥೆಯು ವಾರಣಾಸಿಗೆ ಮುಂದುವರೆಯುತ್ತದೆ. ವಾರಣಾಸಿ ಆಧ್ಯಾತ್ಮಿಕ ಮಹತ್ವದಲ್ಲಿ ಮುಳುಗಿರುವ ಸ್ಥಳವಾಗಿದ್ದು, ಮರಣಾನಂತರದ ಜೀವನದ ಬಗ್ಗೆ ತಿಳಿಸುತ್ತದೆ. ಮಣಿಕರ್ಣಿಕಾ ಘಾಟ್‌ನಲ್ಲಿನ ದೃಶ್ಯಗಳು ಜೀವನ ಮತ್ತು ಸಾವಿನ ಶಾಶ್ವತ ಚಕ್ರದ ಆಲೋಚನೆಗಳನ್ನು ಹುಟ್ಟುಹಾಕುತ್ತವೆ. ವಿಶೇಷವಾಗಿ ಅಘೋರಿ ಪಾತ್ರಗಳ ಪರಿಚಯದ ಸಮಯದಲ್ಲಿ 'ಓಂ ನಮಃ ಶಿವಾಯ' ಪಠಣವು ಧನಾತ್ಮಕತೆಯನ್ನು ಹೆಚ್ಚಿಸುತ್ತದೆ. ಅಘೋರಿಗಳ ಜೀವನದ ಬಗ್ಗೆ ವಿವರವಾಗಿ ತಿಳಿಸಲಾಗಿದೆ.

ಅಘೋರಿಯೊಂದಿಗೆ ಅರವಿಂದನ ಭೇಟಿಯಾಗುತ್ತದೆ.


# ರೂಪಾಂತರ' ಸಿನಿಮಾ ವಿಮರ್ಶೆ ನಾಲ್ಕು ಕಥೆಗಳ ಸಮ್ಮಿಲನ

## ಮನೋಜ್ಞ ನಿರೂಪಣೆಯಿಂದ ಪ್ರೇಕ್ಷಕರ ಮನ ಗೆದ್ದ ಮಿಥಿಲೇಶ್

**ಮಿಥಿಲೇಶ್ ಎಡವಲತ್ ನಿರ್ದೇಶನದ ರೂಪಾಂತರ ಸಿನಿಮಾದಲ್ಲಿ ರಾಜ್ ಬಿ ಶೆಟ್ಟಿ ಸೇರಿದಂತೆ ಹಲವು ಕಲಾವಿದರು ನಟಿಸಿದ್ದಾರೆ. ರೂಪಾಂತರ ಸಿನಿಮಾ ಹೆಸರೇ ಹೇಳುವಂತೆ ಕಥೆಯಲ್ಲಿ ಹಲವು ಬದಲಾವಣೆಗಳಿವೆ. ಗೂಡಿನಲ್ಲಿರುವ ಕ್ಯಾಟರ್ ಪಿಲ್ಲರ್ ಒಂದು ಚಿಟ್ಟೆಯಾಗಿ ಬದಲಾಗುತ್ತದೋ ಅಥವಾ ಗೂಡಿನಲ್ಲೇ ಕೊಳೆತು ಹೋಗುತ್ತದೋ ಎಂಬ ವಿಷಯವನ್ನು ಉದಾಹರಣೆ ತೆಗೆದುಕೊಂಡು ಸಿನಿಮಾ ಆರಂಭಿಸಲಾಗಿದೆ.**

ರೂಪಾಂತರ ನಾಲ್ಕು ಕಥೆಗಳ ಸಂಕಲನ. ಈ ಹಿಂದೆಯೂ ಕೂಡ ಒಂದೇ ಸಿನಿಮಾದಲ್ಲಿ ವಿಭಿನ್ನ ಕಥೆಗಳಿರುವ ಸಿನಿಮಾ ಬಂದಿದೆ, ಆದರೆ ಇದು ಸ್ವಲ್ಪ ಭಿನ್ನವಾಗಿದೆ. ನಾಲ್ಕು ಕಥೆಗಳನ್ನೂ ಸೇರಿಸಿ ಅಂತ್ಯದಲ್ಲಿ ಕ್ಲೈಮ್ಯಾಕ್ಸ್ ಕೊಟ್ಟಿದ್ದಾರೆ, ಹೀಗಾಗಿ ಇದೊಂದು ವಿಭಿನ್ನ ರೀತಿಯ ಸಿನಿಮಾವಾಗಿದೆ. ಕ್ಲೈಮ್ಯಾಕ್ಸ್ ಗಾಗಿ ಪ್ರೇಕ್ಷಕನನ್ನು ಹಿಡಿದಿಟ್ಟುಕೊಳ್ಳುತ್ತದೆ. ಸಿನಿಮಾ ಆರಂಭವಾಗುವುದು ವಯೋವೃದ್ಧರೊಬ್ಬರು ಕಥೆ ಹೇಳುವ ಮೂಲಕ. ಗತ ಕಾಲದ ಅವಶೇಷಗಳ ನಡುವೆ ಅಲೆದಾಡುವ ವೃದ್ಧ ಕಥೆ ಹೇಳುವ ಮೂಲಕ ಸಾಂತ್ವನ ಕಂಡುಕೊಳ್ಳುತ್ತಿರುತ್ತಾನೆ.

ನರಕಸದೃಶವಾದ ಒಂದು ಸಮಾಜ. ಭವಿಷ್ಯದ ಅಂತಹ ಲೋಕದಿಂದ ಸಿನಿಮಾ ಕಥೆ ಆರಂಭವಾಗುತ್ತದೆ. ಅಲ್ಲಿ ನೀರು, ಗಾಳಿ ಮಾರಾಟದ ವಸ್ತುವಾಗಿರುತ್ತದೆ. ಜನರ ಮಾರಣಹೋಮ ನಡೆಯುತ್ತಿದೆ. ಇಂತಹ ಸ್ಥಿತಿಯಲ್ಲಿ ಆ ಲೋಕವನ್ನಾಳುತ್ತಿರುವ ದುರುಳರ ಕೈಗೆ ಅಜ್ಜನೊಬ್ಬ ಸಿಕ್ಕಿಬೀಳುತ್ತಾನೆ. ಆತನ ಕೈಯಲ್ಲೊಂದು ಸಣ್ಣ ಪೆಟ್ಟಿಗೆ. ಆ ಪೆಟ್ಟಿಗೆಯೊಳಗೆ ಚಿಟ್ಟೆಯ ಕ್ಯಾಟರ್ ಪಿಲ್ಲರ್.




ತನ್ನ ಜೀವ ರಕ್ಷಿಸಿಕೊಳ್ಳಲು ಆತ ಹೇಳುವ ಕಥೆಯೇ 'ರೂಪಾಂತರ'.

ರೂಪಾಂತರ ತನ್ನನ್ನು ಒಂದು ಸಂಕಲನವಾಗಿ ಪ್ರಸ್ತುತಪಡಿಸಿದರೂ, ಕಥೆಗಳು ಸಾಮಾನ್ಯ ವಿಷಯದ ಸುತ್ತ ಹೆಣೆದುಕೊಂಡಿವೆ. ಪ್ರತಿಕೂಲತೆಯ ನಡುವೆ ವಿಮೋಚನೆ, ನ್ಯಾಯ ಮತ್ತು ಪ್ರೀತಿಗಾಗಿ ಮಾನವ ಹೋರಾಟದ ವಸ್ತುವನ್ನು ನಿರೂಪಣೆಯನ್ನು ಆಶ್ರಯವಾಗಿಟ್ಟುಕೊಂಡು ಧ್ವಂಸಗೊಂಡ ಪ್ರಪಂಚದ ಮೂಲಕ ಮುದುಕನ ಪ್ರಯಾಣವು ನಿರೂಪಣೆಗಳ ಕಾಲಾತೀತ ಶಕ್ತಿಯನ್ನು ಎತ್ತಿ ತೋರಿಸುತ್ತದೆ. ರೂಪಾಂತರ ಸಿನಿಮಾ ಆಳವಾಗಿ ಪರಿಣಾಮ ಬೀರುವ ಕಥೆಯನ್ನು ಹೊಂದಿದೆ.

ಕಥೆ ಎಷ್ಟೇ ಗಟ್ಟಿಯಾಗಿದ್ದರೂ ರೂಪಾಂತರ ಸಿನಿಮಾ ಕೂಡ ಕೊರತೆಗಳಿಂದ ಹೊರತಾಗಿಲ್ಲ, ಆರಂಭದಲ್ಲಿ ಸಿನಿಮಾ ನಿಧಾನಗತಿ ಎನಿಸುತ್ತದೆ. ಸಿನಿಮಾದ ಕೆಲವು ಕಡೆ ಕಥೆ ಪ್ರೇಕ್ಷಕನ ತಾಳ್ಮೆ ಬೇಡುತ್ತದೆ. ಪ್ರವೀಣ್ ಶ್ರೀಯಾನ್ ಛಾಯಾಗ್ರಹಣ ಮೋಡಿ ಮಾಡುತ್ತದೆ. ಉಳಿದಂತೆ ಹಿನ್ನೆಲೆ ಸಂಗೀತ ಉತ್ತಮವಾಗಿದೆ.

ಚಿತ್ರದಲ್ಲಿನ ಪ್ರತಿಯೊಬ್ಬ ನಟರು ತಮ್ಮ ಪಾತ್ರಗಳಿಗೆ ಜೀವ ತುಂಬಿದ್ದಾರೆ. ಮಿಥಿಲೇಶ್ ಮತ್ತು ರಾಜ್ ಬಿ ಶೆಟ್ಟಿ ಅವರ ಸಂಯೋಜಿತ ಪ್ರಯತ್ನಗಳು ಕಥೆಗೆ ಜೀವ ತುಂಬಿ ರೂಪಾಂತರವನ್ನು ಆಕರ್ಷಕ ಪ್ರಯಾಣವಾಗಿ ರೂಪಿಸಿವೆ. ಈ ಸಂಕೀರ್ಣವಾದ ನಿರೂಪಣೆಗಳ ಮಧ್ಯೆ, ನಿಗೂಢವಾದ ಕಥೆಗಾರನು ಎದ್ದು ಕಾಣುತ್ತಾನೆ, ಆಶ್ಚರ್ಯಕರ ತಿರುವು ನೀಡುತ್ತಾನೆ.ಯಾವುದೇ ಕಥೆಗೂ ನಿರ್ದಿಷ್ಟ ಅಂತ್ಯವಿಲ್ಲ, ರೂಪಾಂತರ ಆಗುವ ಘಳಿಗೆಯಲ್ಲಿ ಕಥೆ ಅಂತ್ಯವಾಗುತ್ತದೆ.

# ದಪ್ಪ ಮತ್ತು ಹೊಳೆಯುವ ಕೂದಲಿಗೆ ನೆಲ್ಲಿಕಾಯಿ, ಶುಂಠಿ ಮತ್ತು ಕರಿಬೇವಿನ ಪ್ರಯೋಜನಗಳು



**ಕೂದಲು ಉದುರುವ, ಬೇಗನೆ ಕೂದಲು ಬೆಳ್ಳಗೆ ಆಗುವ ಸಮಸ್ಯೆ ಅನೇಕರಿಗೆ ಇರುತ್ತದೆ. ಇವುಗಳಿಗೆ ಪರಿಹಾರಗಳು ನಮ್ಮ ಮನೆಯಲ್ಲಿಯೇ ಇದೆ. ಪ್ರಕೃತಿಯಲ್ಲಿ ಸಿಗುವ ನೆಲ್ಲಿಕಾಯಿ, ಶುಂಠಿ ಮತ್ತು ಕರಿಬೇವಿನ ಎಲೆಗಳಿಂದ ನೀವು ದಪ್ಪ, ಕಪ್ಪಾದ ಹೊಳೆಯುವ ಕೂದಲನ್ನು ಪಡೆಯಬಹುದು. ಕೂದಲ ರಕ್ಷಣೆಯಲ್ಲಿ ಇವುಗಳು ಅದ್ಭುತವಾಗಿ ಸಹಾಯ ಮಾಡುತ್ತವೆ**

## ನೆಲ್ಲಿಕಾಯಿ



ನೆಲ್ಲಿಕಾಯಿ ಶತಮಾನಗಳಿಂದಲೂ ಭಾರತದಲ್ಲಿ ಸಾಂಪ್ರದಾಯಿಕ ಆಯುರ್ವೇದ ಔಷಧದಲ್ಲಿ ಪ್ರಧಾನವಾಗಿದೆ. ಇದರಲ್ಲಿ ವಿಟಮಿನ್ ಸಿ ಅಂಶ ಹೇರಳವಾಗಿದೆ. ಕೊಲಾಜನ್ ಉತ್ಪಾದನೆಗೆ ಸಹಾಯ ಮಾಡುತ್ತದೆ, ಇದು ಕೂದಲು ಬಲಪಡಿಸುವ ಮತ್ತು ಬೆಳವಣಿಗೆಯನ್ನು ಉತ್ತೇಜಿಸುವ ಪ್ರೋಟೀನ್ ಆಗಿದೆ.

ಕೂದಲಿನ ಬೆಳವಣಿಗೆ

ನೆಲ್ಲಿಕಾಯಿ ಸೇವನೆಯಿಂದ ಕೂದಲು ಚೆನ್ನಾಗಿ ಬೆಳೆಯುತ್ತದೆ ಮತ್ತು ಕೂದಲು ಉದುರುವಿಕೆಯನ್ನು ತಡೆಯುತ್ತದೆ.

ಇದರಲ್ಲಿರುವ ವಿಟಮಿನ್ ಸಿ ಅಂಶ ನೆತ್ತಿನಲ್ಲಿ ರಕ್ತದ ಪರಿಚಲನೆಯನ್ನು ಹೆಚ್ಚಿಸುವುದರಿಂದ ಕೂದಲಿನ ಮೂಲಕ್ಕೆ ಪೋಷಕಾಂಶ ಸಿಗುತ್ತದೆ.

ಅಕಾಲಿಕ ಬಿಳಿಯಾಗುವುದನ್ನು ತಡೆಯುತ್ತದೆ

ನೆಲ್ಲಿಕಾಯಿಯನ್ನು ನಿಯಮಿತವಾಗಿ ಬಳಸುವುದರಿಂದ ಕೂದಲು ಅಷ್ಟು ಬೇಗನೆ ಬಿಳಿಯಾಗುವುದಿಲ್ಲ.

**ಕೂದಲಿನ ಬುಡವನ್ನು ಬಲಿಷ್ಠಗೊಳಿಸುತ್ತದೆ**

ನೆಲ್ಲಿಕಾಯಿಯಲ್ಲಿರುವ ಜೀವಸತ್ವಗಳು ಮತ್ತು ಖನಿಜಗಳು ಕೂದಲಿನ ಬೇರುಗಳನ್ನು ಬಲಪಡಿಸುತ್ತದೆ. ಕೂದಲು ಒಡೆಯುವಿಕೆ ಮತ್ತು ಕೂದಲು ತುದಿಯಲ್ಲಿ ವಿಭಜನೆಯಾಗುವುದನ್ನು ಕಡಿಮೆ ಮಾಡುತ್ತದೆ. ಕೂದಲು ದಪ್ಪವಾಗಿ ಬೆಳೆಯಲು ಸಹಾಯ ಮಾಡುತ್ತದೆ.

ಕರಿಬೇವು

## ಕರಿಬೇವು



ಕರಿಬೇವಿನ ಎಲೆಗಳು ಕೇವಲ ನಿಮ್ಮ ಭಕ್ಷ್ಯಗಳಿಗೆ ಪರಿಮಳವನ್ನು ನೀಡುವುದು ಮಾತ್ರವಲ್ಲದೆ, ಪೋಷಕಾಂಶಗಳ ಸಮೃದ್ಧವಾಗಿದ್ದು, ಕೂದಲಿನ ಆರೋಗ್ಯಕ್ಕೆ ಬಹಳ ಉತ್ತಮವಾಗಿದೆ.

**ಪೋಷಕಾಂಶಗಳಲ್ಲಿ ಸಮೃದ್ಧ:** ಕರಿಬೇವಿನ ಎಲೆಗಳು ಅಮೈನೋ ಆಮ್ಲಗಳು, ಉತ್ಕರ್ಷಣ ನಿರೋಧಕಗಳು ಮತ್ತು ಬೀಟಾ–ಕ್ಯಾರೋಟಿನ್ನಂತಹ ಅಗತ್ಯ ಪೋಷಕಾಂಶಗಳಿಂದ ತುಂಬಿರುತ್ತವೆ, ಇದು ಕೂದಲು ಉದುರಿ ತೆಳುವಾಗುವುದನ್ನು ತಡೆಯುತ್ತದೆ.

**ಕೂದಲು ಉದುರುವಿಕೆಯನ್ನು ತಡೆಯುತ್ತದೆ:** ಕರಿಬೇವಿನ ಎಲೆಗಳು ಅಮೈನೋ ಆಮ್ಲಗಳು ಮತ್ತು ಉತ್ಕರ್ಷಣ ನಿರೋಧಕಗಳಲ್ಲಿ ಸಮೃದ್ಧವಾಗಿವೆ ಎಂದು ಅಧ್ಯಯನಗಳು ತೋರಿಸುತ್ತವೆ, ಇದು ನೆತ್ತಿಯನ್ನು ಪೋಷಿಸಲು ಮತ್ತು ಕೂದಲು ಕಿರುಚೀಲಗಳನ್ನು ಬಲಪಡಿಸಲು ಸಹಾಯ ಮಾಡುತ್ತದೆ.

**ಹೊಳಪು ನೀಡುತ್ತದೆ:** ಕರಿಬೇವಿನ ಎಲೆಗಳನ್ನು ನಿಯಮಿತವಾಗಿ ಬಳಸುವುದರಿಂದ ನಿಮ್ಮ ಕೂದಲಿಗೆ ನೈಸರ್ಗಿಕ ಹೊಳಪನ್ನು ನೀಡುತ್ತದೆ. ಎಲೆಗಳಲ್ಲಿರುವ ಉತ್ಕರ್ಷಣ ನಿರೋಧಕಗಳು ಹಾನಿಗೊಳಗಾದ ಕೂದಲನ್ನು ಸರಿಪಡಿಸುವುದರ ಜೊತೆಗೆ ನೈಸರ್ಗಿಕ ಹೊಳಪನ್ನು ನೀಡುತ್ತದೆ.

ಹೀಗೆ ನೆಲ್ಲಿಕಾಯಿ, ಶುಂಠಿ ಮತ್ತು ಕರಿಬೇವಿನ ಎಲೆಗಳನ್ನು ಒಟ್ಟಿಗೆ ಆಹಾರಗಳಲ್ಲಿ ಸೇರಿಸಿ ಆಗಾಗ ತಿನ್ನುವುದು ಸಹ ಉತ್ತಮವಾಗಿದೆ.

## ಶುಂಠಿ



ಶುಂಠಿ, ಅದರ ರುಚಿಕರವಾದ ಸುವಾಸನೆಯುಕ್ತ ಪದಾರ್ಥ. ಕೇವಲ ಅಡುಗೆಮನೆಯ ಆಹಾರಕ್ಕಿಂತ ಮಿಗಿಲಾಗಿ ಇದರಲ್ಲಿ ಆಯುರ್ವೇದ ಔಷಧಿಯ ಗುಣವಿದೆ. ಪ್ರಬಲ ಉರಿಯೂತದ ಮತ್ತು ನಂಜುನಿರೋಧಕ ಗುಣಗಳನ್ನು ಹೊಂದಿದ್ದು ನೆತ್ತಿ ಮತ್ತು ಕೂದಲ ಬುಡಕ್ಕೆ ಉತ್ತಮ.

**ತಲೆಹೊಟ್ಟು ನಿವಾರಕ:**

ಶುಂಠಿಯಲ್ಲಿರುವ ನಂಜುನಿರೋಧಕ ಗುಣಲಕ್ಷಣಗಳು ತಲೆಹೊಟ್ಟು ಮತ್ತು ತುರಿಕೆಯನ್ನು ನಿವಾರಿಸುತ್ತದೆ. ಇವುಗಳನ್ನು ನಮ್ಮ ಆಹಾರದಲ್ಲಿ ನಿತ್ಯ ಬಳಸುವುದರಿಂದ ನೆತ್ತಿಯನ್ನು ಸ್ವಚ್ಛವಾಗಿ ಮತ್ತು ಆರೋಗ್ಯಕರವಾಗಿ ಇರಿಸಿ ಕೂದಲಿನ ಬೆಳವಣಿಗೆಗೆ ಸಹಾಯ ಮಾಡುತ್ತದೆ.

**ಕೂದಲು ಉದುರುವುದನ್ನು ತಡೆಯುತ್ತದೆ:** ಶುಂಠಿಯು ಆಂಟಿಆಕ್ಸಿಡೆಂಟ್ಗಳನ್ನು ಹೊಂದಿದ್ದು ಅದು ಕೂದಲಿನ ಕೋಶಗಳನ್ನು ಹಾನಿಯಾಗದಂತೆ ರಕ್ಷಿಸುತ್ತದೆ. ಇದು ಕೂದಲಿನ ಎಳೆಗಳನ್ನು ಬಲಪಡಿಸಿ ಕೂದಲು ಉದುರುವಿಕೆಯನ್ನು ಕಡಿಮೆ ಮಾಡುತ್ತದೆ, ದಪ್ಪ ಕೂದಲು ಬೆಳೆಯಲು ಸಹಾಯ ಮಾಡುತ್ತದೆ.

# ಸೊಳ್ಳೆಯಿಂದ ಹರಡುವ ರೋಗಗಳಿವು, ನರಮಂಡಲದ ಮೇಲೂ ಪರಿಣಾಮ ಬೀರಬಹುದು ಎಚ್ಚರ!


ಸೊಳ್ಳೆಗಳು, ಸಾಮಾನ್ಯವಾಗಿ ಕೇವಲ ಕೀಟಗಳು, ಕಚ್ಚಿದರೆ ರಕ್ತ ಹೋಗಬಹುದು, ಹೆಚ್ಚೆಂದರೆ ಮಲೇರಿಯಾ, ಡೆಂಗ್ಯೂನಂತಹ ಜ್ವರ ಬರಬಹುದು ಎಂದು ಬಹುತೇಕರು ಭಾವಿಸುತ್ತಾರೆ. ವಾಸ್ತವವಾಗಿ ಮಾನವನ ಆರೋಗ್ಯಕ್ಕೆ ಗಂಭೀರ ಅಪಾಯವನ್ನುಂಟುಮಾಡುವ ಹಲವು ರೋಗಗಳಿಗೆ ವಾಹಕಗಳಾಗಿವೆ. ಮಲೇರಿಯಾ ತಡೆಗಟ್ಟುವ ಮತ್ತು ಜ್ವರಗಳ ವಿರುದ್ಧ ಹೋರಾಡುವ ಔಷಧಿಗಳ ಅಭಿವೃದ್ಧಿಯಲ್ಲಿ ಗಮನಾರ್ಹ ಪ್ರಗತಿಯನ್ನು ಸಾಧಿಸಲಾಗಿದೆಯಾದರೂ, ಈ ಕಾಯಿಲೆಗಳಿಂದ ಬರುವ ನರವೈಜ್ಞಾನಿಕ ತೊಡಕುಗಳಿಗೆ ಹೆಚ್ಚು ಪರಿಣಾಮಕಾರಿ ಚಿಕಿತ್ಸೆಗಳ ಅವಶ್ಯಕತೆಯಿದೆ. ಹೆಚ್ಚುವರಿಯಾಗಿ, ಈ ಕಾಯಿಲೆಗಳು ಮೆದುಳು ಮತ್ತು ನರಮಂಡಲದ ಮೇಲೆ ಪರಿಣಾಮ ಬೀರುವ ಕಾರ್ಯವಿಧಾನಗಳನ್ನು ಅರ್ಥಮಾಡಿಕೊಳ್ಳಲು ಹೆಚ್ಚಿನ ಸಂಶೋಧನೆ ಅಗತ್ಯವಿದೆ.

ಸೊಳ್ಳೆಗಳು ನರವೈಜ್ಞಾನಿಕ ತೊಡಕುಗಳನ್ನುಂಟುಮಾಡುವುದನ್ನು ತಗ್ಗಿಸಲು ಸೊಳ್ಳೆಯಿಂದ ಹರಡುವ ರೋಗಗಳನ್ನು ತಡೆಗಟ್ಟುವುದು ನಿರ್ಣಾಯಕವಾಗಿದೆ. ಮೈ ಕೈಗೆ ಸೊಳ್ಳೆಗಳು ಕಚ್ಚದಂತೆ ನೋಡಿಕೊಳ್ಳಿ. ಕೀಟ ನಿವಾರಕವನ್ನು ಬಳಸಿ. ಮೈತುಂಬಾ ಬಟ್ಟೆ ಧರಿಸಿ. ಸೊಳ್ಳೆಗಳು ಕಚ್ಚದಂತೆ ಸೊಳ್ಳೆ ಪರದೆಗಳನ್ನು ಬಳಸುವುದು ಸೇರಿದಂತೆ ವೈಯಕ್ತಿಕ ರಕ್ಷಣಾ ಕ್ರಮಗಳು ಮತ್ತು ತಂತ್ರಗಳನ್ನು ಪಾಲಿಸಿ.

ಮನೆ ಸುತ್ತಮುತ್ತ ವಿಶೇಷವಾಗಿ ಮಳೆಗಾಲದಲ್ಲಿ ನೀರು ನಿಂತುಕೊಳ್ಳದಂತೆ ನೋಡಿಕೊಳ್ಳಿ. ಸೊಳ್ಳೆ ಉತ್ಪತ್ತಿ ತಾಣಗಳನ್ನು ನಿರ್ಮೂಲನೆ ಮಾಡುವಂತಹ ಪರಿಸರ ಕ್ರಮಗಳು, ಸಾರ್ವಜನಿಕ ಆರೋಗ್ಯ ಕ್ರಮಗಳಾದ ವೆಕ್ಟರ್ ನಿಯಂತ್ರಣ ಕಾರ್ಯಕ್ರಮ ಮತ್ತು ಲಸಿಕೆ ಅಭಿಯಾನವನ್ನು ಕೈಗೊಳ್ಳಿ.

ಡೆಂಗ್ಯೂ ಮತ್ತು ಮಲೇರಿಯಾಗಳನ್ನು ಮೀರಿ ನರಗಳ ಮೇಲೆ ಹರಡುವ ಕಾಯಿಲೆಗಳಲ್ಲಿ ವೆಸ್ಟ್ ನೈಲ್ ವೈರಸ್ ಮತ್ತು ಜಪಾನೀಸ್






ಎನ್ಸೆಫಾಲಿಟಿಸ್ ನಂತಹ ಇತರ ಸೊಳ್ಳೆಯಿಂದ ಹರಡುವ ವೈರಸ್ ಗಳು ಎನ್ಸೆಫಾಲಿಟಿಸ್, ಮೆನಿಂಜೈಟಿಸ್ ಮತ್ತು ಪಾರ್ಶ್ವವಾಯು ಸೇರಿದಂತೆ ನರಗಳಿಗೆ ಅನೇಕ ತೊಡಕುಗಳನ್ನು ಉಂಟುಮಾಡಬಹುದು. ಈ ಪರಿಸ್ಥಿತಿಗಳು ಅರಿವಿನ ದೌರ್ಬಲ್ಯ, ರೋಗಗಳನ್ನು ಉತ್ಬಣಗೊಳಿಸುವಿಕೆ ಮತ್ತು ಸುಸ್ತು ಮತ್ತು ಸ್ನಾಯು ನಿಯಂತ್ರಣಗಳ ಕೊರತೆಯಂತಹ ದೀರ್ಘಕಾಲೀನ ಪರಿಣಾಮಗಳನ್ನು ಉಂಟುಮಾಡಬಹುದು.

ಈಡಿಸ್ ಸೊಳ್ಳೆಗಳಿಂದ ಹರಡುವ ವೈರಲ್ ಸೋಂಕು, ನರವೈಜ್ಞಾನಿಕ ಪರಿಣಾಮಗಳನ್ನು ಬೀರುವ ಸೊಳ್ಳೆಯಿಂದ ಹರಡುವ ಮತ್ತೊಂದು ಕಾಯಿಲೆಯಾಗಿದೆ. ಹೆಚ್ಚಿನ ಡೆಂಗ್ಯೂ ಸೋಂಕುಗಳು ಜ್ವರ, ತಲೆನೋವು ಮತ್ತು ಸ್ನಾಯು ನೋವಿನಂತಹ ಸೌಮ್ಯ ಲಕ್ಷಣಗಳಿಗೆ ಕಾರಣವಾಗಿದ್ದರೂ, ಕೆಲವು ಪ್ರಕರಣಗಳಲ್ಲಿ ತೀವ್ರ ಸ್ವರೂಪ ಪಡೆಯಬಹುದು.

ಇದು ರಕ್ತಸ್ರಾವ, ಅಂಗ ಹಾನಿ ಮತ್ತು ತುಲನಾತ್ಮಕವಾಗಿ ಆಘಾತವನ್ನು ಉಂಟುಮಾಡುತ್ತದೆ. ಡೆಂಗ್ಯೂವಿನಿಂದ ಉಂಟಾಗುವ ನರವೈಜ್ಞಾನಿಕ ತೊಡಕುಗಳು ಬರುವುದು ಅಪರೂಪ ಆದರೆ ತೀವ್ರ ಸ್ವರೂಪವಾಗಿರುತ್ತದೆ. ಈ ತೊಡಕುಗಳಲ್ಲಿ ಎನ್ಸೆಫಾಲಿಟಿಸ್ (ಮೆದುಳಿನ ಉರಿಯೂತ), ಮೆನಿಂಜೈಟಿಸ್ ( ಮೆದುಳು ಮತ್ತು ಬೆನ್ನುಹುರಿಯ ಸುತ್ತಲಿನ ರಕ್ಷಣಾತ್ಮಕ ಪೊರೆಗಳು ಮೆನಿಂಜಸ್ ಉರಿಯೂತ) ಮತ್ತು ಪಾರ್ಶ್ವವಾಯು ಉಂಟುಮಾಡುವ ಸ್ಥಿತಿಯಾದ ಗುಯಿಲಿನ್–ಬಾರ್ರೆ ಸಿಂಡ್ರೋಮ್ ಆಗುತ್ತವೆ.

ಮಲೇರಿಯಾ ಜ್ವರ ಅನಾಫಿಲಿಸ್ ಸೊಳ್ಳೆಯಿಂದ ಹರಡುವ ಪರಾವಲಂಬಿ ಸೋಂಕು, ಇದು ಮನುಷ್ಯನ ಮೆದುಳಿನ ನರಗಳ ಮೇಲೆ ಸಾಕಷ್ಟು ಪರಿಣಾಮ ಬೀರುತ್ತದೆ. ಮಲೇರಿಯಾ ಪರಾವಲಂಬಿ ಮೆದುಳಿನ ಮೇಲೆ ದಾಳಿ ಮಾಡಿದಾಗ ಸೆರೆಬ್ರಲ್ ಮಲೇರಿಯಾ ಇದರ ಅತ್ಯಂತ ಅಪಾಯಕಾರಿ ರೂಪ ತಾಳುತ್ತದೆ.

### ಸಮಸ್ಯೆಗಳು:

**ಇದರಿಂದ ತೀವ್ರವಾದ ತಲೆನೋವು, ವರ್ತನೆಯಲ್ಲಿ ಗೊಂದಲದ ಲಕ್ಷಣಗಳು, ರೋಗಗ್ರಸ್ತವಾಗುವಿಕೆಗಳು, ಕೋಮಾ ಮತ್ತು ಸಾವು ಸೇರಿದಂತೆ ಹಲವಾರು ನರವೈಜ್ಞಾನಿಕ ಅಪಾಯಗಳು ಕೂಡ ಎದುರಾಗಬಹುದು. ಅನಾಫಿಲಿಸ್ ಸೊಳ್ಳೆ ಪರಾವಲಂಬಿಯಿಂದ ಮಿದುಳಿಗೆ ಹಾನಿಯಾಗುತ್ತದೆ. ಉರಿಯೂತ, ಮೆದುಳಿಗೆ ರಕ್ತ ಸಂಚಾರಕ್ಕೆ ಅಡ್ಡಿ ಮತ್ತು ಮೆದುಳಿನ ಕೋಶಗಳ ಮೇಲೆ ನೇರವಾಗಿ ಆಕ್ರಮಣ ಮಾಡುತ್ತದೆ**

# ದಿನಾ ರಾತ್ರಿ ಬಿಯರ್ ಕುಡಿಯುವ ಅಭ್ಯಾಸ ದಿಂದಾಗುವ ಪರಿಣಾಮ

ಆಲ್ಕೋಹಾಲ್ ದೇಹಕ್ಕೆ ತುಂಬಾ ಹಾನಿಯನ್ನು ಉಂಟು ಮಾಡುವುದು ಎಂದು ತಿಳಿದಿದ್ದರೂ ಕೆಲವರು ನಿತ್ಯವೂ ಅದನ್ನು ಕುಡಿಯುವರು. ಇದರಿಂದ ಆರೋಗ್ಯಕ್ಕೆ ಹಾನಿ ಆಗುವುದು ಮಾತ್ರವಲ್ಲದೆ, ಮಾನಸಿಕ ನೆಮ್ಮದಿಯು ದೂರವಾಗುವುದು. ಅದರಲ್ಲೂ ಇಂದಿನ ಯುವ ಸಮುದಾಯವು ಬಿಯರ್ ಅನ್ನು ಹೆಚ್ಚು ಮೆಚ್ಚಿಕೊಂಡಿದೆ.

ಆದರೆ ನಿತ್ಯವೂ ಬಿಯರ್ ಸೇವನೆ ಮಾಡಿದರೆ ಆಗ ಇದರಿಂದ ಹಾನಿಯಾಗುವುದು ನಿಶ್ಚಿತ. ನಿತ್ಯವೂ ಬಿಯರ್ ಸೇವನೆ ಮಾಡಿದರೆ, ಆಗ ಇದರಿಂದ ಯಕೃತ್ ಗೆ ಹಾನಿಯಾಗುವುದು. ಇದರ ಪರಿಣಾಮವಾಗಿ ದೇಹದಲ್ಲಿ ವಿಷಕಾರಿ ಅಂಶಗಳು ಜಮೆಯಾಗಿ, ಇನ್ನಿತರ ಆರೋಗ್ಯ ಸಮಸ್ಯೆಗಳಿಗೆ ಕಾರಣವಾಗಬಹುದು.

ವಿಷಕಾರಿ ಅಂಶಗಳನ್ನು ಹೊರಗೆ ಹಾಕಲು, ಚಯಾಪಚಯ ಮತ್ತು ಪೋಷಕಾಂಶಗಳನ್ನು ಜಮೆ ಮಾಡುವಲ್ಲಿ ಯಕೃತ್ ಪ್ರಮುಖ ಪಾತ್ರ ವಹಿಸುವುದು. ನಿತ್ಯವೂ ಬಿಯರ್ ಕುಡಿದರೆ, ಅದರಲ್ಲೂ ರಾತ್ರಿ ವೇಳೆ ಇದನ್ನು ಕುಡಿದರೆ, ಆಗ ಅದು ಯಕೃತ್ ಗೆ ಹಾನಿ ಉಂಟು ಮಾಡುವುದು.ಆಲ್ಕೋಹಾಲ್ ನ್ನು ವಿಘಟಿಸುವಲ್ಲಿ ಯಕೃತ್ ಮಾತ್ರ ಕೆಲಸ ಮಾಡುವುದು. ನಿತ್ಯವೂ ಇದನ್ನು ಸೇವನೆ ಮಾಡಿದರೆ, ಆಗ ಇದರಿಂದ ಯಕೃತ್ ಹೆಚ್ಚುವರಿ ಕೆಲಸ ಮಾಡಬೇಕಾಗುತ್ತದೆ. ಇದರಿಂದ ಯಕೃತ್ ಗೆ ಹಾನಿಯಾಗಬಹುದು. ಅತಿಯಾಗಿ ಸೇವನೆ ಮಾಡಿದರೆ, ಆಗ ಇದು ಯಕೃತ್ ನ ಅಂಗಾಂಶಗಳಲ್ಲಿ ಉರಿಯೂತ ಉಂಟು ಮಾಡಬಹುದು. ಇದರ ಪರಿಣಾಮ ಫ್ಯಾಟಿ ಲಿವರ್ ಕಾಯಿಲೆ, ಆಲ್ಕೋಹಾಲಿಕ್ ಹೆಪಟೈಟಿಸ್ ಅಥವಾ ಸಿರೋಸಿಸ್ ಕಾಡಬಹುದು.ನಿತ್ಯವೂ ಬಿಯರ್ ಸೇವನೆ ಮಾಡಿದರೆ ಆಗ ಇದರಿಂದ ದೇಹದಲ್ಲಿ



ಕೊಬ್ಬಿನಾಂಶವು ಜಮೆ ಆಗುವುದು ಮತ್ತು ಇದರಿಂದ ಫ್ಯಾಟಿ ಲಿವರ್ ಸಮಸ್ಯೆಯು ಕಾಡಬಹುದು.

ನಿಯಮಿತವಾಗಿ ಬಿಯರ್ ಕುಡಿದರೆ, ಆಗ ಯಕೃತ್ ಆಲ್ಕೋಹಾಲ್ ನ್ನು ವಿಘಟನೆ ಮಾಡುವಲ್ಲಿ ಗಮನಕೇಂದ್ರೀಕರಿಸುವುದು ಮತ್ತು ಇದರಿಂದ ಕೊಬ್ಬು ಸರಿಯಾದ ಪ್ರಕ್ರಿಯೆಗೆ ಒಳಪಡದೆ ಇರುವ ಕಾರಣ ಅತಿಯಾಗಿ ಕೊಬ್ಬು ಜಮೆಯಾಗುವುದು ಮತ್ತು ಲಿವರ್ ಊದಿಕೊಳ್ಳುವುದು. ದೀರ್ಘಕಾಲ ಇದಕ್ಕೆ ಸರಿಯಾದ ಚಿಕಿತ್ಸೆ ನೀಡದೆ ಇದ್ದರೆ ಆಗ ಇದರಿಂದ ಇನ್ನಷ್ಟು ಆರೋಗ್ಯ ಸಮಸ್ಯೆಗಳು ಕಾಡಬಹುದು.

ನಿತ್ಯವೂ ಬಿಯರ್ ಕುಡಿದರೆ, ಆಗ ಇದರಿದ ಗಂಭೀರ ಆರೋಗ್ಯ ಸಮಸ್ಯೆ ಯಾಗಿರುವ ಆಲ್ಕೋಹಾಲಿಕ್ ಹೆಪಟೈಟಿಸ್ ಬರಬಹುದು. ಅತಿಯಾಗಿ ಆಲ್ಕೋಹಾಲ್ ಸೇವನೆ ಮಾಡುವ ಕಾರಣದಿಂದಾಗಿ ಯಕೃತ್ ಉರಿ ಯೂತಕ್ಕೆ ಒಳಗಾಗಬಹುದು. ಇದರ ಕೆಲವು ಲಕ್ಷಣಗಳೆಂದರೆ ಕಾಮಾಲೆ, ಹೊಟ್ಟೆ ನೋವು ಮತ್ತು ಯಕೃತ್ ವೈಫಲ್ಯ.ನಿತ್ಯವೂ ಬಿಯರ್ ಕುಡಿದರೆ, ಆಗ ಇದರಿಂದ ಲಿವರ್ ಸಿರೋಸಿಸ್ ಉಂಟಾಗಬಹುದು. ತುಂಬಾ ಅತಿಯಾಗಿ ನಿತ್ಯವೂ ಆಲ್ಕೋಹಾಲ್ ಸೇವಿಸಿದರೆ ಆಗ ಇದರಿಂದ ಸಿರೋಸಿಸ್ ಉಂಟಾಗಬಹುದು.


# ಹಾರ್ಟ್ ಬ್ಲಾಕೇಜ್ ಆಗದಂತೆ ತಡೆದು ಹೃದಯದ ಆರೋಗ್ಯ ಕಾಪಾಡುವ ಗಿಮೂಲಿಕೆ ಚಹಾಗಳಿವು

ಹೃದಯ ಸಂಬಂಧಿ ಸಮಸ್ಯೆಗಳು ಕಾಡಿದರೆ, ಆಗ ಜೀವನವೇ ದುಸ್ತರವೆನಿಸುವುದು. ಯಾವಾಗ ಅಪಾಯ ಬರುವುದೋ ಎನ್ನುವ ಭೀತಿ ಮನದ ಮೂಲೆಯಲ್ಲಿ ಇದ್ದೇ ಇರುತ್ತದೆ. ಇದಕ್ಕಾಗಿ ನಮ್ಮ ಜೀವನಶೈಲಿ, ಆಹಾರ ಕ್ರಮ ಇತ್ಯಾದಿಗಳನ್ನು ಬದಲಾಯಿಸಿಕೊಂಡರೆ, ಆಗ ಖಂಡಿತವಾಗಿಯೂ ನಮ್ಮ ಹೃದಯದ ಆರೋಗ್ಯ ಕಾಪಾಡಿಕೊಳ್ಳಬಹುದು. ಅದರಲ್ಲೂ ರಕ್ತದಲ್ಲಿ ಕೊಲೆಸ್ಟ್ರಾಲ್, ಕೊಬ್ಬು, ಇತ್ಯಾದಿ ವಿಷಕಾರಿ ಅಂಶಗಳು ಹೆಚ್ಚಾಗಿ ರಕ್ತನಾಳದಲ್ಲಿ ಜಮೆಯಾಗಿ ಬ್ಲಾಕ್ ಆಗಬಹುದು. ಈ ಸಂದರ್ಭದಲ್ಲಿ ರಕ್ತನಾಳ ವನ್ನು ಶುಚಿ ಮಾಡಲು ಕೆಲವೊಂದು ಮನೆಮದ್ದುಗಳನ್ನು ಬಳಕೆ ಮಾಡಿದರೆ ತುಂಬಾ ಒಳ್ಳೆಯದು. ಬೆಳಗ್ಗೆ ನೀವು ಸಾಮಾನ್ಯ ಚಹಾ ಕುಡಿಯುವ ಬದಲು ಈ ಗಿಡಮೂಲಿಕೆ ಚಹಾಗಳನ್ನು ಕುಡಿದರೆ, ಆಗ ಇದರಿಂದ ರಕ್ತನಾಳದಲ್ಲಿ ಇರುವ ವಿಷಕಾರಿ ಅಂಶಗಳನ್ನು ಹೊರಗೆ ಹಾಕುವುದು ಮತ್ತು ರಕ್ತ ಶುದ್ಧೀಕರಿಸಿ, ಹೃದಯದ ಆರೋಗ್ಯ ಕಾಪಾಡುವುದು.

ಗ್ರೀನ್ ಟೀ ಬಗ್ಗೆ ಹೆಚ್ಚು ವಿವರವೇ ಅಗತ್ಯವಿಲ್ಲ!ಯಾಕೆಂದರೆ ಇಂದಿನ ದಿನಗಳಲ್ಲಿ ಇದು ತುಂಬಾ ಟ್ರೆಂಡ್ ಆಗುತ್ತಿರುವ ಪಾನೀಯ ಇದು.

ಈ ಚಹಾದ ಬಗ್ಗೆ ಆರೋಗ್ಯ ತಜ್ಞರು ಹೇಳುವ ಪ್ರಕಾರ ಹಾಲು ಹಾಕದೆ ಕುಡಿಯುವ ಗ್ರೀನ್ ಟೀ ನಮ್ಮ ದೇಹದ ಕೆಟ್ಟ ಕೊಬ್ಬಿನಾಂಶವನ್ನು ಕರಗಿಸುವುದು ಮಾತ್ರವಲ್ಲದೆ, ಹೃದಯದ ಆರೋಗ್ಯವನ್ನು ಕಾಪಾಲು ನೆರವಾಗುತ್ತದೆ. ಪ್ರಮುಖವಾಗಿ ಮುಂಜಾನೆಯ ಸಮಯದಲ್ಲಿ ಖಾಲಿ ಹೊಟ್ಟೆಗೆ ತಿಂಡಿ ತಿನ್ನುವ ಮುಂಚೆ ನಿಂಬೆಹಣ್ಣು ಮಿಶ್ರಿತ ಗ್ರೀನ್ ಟೀ ಕುಡಿಯುವ ಅಭ್ಯಾಸ ಮಾಡಿಕೊಂಡರೆ ಆರೋಗ್ಯಕ್ಕೆ ಇನ್ನೂ ಒಳ್ಳೆಯದು.

ಇಲ್ಲಿ ಮುಖ್ಯವಾಗಿ ಗಮನಿಸಬೇಕಾದ ಸಂಗತಿ





ಏನೆಂದ್ರೆ ಈ ಪಾನೀಯದಲ್ಲಿ ಆಂಟಿ ಆಕ್ಸಿಡೆಂಟ್ ಅಂಶಗಳು ಹೇರಳವಾಗಿ ಕಂಡು ಬರುವುದರಿಂದ ನಮ್ಮ ದೇಹದಲ್ಲಿರುವ ಪ್ರಮುಖ ಜೀವಕೋಶಗಳನ್ನು ಆಕ್ಸಿಡೆಟೀವ್ ಹಾನಿಯಿಂದ ರಕ್ಷಣೆ ಮಾಡುತ್ತದೆ.

? ಅಲ್ಲದೆ ಕ್ಯಾಟಿಚಿನ್ ಎನ್ನುವ ಪ್ರಬಲ ಆ?ಯಂಟಿಆಕ್ಸಿಡೆಂಟ್ ಅಂಶವು ಕೊಲೆಸ್ಟ್ರಾಲ್ ಕಡಿಮೆ ಮಾಡುವುದು ಮತ್ತು ರಕ್ತ ಸಂಚಾರವನ್ನು ಸುಧಾರಣೆ ಮಾಡುವುದು. ಇದರಿಂದ ರಕ್ತನಾಳವು ಆರೋಗ್ಯವಾಗಿರುವುದು. ಬೆಳಗ್ಗೆ ಒಂದು ಕಪ್ ಗ್ರೀನ್ ಟೀ ಕುಡಿದರೆ ಆಗ ಇದು ರಕ್ತನಾಳದಲ್ಲಿನ ವಿಷಕಾರಿ ಅಂಶವನ್ನು ಹೊರಗೆ ಹಾಕುವುದು.ತಾಜಾವಾಗಿ ತಯಾರಿಸಿದ ದಾಸವಾಳದ ಚಹಾ ಕುಡಿದರೆ ಆಗ ಇದು ನೈಸರ್ಗಿಕ ರೀತಿಯಿಂದ ರಕ್ತನಾಳವನ್ನು ಶುದ್ಧೀಕರಿ ಸುವುದು. ಆಂಥೋಸಯಾನಿನ್ ಗಳು ಮತ್ತು ಪಾಲಿಫಿನಾಲ್ ಗಳು ದಾಸವಾಳದ ಚಹಾದಲ್ಲಿ ಉತ್ತಮ ಪ್ರಮಾಣದಲ್ಲಿದ್ದು,ಇದು ರಕ್ತದೊತ್ತಡ ಹಾಗೂ ಕೊಲೆಸ್ಟ್ರಾಲ್ ತಗ್ಗಿಸುವುದು.

ಈ ಬಗ್ಗೆ ಸಂಶೋಧನೆಗಳು ಹೇಳುವ ಹಾಗೆ ರಕ್ತದ ಒತ್ತಡದ ಸಮಸ್ಯೆಯಿಂದ ಬಳಲುತ್ತಿರುತ್ತಾರೆ, ಅಂತಹವರು ಇನ್ನು ಮುಂದೆ ದಾಸವಾಳ ಚಹಾ ಸೇವನೆ ಮಾಡುವ ಅಭ್ಯಾಸ ಇಟ್ಟುಕೊಳ್ಳಬೇಕು ಎಂದು ಸಲಹೆ ನೀಡುತ್ತಾರೆ.

# ಮನೆಯಲ್ಲಿರುವ ತುಳಸಿ ಗಿಡ ಒಣಗಬಾರದೆಂದರೆ ಈ ಟಿಪ್ಸ್ ಅನುಸರಿಸಿ



ಬಹುತೇಕ ಹಿಂದೂಗಳ ಮನೆಗಳಲ್ಲಿ ತುಳಸಿ ಗಿಡಗಳನ್ನು ಕಾಣಬಹುದು. ಹಿಂದೂ ಧರ್ಮದಲ್ಲಿ ತುಳಸಿ ಗಿಡಕ್ಕೆ ಹೆಚ್ಚಿನ ಮಹತ್ವವಿದೆ. ಅಷ್ಟೇ ಅಲ್ಲದೆ ಆಯುರ್ವೇದಿಕ್ ಗುಣಗಳನ್ನು ಹೊಂದಿರುವ ಇದು ಔಷಧಿಯಾಗಿಯೂ ಬಳಸಲಾಗುತ್ತದೆ. ತುಳಸಿ ಗಿಡದ ಆರೈಕೆ ಮಾಡಿದ್ರೆ ಮಾತ್ರ ತುಳಸಿ ಚೆನ್ನಾಗಿ ಬೆಳೆಯುತ್ತದೆ. ಆದರೆ ಕೆಲವರು ಎಷ್ಟೇ ಆರೈಕೆ ಮಾಡಿದರೂ ತುಳಸಿ ಗಿಡ ಬೆಳೆಯೋದೇ ಇಲ್ಲ. ಒಣಗಿ ಹೋಗುತ್ತದೆ. ನೀವೂ ಇಂತಹದ್ದೇ ಸಮಸ್ಯೆಯನ್ನು ಎದುರಿಸುತ್ತಿದ್ದರೆ ಇಲ್ಲಿದೆ ನಿಮಗಾಗಿ ಕೆಲವು ಟಿಪ್ಸ್.

ಮಣ್ಣು ಮತ್ತು ನೀರನ್ನು ಪರೀಕ್ಷಿಸಿ

ಹಾಲು ಸಿಂಪಡಿಸಿ

ಗೊಬ್ಬರ ಬಳಸಿ

ಈ ವಿಷಯಗಳನ್ನು ನೆನಪಿನಲ್ಲಿಡಿ

ಮಳೆಗಾಲದಲ್ಲಿ ತುಳಸಿ ಗಿಡದಲ್ಲಿ ನೀರು ತುಂಬಿಕೊಂಡರೆ ತಕ್ಷಣ ಖಾಲಿ ಮಾಡಿ. ಏಕೆಂದರೆ ಹೆಚ್ಚುವರಿ ನೀರಿನಿಂದ, ಎಲೆಗಳು ಸಸ್ಯದಿಂದ ಬೀಳಲು ಪ್ರಾರಂಭಿಸುತ್ತವೆ ಮತ್ತು ಇದರಿಂದಾಗಿ ಸಸ್ಯವು ಬೇಗನೆ ಒಣಗಲು ಪ್ರಾರಂಭಿಸುತ್ತದೆ. ತುಳಸಿ ಸಸ್ಯದ ಮಣ್ಣು ತೇವಗೊಂಡಿದ್ದರೆ, ನಂತರ ಅದನ್ನು ಒಣ ಮಣ್ಣು ಮತ್ತು ಮರಳಿನಿಂದ ತುಂಬಿಸಿ. ಇದರೊಂದಿಗೆ, ಸಸ್ಯದ ಬೇರುಗಳು ಮತ್ತೆ ಉಸಿರಾಡಲು ಪ್ರಾರಂಭಿಸುತ್ತವೆ ಮತ್ತು ಸಸ್ಯವು ಹಸಿರಾಗುತ್ತದೆ.

# ನುಗ್ಗೆ ಸೊಪ್ಪನ್ನು ನಿಮ್ಮ ಆಹಾರದಲ್ಲಿ ಸೇರಿಸುವುದು ಒಳ್ಳೆಯದು



**ಮೊರಿಂಗಾ ಎಂದು** ಕರೆಯಲ್ಪಡುವ ನುಗ್ಗೆಸೊಪ್ಪಿನಲ್ಲಿ ಹಲವಾರು ರೀತಿಯ ಆರೋಗ್ಯಕಾರಿ ಪ್ರಯೋಜನಗಳಿವೆ. ಇದು ಕೂದಲು ಮತ್ತು ಚರ್ಮವನ್ನು ರಕ್ಷಿಸುವುದು ಮತ್ತು ಪೋಷಿಸುವುದು, ಊತಕ್ಕೆ ಚಿಕಿತ್ಸೆ ನೀಡುವಲ್ಲಿ ಮಹತ್ತರ ಪಾತ್ರವಹಿಸುತ್ತದೆ , ಅಲ್ಲದೆ, ಜೀರ್ಣಾಂಗ ಕ್ರಿಯೆಯಲ್ಲಿಯೂ ಸಹಾಯಕಾರಿ ಯಕೃತ್ತನ್ನು ರಕ್ಷಿಸುವುದು, ಹೊಟ್ಟೆಯ ತೊಂದರೆಗೆ ಚಿಕಿತ್ಸೆ ನೀಡುವುದುನುಗ್ಗೆ ಸೊಪ್ಪಿನ ಪ್ರಮುಖವಾದ ವೈಶಿಷ್ಟ್ಯವೇನೆಂದರೆ ಅದು ವಿಟಮಿನ್ ಮತ್ತು ಖನಿಜಾಂಶಗಳನ್ನು ಸಮೃದ್ಧವಾಗಿ ಹೊಂದಿರುವುದು. ಇದರ ಎಲೆಗಳಲ್ಲಿ ವಿಟಮಿನ್ ಎ, ವಿಟಮಿನ್ ಸಿ ಮತ್ತು ವಿಟಮಿನ್ ಇ ಯಿಂದ ತುಂಬಿರುತ್ತವೆ. ಇದು ದೇಹದಲ್ಲಿಯ ಸ್ವತಂತ್ರ ರಾಡಿಕಲ್ ಗಳ ವಿರುದ್ಧ ಹೋರಾಡಲು ಸಹಾಯ ಮಾಡುತ್ತದೆ ಮತ್ತು ಒಟ್ಟಾರೆ ಆರೋಗ್ಯ ಮತ್ತು ದೇಹದಲ್ಲಿ ಪ್ರತಿರಕ್ಷಣಾ ವ್ಯವಸ್ಥೆಯನ್ನು ಬೆಂಬಲಿಸುತ್ತದೆ.

**ಇವುಗಳು ಪ್ರೋಟೀನ್ ಮೂಲ**

ಪ್ರೋಟೀನ್ ಮೂಲವಾಗಿರುವ ಇದು ಒಂಬತ್ತು ಅಗತ್ಯ ಪೋಷಕಾಂಶಗಳನ್ನು ಒದಗಿಸುತ್ತದೆ. ಆಫ್ರಿಕಾ ಮತ್ತು ಏಷ್ಯಾದ ಭಾಗಗಳಲ್ಲಿ ಹೆಚ್ಚಿನ ಪ್ರಮಾಣದಲ್ಲಿ ಕಾಣ ಸಿಗುವ ಮೊರಿಂಗಾ ಅಥವಾ ನುಗ್ಗೆ ಮರವನ್ನು 'ಮಿರಾಕಲ್ ಟ್ರೀ ' ಎಂದು ಕರೆಯಲಾಗುತ್ತದೆ. ಇದು ತನ್ನಲ್ಲಿಯ ಪ್ರಭಾವಶಾಲಿ ಮತ್ತು ಪೋಷಕಾಂಶಗಳಿಗೆ ಹೆಸರುವಾಸಿಯಾಗಿದೆ.

**ಅಮೈನೋ ಆಮ್ಲ ಹೇರಳವಾಗಿದೆ**

**ಸಂಧಿವಾತಗಳನ್ನು ನಿವಾರಿಸಲು**

**ಜೀವ ಸತ್ವಗಳು ಮತ್ತು ಖನಿಜಾಂಶಗಳು ಹೇರಳವಾಗಿದೆ**

**ಅಡುಗೆ ಮನೆಯಲ್ಲಿ ನುಗ್ಗೆಕಾಯಿ**ಅಡುಗೆ ಮನೆಯಲ್ಲಿ ನುಗ್ಗೆಕಾಯಿ ಮತ್ತು ಸೊಪ್ಪು ಬಹುಮುಖ್ಯವಾದ ಪಾತ್ರ ನಿರ್ವಹಿಸುತ್ತದೆ. ನುಗ್ಗೆಕಾಯಿಯನ್ನು ಸಾಂಬಾರು ಇತ್ಯಾದಿಗಳಲ್ಲಿ ಉಪಯೋಗಿಸಬಹುದು.

# ಮಧ್ಯಾಹ್ನ ಊಟ ಮಾಡಿದ ನಂತರ ಒಂದು ಕಪ್ ಮೊಸರು ಸೇವನೆ

ಮದುವೆ ಕಾರ್ಯಕ್ರಮಕ್ಕೋ ಅಥವಾ ಬೇರೆ ಯಾವುದೋ ಫಂಕ್ಷನ್ಗೋ, ಇಲ್ಲಾಂದ್ರೆ ಮಧ್ಯಾಹ್ನದ ಊಟಕ್ಕೆ ಹೋಟೆಲ್ಗೆ ಹೋಗಿ ಸೌತ್ ಇಂಡಿಯಾ ಮೀಲ್ಸ್ ಥಾಲಿ ಆರ್ಡರ್ ಮಾಡಿದರೆ, ಊಟದ ತಟ್ಟೆಯ ಪಕ್ಕ ಒಂದು ಸಣ್ಣ ಕಪ್ ಮೊಸರು ಇದ್ದೇ ಇರುವುದು! ಇದಕ್ಕೆ ಕಾರಣ ಇಷ್ಟೇ ಹೊಟ್ಟೆ ತುಂಬಾ ಊಟ ಮಾಡಿದ ನಂತರ, ಒಂದು ಸಣ್ಣ ಕಪ್ ಮೊಸರು ಸೇವನೆ ಮಾಡುವುದರಿಂ

, ಜೀರ್ಣಕ್ರಿಯೆ ಪ್ರಕ್ರಿಯೆಯು ಸರಾಗವಾಗಿ ನಡೆಯುವುರ ಜೊತೆಗೆ ಹಲವಾರು ರೀತಿಯಲ್ಲಿ ಪ್ರಯೋಜನಗಳು ಸಿಗುತ್ತವೆ

**ಜೀರ್ಣಕ್ರಿಯೆ ಆರೋಗ್ಯಕ್ಕೆ**

ಮೊಸರಿನಲ್ಲಿ ವಿಟಮಿನ್, ಪ್ರೋಟೀನ್ ಮತ್ತು ಲ್ಯಾಕ್ಟೋ ಬಾಸಿಲಸ್ ಬ್ಯಾಕ್ಟೀರಿಯಾವಿದ್ದು,ನಮ್ಮ ರೋಗ ನಿರೋಧಕ ಶಕ್ತಿಯನ್ನು ಹೆಚ್ಚಿಸುವ ಗುಣ ಮೊಸರಿನಲ್ಲಿ ಕಂಡುಬರುತ್ತದೆ.

ಪ್ರೊಬಯೋಟಿಕ್ ಗುಣಲಕ್ಷಣಗಳನ್ನು ಒಳಗೊಂಡಿರುವ ಮೊಸರು ನಮ್ಮ ಕರುಳಿನ ಆರೋಗ್ಯವನ್ನು ವೃದ್ಧಿಸುವುದರ ಜೊತೆಗೆ ಕಾಯಿಲೆಗಳ ವಿರುದ್ಧ ಹೋರಾಡುವ ಉತ್ತಮ ಬ್ಯಾಕ್ಟೀರಿಯಗಳನ್ನು ಅಭಿವೃದ್ಧಿ ಪಡಿಸುತ್ತದೆ.

ಇನ್ನು ವಿಶೇಷವಾಗಿಮೊಸರಿನಲ್ಲಿ ವಿಟಮಿನ್ ಬಿ12 ಅಂಶ ಅಧಿಕ ಪ್ರಮಾಣದಲ್ಲಿ ಕಂಡುಬರುವುದರ ಜೊತೆಗೆ, ದೇಹದ ಆಂತರಿಕ ಭಾಗದಲ್ಲಿ ಅಂದರೆ ಜೀರ್ಣಕ್ರಿಯೆಯ ಭಾಗದಲ್ಲಿಆರೋಗ್ಯಕಾರಿ ಬ್ಯಾಕ್ಟೀರಿಯಾಗಳ ಬೆಳವಣಿಗೆ ಮಾಡುವಲ್ಲಿ ಇದು ತುಂಬಾನೇ ಸಹಕಾರಿ.ಹೀಗಾಗಿ ಪ್ರತಿದಿನ ನಮ್ಮ ಆಹಾರ ಪದ್ಧತಿಯಲ್ಲಿ ಮೊಸರನ್ನು ಸೇರಿಸಿಕೊಳ್ಳುವ ಅಭ್ಯಾಸ ಇಟ್ಟುಕೊಂಡರೆ ತುಂಬಾನೇ ಒಳ್ಳೆಯದು.

**ರಕ್ತದಲ್ಲಿನ ಸಕ್ಕರೆ ಮಟ್ಟ ನಿಯಂತ್ರಣ**

**ತೂಕ ನಿರ್ವಹಣೆಗೆ ಸಹಕಾರಿ**

**ಹೃದಯದ ಆರೋಗ್ಯಕ್ಕೆ**





## ಮೊಸರು ಸೇವನೆಯ ಆರೋಗ್ಯಪ್ರಯೋಜನಗಳು

ಮೊಸರು ಹಾಲಿನ ಉಪ ಉತ್ಪನ್ನವಾಗಿದ್ದರೂ ಇದರಲ್ಲಿ ಹಲವಾರು ಬಗೆಯ ಆರೋಗ್ಯ ಗುಣಗಳು ಇವೆ ಎನ್ನುವುದು ನಮಗೆಲ್ಲರಿಗೂ ತಿಳಿದೇ ಇದೆ. ವಿಶೇಷವಾಗಿ ಮನುಷ್ಯನ ಆರೋಗ್ಯಕ್ಕೆ ಬೇಕಾಗವ ಅಪಾರ ಪ್ರಮಾಣದ ಪೌಷ್ಟಿಕ ಸತ್ವಗಳು ಇದರಲ್ಲಿ ಕಂಡು ಬರುತ್ತದೆ.

ಎಲ್ಲಾಕ್ಕಿಂತ ಮುಖ್ಯವಾಗಿ ಮೊಸರಿಲ್ಲಿ ಅಧಿಕ ಪ್ರಮಾಣದ ಪ್ರೋಟೀನ್,ಕ್ಯಾಲ್ಸಿಯಂ ಮತ್ತು ಅಧಿಕ ಪ್ರಮಾಣದಲ್ಲಿ ವಿಟಮಿನ್ ಅಂಶಗಳು ಕೂಡ ಕಂಡು ಬರುವುತ್ತದೆ.

ಉದಾಹರಣೆಗೆ ಹೇಳುವುದಾದರೆ, ಊಟದ ಬಳಿಕ ಮೊಸರನ್ನು ಸೇವನೆ ಮಾಡಿದರೆ,ನಮ್ಮ ದೇಹಕ್ಕೆ ಕ್ಯಾಲ್ಸಿಯಂ, ವಿಟಮಿನ್ ಬಿ2, ವಿಟಮಿನ್ ಬಿ12, ಪೊಟಾಶಿಯಂ ಮತ್ತು ಮೆಗ್ನಿಶಿಯಂ ಸಿಗುವುದು. ಪ್ರತಿನಿತ್ಯವೂ 100 ರಿಂದ 200 ಗ್ರಾಂನಷ್ಟು ಮೊಸರನ್ನು ಸೇವನೆ ಮಾಡಿದರೆ ಆಗ ಇದರಿಂದ ದೇಹಾರೋಗ್ಯಕ್ಕೆ ತುಂಬಾ ಒಳ್ಳೆಯದು.ಆದರೆ ನೆನಪಿಡಿ ಅತಿಯಗಿ ಮೊಸರನ್ನು ಸೇವನೆ ಮಾಡಲು ಹೋಗ ಬಾರದು ಇಲ್ಲಾಂದ್ರೆ ಅಜೀರ್ಣಸಮಸ್ಯೆ, ತೂಕ ಹೆಚ್ಚಳ ಮತ್ತು ಲ್ಯಾಕ್ಟೋಸ್ ಅಸಹಿಷ್ಣುತೆ ಉಂಟಾಗಬಹುದು.ಮೊಸರಿನಿಂದ ಇಷ್ಟೆಲ್ಲಾ ಲಾಭಗಳು ಇವೆ ಎನ್ನುವುದು ತಿಳಿದ ಬಳಿಕ ಅದನ್ನು ಯಾವಾಗ ಸೇವಿಸಬೇಕು ಎನ್ನುವುದು ನಮಗೆ ಗೊಂದಲವಿದೆ.

**ಹಲ್ಲಿನ ಹಾಗೂ ಬಾಯಿಯ ಆರೋಗ್ಯಕ್ಕೆ ಒಳ್ಳೆಯದು**

# ಮಲಬದ್ದತೆ ಸಮಸ್ಯೆಗೆ ಪರಿಹಾರ



ಮಲಬದ್ಧತೆ ಎನ್ನುವುದು ದೊಡ್ಡ ಸಮಸ್ಯೆಯನ್ನು ಉಂಟು ಮಾಡುವುದು. ಇದು ಆರೋಗ್ಯಕ್ಕೆ ಹಾನಿ ಮಾಡುವ ಜತೆಗೆ ತುಂಬಾ ಕಿರಿಕಿರಿ ಕೂಡ ಉಂಟು ಮಾಡುವುದು. ಸರಿಯಾದ ರೀತಿಯಲ್ಲಿ ನಾರಿನಾಂಶದ ಕೊರತೆ, ತೇವಾಂಶ ಮತ್ತು ದೈಹಿಕ ಚಟುವಟಿಕೆಗಳ ಕೊರತೆಯಿಂದಾಗಿ ಮಲಬದ್ಧತೆ ಸಮಸ್ಯೆಯು ಸಾಮಾನ್ಯ ಎನ್ನುವಂತಾಗಿದೆ. ಆಧುನಿಕ ಯುಗದಲ್ಲಿ ಸಮಯದ ಕೊರತೆಯಿಂದಾಗಿ ಸರಿಯಾದ ಆಹಾರ ಸೇವನೆಯ ಕೊರತೆ, ಸೂಕ್ತ ವ್ಯಾಯಾಮ ಇಲ್ಲದೆ ಇರುವುದು, ಕೆಲವೊಂದು ಔಷಧಿಗಳು ಇದಕ್ಕೆ ಕಾರಣವಾಗಿರಬಹುದು. ಇದರ ಜತೆಗೆ ಕೆಲವು ಆರೋಗ್ಯ ಸಂಬಂಧಿ ಸಮಸ್ಯೆಗಳು ಕೂಡ ಮಲಬದ್ಧತೆಗೆ ಕಾರಣವಾಗಬಹುದು. ಮುಖ್ಯವಾಗಿ ಕರುಳಿನ ಕೆರಳಿಸುವ ಸಹಲಕ್ಷಣಗಳು(ಐಬಿಎಸ್) ಮತ್ತು ಹೈಪೋಥೈರಾಯ್ಡಿಸಂ ಮಲಬದ್ಧತೆಗೆ ಕಾರಣವಾಗಿದೆ.

**ನೆಲ್ಲಿಕಾಯಿ**

ನೆಲ್ಲಿಕಾಯಿಯಲ್ಲಿ ಹಲವಾರು ಬಗೆಯ ಪೋಷಕಾಂಶಗಳಿದ್ದು, ಇದನ್ನು ಹಿಂದಿನಿಂದಲೂ ಸಾಂಪ್ರದಾಯಿಕ ಔಷಧಿಯಲ್ಲಿ ಬಳಕೆ ಮಾಡಿಕೊಂಡು ಬರಲಾಗುತ್ತಿದೆ. ವಿಟಮಿನ್ ಸಿ ಮತ್ತು ನಾರಿನಾಂಶವು ಇರುವ ಇದು ಕರುಳಿನ ಚಟುವಟಿಕೆ ವೃದ್ಧಿಸುವುದು ಮತ್ತು ಮಲಬದ್ದತೆ ನಿವಾರಿಸುವುದು. ಹಸಿ ನೆಲ್ಲಿಕಾಯಿಯನ್ನು ಸೇವನೆ ಮಾಡಿದರೆ, ನೆಲ್ಲಿಕಾಯಿ ಜ್ಯೂಸ್ ನ್ನು ಸೇವನೆ ಮಾಡಿದರೆ ಆಗ ಇದು ಜೀರ್ಣಕ್ರಿಯೆ ಆರೋಗ್ಯವನ್ನು ವೃದ್ಧಿಸುವುದು. ಇದರಲ್ಲಿ ಇರುವ ನೈಸರ್ಗಿಕ ಅಂಶಗಳು ಮಲಬದ್ಧತೆಗೆ ತುಂಬಾ ಲಾಭಕಾರಿ ಆಗಿರುವುದು

**ಪಪ್ಪಾಯಿ**ಮಲಬದ್ಧತೆಗೆ ಪಪ್ಪಾಯಿಯು ಮತ್ತೊಂದು ಪರಿಣಾಮಕಾರಿ ಔಷಧಿಯಾಗಿದೆ. ಇದರಲ್ಲಿ ಇರುವ ಪಪೈನ್ ಎನ್ನುವ ಅಂಶವು ಪ್ರೋಟೀನ್ ನ್ನು ವಿಘಟಿಸುವುದು ಮತ್ತು ಜೀರ್ಣಕ್ರಿಯೆಗೆ ಸಹಕಾರಿ ಆಗಿದೆ. ಇದರಲ್ಲಿ ನಾರಿನಾಂಶ ಅಧಿಕವಾಗಿ ಇರುವ ಕಾರಣ ಕರುಳಿನ ಕ್ರಿಯೆಯು ಸರಾಗವಾಗುವುದು.

**ಅಂಜೂರ**ತಾಜಾ ಮತ್ತು ಒಣಗಿದ ಅಂಜೂರದಲ್ಲಿ ಒಳ್ಳೆಯ ಪ್ರಮಾಣದ ಆಹಾರದ ನಾರಿನಾಂಶವು ಇದೆ. ಇದರಲ್ಲಿನ ನೈಸರ್ಗಿಕ ಅಂಶಗಳು ಮಲಬದ್ಧತೆಯನ್ನು ಕಡಿಮೆ ಮಾಡು ಸಹಕಾರಿ ಆಗಿದೆ. ಅಂಜೂರವನ್ನು ರಾತ್ರಿ ವೇಳೆ ನೆನೆಯಲು ಹಾಕಬೇಕು ಮತ್ತು ಬೆಳಗ್ಗೆ ಎದ್ದ ಬಳಿಕ ಸೇವನೆ ಮಾಡಿದರೆ ಆಗ ಇದರಿಂದ ಕರುಳಿನ ಚಟುವಟಿಕೆಯು ಉತ್ತಮವಾಗಲಿದೆ.

# ಜನಪ್ರಿಯ ಯೋಜನೆಗಳನ್ನು ಜನಸಾಮಾನ್ಯರಿಗೆ ತಲುಪಿಸಿ:ಅಂಶುಮಂತ್

**ಚಿಕ್ಕಮಗಳೂರು, ಅ.13:** ರಾಜ್ಯಸರ್ಕಾರದ ಜನಪ್ರಿಯ ಪಂಚ ಗ್ಯಾರಂಟಿ ಯೋಜನೆಗಳು ಮತ್ತು ಭದ್ರಾ ಕಾಡಾ ಪ್ರಾಧಿಕಾರದ ಸವಲತ್ತುಗಳನ್ನು ಪ್ರತಿ ಮನೆ ಮನಗಳಿಗೆ ಮುಟ್ಟಿಸುವ ಜವಾಬ್ದಾರಿ ಸದಸ್ಯ ರು ಮಾಡಬೇಕು ಎಂದು ಭದ್ರಾ ಅಚ್ಚುಕಟ್ಟು ಪ್ರದೇಶಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಡಾ|| ಕೆ.ಪಿ.ಅಂಶುಮಂತ್ ಕರೆ ನೀಡಿ-ದರು.

ಚಿಕ್ಕಮಗಳೂರು ಮತ್ತು ಶಿವಮೊಗ್ಗ ಜಿಲ್ಲೆಗಳ ಪಂಚ ಗ್ಯಾರಂಟಿ ಪ್ರಾಧಿಕಾರದ ಸಭೆಯು ಶಿವಮೊಗ್ಗ ಜಿ ಲ್ಲೆಯ ಭದ್ರಾ ಕಾಡಾ ಪ್ರಾಧಿಕಾರದ ಸಭಾಂಗಣದಲ್ಲಿ ಸೋಮವಾರ ಉದ್ಘಾಟಿಸಿ ಅವರು ಮಾತನಾಡಿದರು.

ರಾಜ್ಯಾದ್ಯಂತ ಮಹಿಳೆಯರು, ಯುವಕರ ಬದುಕಿಗೆ ಗ್ಯಾರಂಟಿ ಯೋಜನೆಗಳು ಆಸರೆಯಾಗಿವೆ. ಇದಕ್ಕೆ ಪೂರಕವಾಗಿ ರಾಜ್ಯಸರ್ಕಾರ ಕೋಟ್ಯಾಂತರ ರೂ.ಗಳನ್ನು ಜನರಿಗಾಗಿ ವ್ಯಯಿಸುವ ಮೂಲಕ ಬಡವರ್ಗದ ಜನರಿಗೆ ಅನುಕೂಲ ಮಾಡಿಕೊಟ್ಟಿದೆ ಎಂದು ತಿಳಿಸಿದರು.

ಪ್ರಸ್ತುತ ಎರಡು ಜಿಲ್ಲೆಗಳ ಸಹಭಾಗಿತ್ವದಲ್ಲಿ ಆಯೋಜಿಸಿರುವ ಸಭೆಯಲ್ಲಿ ಗ್ಯಾರಂಟಿ ಪ್ರಾಧಿಕಾರದ ಸದ ಸ್ಯರುಗಳ ಸಹಕಾರ, ಸಲಹೆ ಹಾಗೂ ವಿಚಾರಗಳನ್ನು ತಿಳಿಸಿದರೆ ಸರ್ಕಾರದ ಮಟ್ಟದಲ್ಲಿ ಧ್ವನಿಯಾಗಿ ತಾವು ಸೇರಿದಂತೆ ಗ್ಯಾರಂಟಿ ಅಧ್ಯಕ್ಷರು ಕೆಲಸ ಮಾಡಲಿದ್ದು ಮುಕ್ತವಾಗಿ ಚರ್ಚಿಸಲು ಮುಂದಾಗಬೇಕು ಎಂದು ತಿಳಿ ಸಿದರು.

ಭದ್ರಾ ಕಾಡಾ ಪ್ರಾಧಿಕಾರದಿಂದ ರೈತರಿಗೆ ಅನೇಕ ಮಾರ್ಗಸೂಚಿಗಳನ್ನು ನೀಡಲಾಗಿದ್ದು ಹೆಚ್ಚು ನೀರು ಬಳಕೆಯಿಂದ ಭೂಮಿ ಹದಗೆಡುವ ಸಾಧ್ಯತೆಯಿದ್ದು ಹೀಗಾಗಿ ನಿಯಮಿತ ನೀರಿನ ಬಳಸಿಕೊಂಡು ಭೂಮಿ ಫಲವತ್ತೆಯಿಂದ ಕೂಡಿರಲು ಹಲವಾರು ಯೋಜನೆಗಳನ್ನು ಜಾರಿಗೊಳಿಸುವ ಮೂಲಕ ಕೃಷಿ ಬೆಳೆಗಳ ಅ ಧಿಕ ಇಳುವರಿಗೆ ಪ್ರೋತ್ಸಾಹಿಸಲಾಗುತ್ತಿದೆ ಎಂದರು.



ರಾಜ್ಯದ ರೈತರು, ಕಾರ್ಮಿಕರಿಗೆ ಸರ್ಕಾರ ನಿರಂತರವಾಗಿ ಸ್ಪಂದಿಸುವ ಕೆಲಸ ಮಾಡುತ್ತಿದೆ. ಜೊತೆಗೆ ಸಹಕಾರ ಸಂಘದ ಸುಭದ್ರತೆ ಒತ್ತು ಜೊತೆಗೆ ಸ್ವಸಹಾಯ ಮಹಿಳಾ ಗುಂಪುಗಳಿಗೆ ಪೂರಕ ಸೌಲಭ್ಯವನ್ನು ಒದಗಿಸಿ, ಸ್ವಾವಲಂಬಿ ಬದುಕಿಗೆ ಆಸರೆಯಾಗಿ ಕಾರ್ಯಪ್ರವೃತ್ತವಾಗಿದೆ ಎಂದು ಹೇಳಿದರು.

ಅನ್ನಭಾಗ್ಯ ಯೋಜನೆಯಡಿ ಸರ್ಕಾರ ಅಧಿಕಾರಕ್ಕೆ ಬಂದ ದಿನದಿಂದಲೂ ಅಕ್ಕಿ ವಿತರಿಸಿದ್ದು ಮುಂ ದಿನ ದಿನಗಳಲ್ಲಿ ಹೊಸದಾಗಿ ಆಹಾರ ಕಿಟ್‌ಗಳನ್ನು ವಿತರಿಸುವ ಗುರಿ ಹೊಂದಿದೆ. ಸರ್ಕಾರಿ ನೌಕರರ ಏಳನೇ ವೇತನ ಆಯೋಗ ಜಾರಿಗೊಳಿಸಿ ವಿಶ್ವಾಸ ಹಾಗೂ ನಂಬಿಕೆಗೆ ಅರ್ಹವಾಗಿ ಕೆಲಸ ಮಾಡುತ್ತಿದೆ ಎಂದು ತಿಳಿ ಸಿದರು.

ದೇಶದ ಬೆನ್ನಲುಬು ರೈತರಿಗೆ ನೀರಿನ ಸಮರ್ಪಕ ಬಳಕೆ ದೃಷ್ಟಿಯಿಂದ ಜಾಗೃತಿ ಮೂಡಿಸುವ ಕಾರ್ಯ ವು ಪ್ರಾಧಿಕಾರವು ನಿರಂತರವಾಗಿ ಮಾಡುತ್ತಿದೆ. ಈ ಬಗ್ಗೆಯು ಗ್ಯಾರಂಟಿ ಸದಸ್ಯರು ಸಲಹೆ, ಸಹಕಾರ ನೀಡಿದರೆ ಗೌರವಿಸುವ ಗುಣವನ್ನು ಆಡಳಿತ ಮಂಡಳಿ ಮಾಡಲಿದೆ ಎಂದರು.

ಚಿಕ್ಕಮಗಳೂರು ಜಿಲ್ಲಾ ಗ್ಯಾರಂಟಿ ಪ್ರಾಧಿಕಾರದ ಅಧ್ಯಕ್ಷ ಎಂ.ಸಿ.ಶಿವಾನಂದಸ್ವಾಮಿ ಮಾತನಾಡಿ ಪಂಚ ನದಿಗಳ ಉಗಮ ಸ್ಥಾನವಾದ ಜಿಲ್ಲೆಗೆ ವಿಶೇಷ ಗೌರವಿದೆ. ಅಲ್ಲದೇ ಜಿಲ್ಲೆಯಿಂದ ಹರಿಯುವ ನೀರು ಶಿವಮೊ ಗ್ಗದತ್ತ ಸಾಗಿ ಲಕ್ಷಾಂತರ ಮಂದಿಗೆ ಕುಡಿಯುವ ನೀರಾಗುತ್ತಿದೆ ಎಂದು ತಿಳಿಸಿದರು.

ಗ್ಯಾರಂಟಿ ಯೋಜನೆ ಹಾಗೂ ಸಮರ್ಪಕ ನೀರು ಬಳಸುವ ಸಂಬಂಧ ಜಿಲ್ಲಾ, ತಾಲ್ಲೂಕು ಅಧಿಕಾರಿಗ ಳೊಂದಿಗೆ ಸಭೆ ನಡೆಸಿ ಚರ್ಚಿಸಿ ಕೆಲಸ ಮಾಡುವ ಆಲೋಚನೆಯಿದ್ದು ಶಿವಮೊಗ್ಗದಲ್ಲೂ ಈ ರೀತಿಯ ಕಾರ್ಯ ಚಟುವಟಿಕೆಗಳು ಕೈಗೊಂಡರೆ ಉಪಯೋಗಿಯಾಗಲಿದೆ. ಗ್ಯಾರಂಟಿ ಯೋಜನೆ ಜನರಿಂದ ತೆರಿಗೆ ಪಡೆದು, ಜನರಿಗಾಗಿ ವ್ಯಯಿಸುವ ಕೆಲಸ ರಾಜ್ಯಸರ್ಕಾರ ಮಾಡುತ್ತಿದೆ ಎಂದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿದ ಶಿವಮೊಗ್ಗ ಜಿಲ್ಲಾ ಗ್ಯಾರಂಟಿ ಪ್ರಾಧಿಕಾರದ ಅಧ್ಯಕ್ಷ ಚಂದ್ರಭೂಪಾಲ್ ಪಂಚ ಗ್ಯಾರಂಟಿ ಯೋಜನೆ ಜಿಲ್ಲೆಯಲ್ಲಿ ಅನುಷ್ಠಾನಗೊಂಡು ಶೇ.98.5ರಷ್ಟು ಪ್ರಗತಿ ಸಾಧಿಸಿ, ಕೋಟ್ಯಾಂತರ ಹಣವನ್ನು ರಾಜ್ಯಸರ್ಕಾರ ಜಿಲ್ಲೆಗೆ ಭರಿಸಿದೆ. ಅಲ್ಲದೇ ಉದ್ಯೋಗ ಮೇಳ ನಡೆಸಿ ಶೇ.90 ರಷ್ಟು ನಿರುದ್ಯೋಗಿಗಳಿಗೆ ಉದ್ಯೋಗ ಕಲ್ಪಿಸಿಕೊಡಲಾಗಿದೆ ಎಂದು ಮಾಹಿತಿ ನೀಡಿ-ದರು.

ಈ ಸಂದರ್ಭದಲ್ಲಿ ಭದ್ರಾ ಕಾಡಾ ಪ್ರಾಧಿಕಾರದ ಆಡಳಿತಾಧಿಕಾರಿ ಆರ್.ಸತೀಶ್, ಭೂ ಅಭಿವೃದ್ಧಿ ಅ ಧಿಕಾರಿ ತಾಂತ್ರಿಕ, ಪ್ರಭಾರ ಕೃಷಿ ಅಧಿಕಾರಿ ಕೆ.ಪ್ರಶಾಂತ್, ಭೂ ಅಭಿವೃದ್ಧಿ ಅಧಿಕಾರಿ ಸಹಕಾರ ಶಾಖೆ ಡಾ|| ನಾಗೇಶ್ ಡೊಂಗ್ರೆ, ಚಿಕ್ಕಮಗಳೂರು-ಶಿವಮೊಗ್ಗ ತಾಲ್ಲೂಕು ಅಧ್ಯಕ್ಷರು, ಸದಸ್ಯರು, ಕಚೇರಿ ಸಿಬ್ಬಂದಿ ವರ್ಗದವರು ಉಪಸ್ಥಿತರಿದ್ದರು.

## ಸರ್ಕಾರದ ಸೌಲಭ್ಯ ಪಡೆಯಲು ಬೆಳೆ ಸಮೀಕ್ಷೆ ಕಡ್ಡಾಯ

**ಚಿಕ್ಕಮಗಳೂರು :** ಬೆಳೆ ಸಮೀಕ್ಷೆ ಕಾರ್ಯಕ್ರಮದಡಿ ಸರ್ವೆ, ಹಿಸ್ಸಾ ಸಂಖ್ಯೆವಾರು ನಿಖರವಾಗಿ ಬೆಳೆ ಮಾಹಿತಿಯನ್ನು ಸಂಗ್ರಹಿಸಿ, ಆಯಾ ಋತುಮಾನಕ್ಕನುಗುಣವಾಗಿ ಪಹಣಿಗಳಲ್ಲಿ ಸರಿಯಾದ ಬೆಳೆ ಮಾಹಿತಿ ದಾಖಲಿಸಬಹುದು. ಅತಿವೃಷ್ಟಿ, ಅನಾವೃಷ್ಟಿ ಸಂದರ್ಭಗಳಲ್ಲಿ ಬೆಳೆ ಪರಿಹಾರ ಪಡೆಯಲು, ಖರೀದಿ ಕೇಂದ್ರದಲ್ಲಿ ಬೆಂಬಲ ಬೆಲೆ ಪಡೆಯಲು, ಬೆಳೆ ವಿಮೆ ಪರಿಹಾರ, ಬೆಳೆ ಸಾಲ ಮತ್ತು ಸರ್ಕಾರದ ವಿವಿಧ ಯೋಜನೆಗಳ ಸೌಲಭ್ಯಗಳನ್ನು ಪಡೆಯಲು ಬೆಳೆ ಸಮೀಕ್ಷೆ ಚಟುವಟಿಕೆಗಳಿಂದ ಸೆರೆ ಹಿಡಿಯಲಾದ ದತ್ತಾಂಶವನ್ನು ಬಳಸಲಾಗುವುದು. ಒಂದು ವೇಳೆ ಯಾವುದೇ ಬೆಳೆ ಮಾಹಿತಿಯು ಬೆಳೆ ಸಮೀಕ್ಷೆಯಲ್ಲಿ ದಾಖಲಾಗದೇ ಕೈಬಿಟ್ಟುಹೋದಲ್ಲಿ ರೈತರು ಈ ಸೌಲಭ್ಯಗಳಿಂದ ವಂಚಿತರಾಗುವ ಸಂಭವವಿದೆ.

2025-26ನೇ ಸಾಲಿನ ಮುಂಗಾರು ಬೆಳೆ ಸಮೀಕ್ಷೆ ಈಗಾಗಲೇ ಪ್ರಾರಂಭವಾಗಿದ್ದು ಇನ್ನೂ ಹಲವು ತಾಕುಗಳ ಬೆಳೆ ಸಮೀಕ್ಷೆ ಆಗದಿರುವುದು ಕಂಡುಬಂದಿದೆ. ರೈತರಿಗಾಗಿಯೇ ರೈತರ ಬೆಳೆ ಸಮೀಕ್ಷೆ ಮೊಬೈಲ್ ಆ್ಯಪ್ ಅನ್ನು ಅಭಿವೃದ್ಧಿಪಡಿಸಲಾಗಿದ್ದು, ರೈತರು ತಾವು ಬೆಳೆದ ಬೆಳೆಗಳ ಮಾಹಿತಿಯನ್ನು ತಾವೇ ದಾಖಲಿಸಲು ರೈತರ ಬೆಳೆ ಸಮೀಕ್ಷೆ ಆ್ಯಪ್‌ನಲ್ಲಿ ಅವಕಾಶ ಕಲ್ಪಿಸಲಾಗಿದೆ. ರೈತರು ಬೆಳೆದರ್ಶಕ್ ಆ್ಯಪ್‌ನಲ್ಲಿ ತಮ್ಮ ಜಮೀನಿನ ಬೆಳೆ ಸಮೀಕ್ಷೆ ಪೂರ್ಣಗೊಂಡಿದೆಯೋ ಇಲ್ಲವೋ ಎಂಬ ಮಾಹಿತಿಯನ್ನು ಪಡೆಯಬಹುದು. ಒಂದು ವೇಳೆ ತಮ್ಮ ಜಮೀನಿನ ಬೆಳೆ ಸಮೀಕ್ಷೆ ಆಗದಿದ್ದ ಪಕ್ಷದಲ್ಲಿ ತಮ್ಮ ಗ್ರಾಮಕ್ಕೆ ನಿಯೋಜಿಸಿರುವ ಖಾಸಗಿ ನಿವಾಸಿಗಳನ್ನು ಸಂಪರ್ಕಿಸಿ ಬೆಳೆ ಸಮೀಕ್ಷೆ ಮಾಡಿಸಿಕೊಂಡು ಸರ್ಕಾರದ ಯಾವುದೇ ಸವಲತ್ತಿನಿಂದ ವಂಚಿತರಾಗದಂತೆ ಎಚ್ಚರ ವಹಿಸುವಂತೆ ಜಂಟಿ ಕೃಷಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ನ. 2ರಿಂದ ಪಂಚಪೀಠಾಧೀಶರ ಅಡ್ಡಪಲ್ಲಕ್ಕಿ ಮಹೋತ್ಸವ

# ಅಡ್ಡಪಲ್ಲಕ್ಕಿ ಮಹೋತ್ಸವ ಮತ್ತು ಧರ್ಮಜಾಗೃತಿ ಸನಾತನ ಧರ್ಮದ ಸಂರಕ್ಷಣೆಗೆ ಪ್ರೇರಣಾದಾಯಕ: ಬೆಳ್ಳಿಪ್ರಕಾಶ್

**ಬೀರೂರು :** 'ಪಟ್ಟಣದಲ್ಲಿ ನ. 2 ಮತ್ತು 3ರಂದು ನಡೆಯುವ ಪಂಚಪೀಠಾಧೀಶರ ಅಡ್ಡಪಲ್ಲಕ್ಕಿ ಮಹೋತ್ಸವ ಮತ್ತು ಧರ್ಮಜಾಗೃತಿ ಸಮಾರಂಭವು ಸನಾತನ ಧರ್ಮದ ಸಂರಕ್ಷಣೆಗೆ ಪ್ರೇರಣಾದಾಯಕವಾಗಲಿ' ಎಂದು ರಾಜ್ಯ ಅಪೆಕ್ಸ್ ಬ್ಯಾಂಕ್ ಅಧ್ಯಕ್ಷ ಬೆಳ್ಳಿಪ್ರಕಾಶ್ ಹೇಳಿದರು.

ಪಟ್ಟಣದ ಡಿ.ವಿ.ಹಾಲಪ್ಪ ರಸ್ತೆ ಸಂಪಾದನೆ ಮಠ ಆವರಣದಲ್ಲಿ ನಡೆದ ಮಂಗಲಮಂದಿರ ಹಾಗೂ ಚೌಡೇಶ್ವರಿ ದೇವಾಲಯ ಉದ್ಘಾಟನೆ ಮತ್ತು ಪಂಚಪೀಠಾಧೀಶರ ಅಡ್ಡಪಲ್ಲಕ್ಕಿ ಮಹೋತ್ಸವದ ಪೂರ್ವಭಾವಿ ಸಭೆಯಲ್ಲಿ ಅವರು ಮಾತನಾಡಿದರು.

ವಿವಿಧ ಸಮಿತಿಗಳ ರಚನೆ ಹಾಗೂ ರೂಪರೇಷೆಗಳ ಮೂಲಕ ಕಾರ್ಯಕ್ರಮಕ್ಕೆ ಸಿದ್ಧತೆ ನಡೆದಿದೆ. ಮಹಿಳೆಯರು ಮುಂಚೂಣಿಯಲ್ಲಿ ನಿಂತು ತಮಗೆ ವಹಿಸಿರುವ ಜವಾಬ್ದಾರಿಯನ್ನು ನಿರ್ವಹಿಸಲು ಶ್ರಮಿಸುತ್ತಿದ್ದಾರೆ. ಎಲ್ಲಾ ಹಳ್ಳಿಗಳಿಗೆ ಮಾಹಿತಿ ತಲುಪಿಸಿ ಹೆಚ್ಚಿನ ಗ್ರಾಮಸ್ಥರು ಈ ಉತ್ಸವದಲ್ಲಿ ಪಾಲ್ಗೊಳ್ಳುವಂತಾಗಬೇಕು. ಸ್ವಾಮೀಜಿ ಹಾಗೂ



ಮುಖಂಡರ ಮಾರ್ಗದರ್ಶನದಲ್ಲಿ ಈ ಕಾರ್ಯಕ್ರಮ ಭಕ್ತರಿಗೆ ಪ್ರೇರಕವಾಗಬೇಕು ಎಂಬ ಆಶಯ ವ್ಯಕ್ತಪಡಿಸಿದರು.

ಜಿಲ್ಲಾ ವೀರಶೈವ ಲಿಂಗಾಯತ ಸಮಾಜದ ಅಧ್ಯಕ್ಷ ಎಚ್.ಎಂ. ಲೋಕೇಶ್ ಮಾತನಾಡಿ, 'ಅಡ್ಡಪಲ್ಲಕ್ಕಿ ಮಹೋತ್ಸವದ ಸಮಿತಿಗಳು ಕಾರ್ಯಪ್ರವೃತ್ತವಾಗಿವೆ. ಜವಾಬ್ದಾರಿಗಳನ್ನು ಸಮರ್ಥವಾಗಿ ನಿರ್ವಹಿಸುವ ಮೂಲಕ ಉತ್ಸವದ ಯಶಸ್ಸಿಗೆ ಶ್ರಮಿಸಬೇಕು' ಎಂದರು.

ಶಿವಾನಂದಾಶ್ರಮ ಟ್ರಸ್ಟ್ ಪ್ರಧಾನ ಕಾರ್ಯದರ್ಶಿ ಕೆ.ಬಿ. ಮಲ್ಲಿಕಾರ್ಜುನ್, 'ಅಡ್ಡಪಲ್ಲಕ್ಕಿ ಮಹೋತ್ಸವದ 2 ದಿನ ಪಟ್ಟಣವು ಕೈಲಾಸದಂತೆ ಕಂಗೊಳಿಸಬೇಕು. ಜಾತಿ, ಜನಾಂಗಗಳನ್ನು ಬದಿಗಿಟ್ಟು ಮಾನವ ಧರ್ಮ ಎಂಬ ಧ್ಯೇಯ ಮುಂದಿಟ್ಟು ಕಾರ್ಯಕ್ರಮ ನಡೆಯಬೇಕು' ಎಂದರು.

ರಂಭಾಪುರಿ ಖಾಸಾ ಶಾಖಾ ಪೀಠದ ರುದ್ರಮುನಿ ಶಿವಾಚಾರ್ಯ ಸ್ವಾಮೀಜಿ ಸಮಾರಂಭದ ರೂಪರೇಷೆ, ಸಮಿತಿಗಳ ಜವಾಬ್ದಾರಿ ಮತ್ತು ಪಲ್ಲಕ್ಕಿ ಮಹೋತ್ಸವದ ತಯಾರಿ ಕುರಿತು ಮಾಹಿತಿ ನೀಡಿದರು.

ತಾಲ್ಲೂಕು ವೀರಶೈವ ಲಿಂಗಾಯತ ಸಮಾಜ ಅಧ್ಯಕ್ಷ ರೇಣುಕಾರಾಧ್ಯ, ಮುಖಂಡರಾದ ಎಸ್. ರಮೇಶ್, ಶಿವಾನಂದಸ್ವಾಮಿ, ಪ್ರೇಮ್‌ಕುಮಾರ್, ನಿರಂಜನ್, ಶಾಂತಾ ಮಾತನಾಡಿದರು.

ಕೆ.ಎಂ.ವಿನಾಯಕ್, ಎಂ.ಎಂ. ವಿಶ್ವಾರಾಧ್ಯ, ಬಿ.ಆನಂದ್ ಶೆಟ್ಟಿ, ಕೆ.ಎಸ್. ಸಂಪತ್‌ಕುಮಾರ್, ಜಿಲ್ಲಾ ಹಾಗೂ ತಾಲ್ಲೂಕು ವೀರಶೈವ-ಲಿಂಗಾಯತ ಸಮಾಜ, ರೇಣುಕಾ ಸಾಂಸ್ಕೃತಿಕ ಸಂಘ ಹಾಗೂ ವಿವಿಧ ಸಮಾಜಗಳ ಮುಖಂಡರು, ಮಹಿಳಾ ಸಂಘಟನೆಗಳ ಸದಸ್ಯರು ಇದ್ದರು.

# ಪ್ರತಿ ಮನೆಗಳಿಗೆ ಶುದ್ಧ ನೀರು ಪೂರೈಕೆ ಮಾಡಲು 21 ಕೋಟಿ ಅನುದಾನ ಬಿಡುಗಡೆ: ಸಂಸದ್ ಗೋವಿಂದ ಎಂ. ಕಾರಜೋಳ

**ಹೊಳಲ್ಕೆರೆ :** ಪಟ್ಟಣದ ಪ್ರತಿಮನೆಗೂ ಶುದ್ಧ ಕುಡಿಯುವ ನೀರು ಕಲ್ಪಿಸಲು ಕೇಂದ್ರ ಪುರಸ್ಕೃತ ಅಮೃತ್ 2.0 ಯೋಜನೆಯಲ್ಲಿ ಹೊಳಲ್ಕೆರೆ ಪಟ್ಟಣದ ಪ್ರತಿ ಮನೆಗಳಿಗೆ ಶುದ್ಧ ನೀರು ಪೂರೈಕೆ ಮಾಡಲು 21 ಕೋಟಿ ಅನುದಾನ ಬಿಡುಗಡೆಯಾಗಿದೆ ಎಂದು ಸಂಸದ ಗೋವಿಂದ ಎಂ. ಕಾರಜೋಳ ತಿಳಿಸಿದರು.

ಅವರು ಪಟ್ಟಣದ ಕಾಲಭೈರೇಶ್ವರ ದೇವಸ್ಥಾನದ ಹತ್ತಿರ ಶನಿವಾರ ಕೇಂದ್ರ ಪುರಸ್ಕೃತ ಅಮೃತ 2.0 ಯೋಜನೆ ಅನುಷ್ಠಾನಕ್ಕೆ ಭೂಮಿ ಪೂಜೆ ಸಲ್ಲಿಸಿ ಮಾತನಾಡಿದರು.

ಪ್ರಧಾನಿಯವರ ಆಶಯದಂತೆ ದೇಶದ ಪ್ರತಿಯೊಬ್ಬ ನಾಗಕರಿನಿಗೂ ಶುದ್ಧ ನೀರು ಪೂರೈಕೆಯಾಗಬೇಕು. ಅವರ ಚಿಂತನೆಗೆ ಪೂರಕವಾಗಿ ನಮ್ಮ ರಾಜ್ಯ ಮತ್ತು ಜಿಲ್ಲೆಯಲ್ಲಿ ಎಲ್ಲಾ ತಾಲೂಕಿನಲ್ಲಿ ಯೋಜನೆ ಜಾರಿಯಲ್ಲಿವೆ. ಹೊಳಲ್ಕೆರೆ ಪಟ್ಟಣದಕ್ಕೆ 21 ಕೋಟಿ ಅನುದಾನ ಬಂದಿದೆ. ಗುತ್ತಿಗೆದಾರರು 6 ತಿಂಗಳಲ್ಲಿ ಯೋಜನೆ ಪೂರ್ಣಗೊಳಿಸಬೇಕು. ಪ್ರತಿ ಮನೆಗೂ ನಳ ಅಳವಡಿಸಿ ಶುದ್ಧ ನೀರು ಪೂರೈಕೆ ಮಾಡಲು ವಿ.ವಿ.ಸಾಗರ ಮೂಲದಿಂದ ಮೊದಲ ಹಂತದಲ್ಲಿ



ಚಾಲನೆ ನೀಡಿದೆ. ಇದಕ್ಕೆ ಕೇಂದ್ರ ಸರಕಾರ ಶೇ50, ರಾಜ್ಯ ಸರಕಾರ ಶೇ 40 ಮತ್ತು ಪುರಸಭೆಯಿಂದ ಶೇ10 ಅನುದಾನ ಕಲ್ಪಿಸಿದೆ ಎಂದರು.

ಪುರಸಭೆ ಅಧ್ಯಕ್ಷ ವಿಜಯಸಿಂಹಖಾಟ್ರೋತ್ ಮಾತನಾಡಿ, ಪ್ರತಿ ಮನೆಗೂ ನಳ ಅಳವಡಿಸಿ ಶುದ್ಧ ನೀರು ಕಲ್ಪಿಸಲು ಪುರಸಭೆಯಲ್ಲಿದ್ದ ಎಲ್ಲಾ ಅನುದಾನವನ್ನು ವಿನಿಯೋಗಿಸಿದೆ. 6 ತಿಂಗಳಲ್ಲಿ ಎಲ್ಲಾ ಮನೆಗಳಿಗೂ ಶುದ್ಧ ನೀರನ್ನು ಪೂರೈಕೆ ಮಾಡಿದಾಗ ನೀರಿನ ಸಮಸ್ಯೆ ಪರಿಹಾರವಾಗಲಿದೆ. ನಮ್ಮ ಅನುದಾನವನ್ನು ಅಮೃತ್ ಯೋಜನೆಗೆ ಹಾಕಿದ್ದರಿಂದ ಪಟ್ಟಣದಲ್ಲಿ ಹೊಸದಾಗಿ ರಸ್ತೆ ಚರಂಡಿ ಮತ್ತಿತರ ಕಾಮಗಾರಿ ಕೆಲಸಗಳನ್ನು ಜನರ ನಿರೀ-ಕ್ಷೆಯಂತೆ ಮಾಡಿಲ್ಲ. ಅನುದಾನ ಕೊರತೆ ಇದ್ದರೂ ಪಟ್ಟಣದಲ್ಲಿ ಅಗತ್ಯವಿರುವ ಸಾಕಷ್ಟು ಅಭಿವೃದ್ಧಿ ಕೆಲಸ ಕೈಗೊಂಡು ಜನರಿಗೆ ಮೂಲಭೂತ ಸೌಲಭ್ಯಗಳನ್ನು ಕಲ್ಪಿಸಲು ಪುರಸಭೆಯ ಎಲ್ಲಾ ಸದಸ್ಯರು ಶ್ರಮಿಸಿದ್ದಾರೆ ಎಂದರು.

ಅಧ್ಯಕ್ಷತೆ ವಹಿಸಿದ್ದ ಶಾಸಕ ಎಂ.ಚಂದ್ರಪ್ಪ ಮಾತನಾಡಿ, ವಿವಿ ಸಾಗರದಿಂದ ಪಟ್ಟಣಕ್ಕೆ ಕುಡಿಯುವ ನೀರು ತರಲು 360ಕೋಟಿ ಅನುದಾನ ಖರ್ಚು ಮಾಡಿದೆ. ಹಾಲೇನಹಳ್ಳಿ ಕೆರೆಯಲ್ಲಿ ಶುದ್ಧ ನೀರಿನ ಘಟಕ ದಿಂದ 100 ಮೀ ಎತ್ತರದ ಘಟ್ಟಿಹೊಸಹಳ್ಳಿ ಬೆಟ್ಟ ಮೇಲಿನ ಟ್ಯಾಂಕ್‌ಗೆ ಪೂರೈಸಲು ಪೈಪ್‌ಲೈನ್ ಹಾಕಿದೆ. ಅಲ್ಲಿಂದ ಹೊಳಲ್ಕೆರೆ ಅಯ್ಯಪ್ಪ ಸ್ವಾಮಿ ಬೆಟ್ಟದಲ್ಲಿರುವ ಟ್ಯಾಂಕ್‌ಗೆ ನೀರು ತರಲು 60ಕೋಟಿ ಖರ್ಚು ಮಾಡಿದೆ. ವಿವಿ.ಯೋಜನೆ ಅನುಷ್ಠಾನಗೊಂಡಲ್ಲಿ 50 ವರ್ಷ ಪಟ್ಟಣಕ್ಕೆ ನೀರಿನ ಸಮಸ್ಯೆ ಬರುವುದಿಲ್ಲ ಎಂದರು.

ಮಾಜಿ ಅಧ್ಯಕ್ಷ ಬಿ.ಎಸ್.ರುದ್ರಪ್ಪ, ಮಾಜಿ ಉಪಾಧ್ಯಕ್ಷ ಕೆ.ಸಿ.ರಮೇಶ್ ಮಾತನಾಡಿದರು. ಪುರಸಭೆ ಉಪಾಧ್ಯಕ್ಷೆ ಹೆಚ್.ಆರ್.ನಾಗರತ್ನವೇದಮೂರ್ತಿ, ಪುರಸಭೆ ಮಾಜಿ ಅಧ್ಯಕ್ಷ ಆರ್.ಎ.ಆಶೋಕ್, ಸದಸ್ಯರಾದ ಪಿ.ಆರ್.ಮಲ್ಲಿಕಾರ್ಜುನ, ಹಿರಿಯ ಸದಸ್ಯ ಸೈಯದ್ ಸಜೀಲ್, ಮನ್ಸೂರು, ಫಿರೋಜ್ ಖಾನ್ ಮತ್ತೀತರರು

## ನವೆಂಬರ್ 3ಕ್ಕೆ ಕಲ್ಯಾಣ ಕರ್ನಾಟಕದ ಅತ್ಯಾಧುನಿಕ ಯೋಗ ಮತ್ತು ಪ್ರಕೃತಿ ಚಿಕಿತ್ಸಾ ಆಸ್ಪತ್ರೆ ಲೋಕಾರ್ಪಣೆ

**ದಾವಣಗೆರೆ.ಅ.13:** ಕಲ್ಯಾಣ ಕರ್ನಾಟಕದ ಅತ್ಯಾಧುನಿಕ, ಸುಸಜ್ಜಿತ ಹಾಗೂ ಅತಿದೊಡ್ಡದು ಎನಿಸಿದ, ಜನನಿ ಯೋಗ ಮತ್ತು ಪ್ರಕೃತಿ ಚಿಕಿತ್ಸಾ ಆಸ್ಪತ್ರೆ ಮತ್ತು ಸಂಶೋಧನಾ ಕೇಂದ್ರ ನವೆಂಬರ್ 3ರಂದು ಹರಪನಹಳ್ಳಿ ಸಮೀಪದ ಕೊಮಾರನಹಳ್ಳಿಯಲ್ಲಿ ಸಾರ್ವಜನಿಕ ಸೇವೆಗೆ ಸಮರ್ಪಣೆಯಾಗಲಿದೆ ಎಂದು ಕೇಂದ್ರದ ಕಾರ್ಯದರ್ಶಿ ಡಾ.ಮಹೇಶ್ ಹೇಳಿದರು.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಹಚ್ಚಹಸಿರಿನ ಪ್ರಶಾಂತ ಪರಿಸರದಲ್ಲಿ ಹರಪನಹಳ್ಳಿಯಿಂದ ಕೇವಲ ಒಂಬತ್ತು ಕಿಲೋಮೀಟರ್ ದೂರದಲ್ಲಿ, ಆರೂವರೆ ಎಕರೆ ವಿಶಾಲ ಪ್ರದೇಶದಲ್ಲಿ ವ್ಯಾಪಿಸಿರುವ ಜನನಿ ಆಸ್ಪತ್ರೆ, ಕಲ್ಯಾಣ ಕರ್ನಾಟಕದ ಸಾಮಾಜಿಕ ಸ್ವಾಸ್ಥ್ಯ ಕ್ಷೇತ್ರದಲ್ಲಿ ಕ್ರಾಂತಿಕಾರಕ ಎನಿಸಲಿದೆ ಎಂದರು

ಆಧುನಿಕ ವೈದ್ಯವಿಜ್ಞಾನ ರೋಗ ಚಿಕಿತ್ಸೆಗಿಂತ ರೋಗಗಳು ಬಾಧಿಸದಂತೆ ತಡೆಯುವ ಮುಂಜಾಗ್ರತಾ ಕ್ರಮಗಳಿಗೆ ಒತ್ತು ನೀಡಿದ್ದು, ಸಮಗ್ರ ಸುಕ್ಷೇಮಕ್ಕೆ ಯೋಗ ಮತ್ತು ಪ್ರಕೃತಿ ಚಿಕಿತ್ಸೆ ವರದಾನವಾಗಿದೆ ಎಂದು ಹೇಳಿದರು.

ಮುಖ್ಯವೈದ್ಯಾಧಿಕಾರಿ ಡಾ.ರಾಜೇಶ್ ಪಾದೇಕಲ್ ಮಾತನಾಡಿ, ಮೂರು ವರ್ಷಗಳಿಂದ ಹರಪನಹಳ್ಳಿಯಲ್ಲಿ ಯೋಗ ಮತ್ತು ಪ್ರಕೃತಿ ಚಿಕಿತ್ಸೆ ಕುರಿತ ವೈದ್ಯಕೀಯ ಪದವಿ ಕೋರ್ಸ್ ನಡೆಸುತ್ತಾ ಬಂದಿರುವ ಜಯ ಎಜ್ಯುಕೇಶನಲ್ ಟ್ರಸ್ಟ್, ಕಲ್ಯಾಣ ಕರ್ನಾಟಕದ ಜನತೆಗೆ ಕೊಡುಗೆಯಾಗಿ ಈ ಅತ್ಯಾಧುನಿಕ ವ್ಯವಸ್ಥೆಯನ್ನು ಅಭಿವೃದ್ಧಿಪಡಿಸಿದೆ. ಯೋಗ ಮತ್ತು ಪ್ರಕೃತಿ ಚಿಕಿತ್ಸೆಗಾಗಿ ಬೆಂಗಳೂರು, ದಕ್ಷಿಣ ಕನ್ನಡದ ಧರ್ಮಸ್ಥಳದಂಥ ದೂರದ ಊರುಗಳಿಗೆ ಹೋಗುವುದು ತಪ್ಪಿ ಈ ಭಾಗದ ಜನತೆಗೆ ಮನೆಬಾಗಿಲಲ್ಲೇ ಈ ಸೇವೆ ಲಭ್ಯವಾಗಲಿದೆ ಎಂದು ಡಾ.ಪಾದೇಕಲ್ ವಿವರಿಸಿದರು.

ಹರಪನಹಳ್ಳಿಯ ಕೊಮಾರನಹಳ್ಳಿಯ ಪರಿಸರದಲ್ಲಿ ನಿರ್ಮಿಸಲಾದ 100 ಹಾಸಿಗೆಗಳ ಪ್ರಕೃತಿ ಚಿಕಿತ್ಸೆ ಹಾಗೂ ಯೋಗ ಚಿಕಿತ್ಸಾ ಕೇಂದ್ರದಲ್ಲಿ, ನುರಿತ ವೈದ್ಯಕೀಯ ಸಿಬ್ಬಂದಿಯ ಸೇವೆ ದೊರಕಲಿದೆ. ಸಮಾಜದ ಎಲ್ಲ ವರ್ಗದವರಿಗೂ ಕೈಗೆಟುಕಬೇಕು ಎಂಬ ದೃಷ್ಟಿಯಿಂದ ಊಟ, ವಸತಿ ಮತ್ತು ಮೂಲ ಚಿಕಿತ್ಸೆ ಸೇರಿ ದಿನಕ್ಕೆ 1200 ರೂಪಾಯಿಗಳಷ್ಟು ಕನಿಷ್ಠ ಶುಲ್ಕ ನಿಗದಿಪಡಿಸಿರುವುದು ಸಂಸ್ಥೆಯ ಸಾಮಾಜಿಕ ಬದ್ಧತೆಗೆ ಸಾಕ್ಷಿಯಾಗಿದೆ.ವಿವರಗಳಿಗೆ: 93530-63097/8317363097 ಸಂಪರ್ಕಿಸಬಹುದು ಎಂದರು.

ಸುದ್ದಿಗೋಷ್ಠಿಯಲ್ಲಿ ಸಂಸ್ಥೆಯ ಮಾಧ್ಯಮ ಮತ್ತು ಸಾರ್ವಜನಿಕ ಸಂಪರ್ಕ ವಿಭಾಗದ ಮುಖ್ಯಸ್ಥ ಉದಯಶಂಕರ ಭಟ್ ಇದ್ದರು.

## ಅ.15 ರಂದು ರೈತರ ವಿವಿಧ ಬೇಡಿಕೆ ಈಡೇರಿಸುವಂತೆ ಒತ್ತಾಯಿಸಿ ಧರಣಿ ಸತ್ಯಾಗ್ರಹ

**ದಾವಣಗೆರೆ.ಅ.13:** ರಾಜ್ಯ ಸರ್ಕಾರ ಭತ್ತಕ್ಕೆ 3500, ರಾಗಿಗೆ 4500 ಬೆಂಬಲ ಬೆಲೆ ನೀಡುವುದು ಸೇರಿದಂತೆ ವಿವಿಧ ಬೇಡಿಕೆ ಈಡೇರಿಸುವಂತೆ ಒತ್ತಾಯಿಸಿ ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆ ದಾವಣಗೆರೆ ತಾಲ್ಲೂಕು ವತಿಯಿಂದ ಅ.15 ರಂದು ಬೆಳಿಗ್ಗೆ 10.30ಕ್ಕೆ ನಗರದ ಎಸಿ ಕಚೇರಿ ಮುಂದೆ ಅನಿರ್ಧಿಷ್ಟಾವಧಿ ಧರಣಿ ಸತ್ಯಾಗ್ರಹ ಹಮ್ಮಿಕೊಳ್ಳಲಾಗಿದೆ ಎಂದು ತಾಲ್ಲೂಕು ಅಧ್ಯಕ್ಷ ಮಂಡಲೂರು ವಿಶ್ವನಾಥ್ ಹೇಳಿದರು.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಮೆಕ್ಕೆಜೋಳಕ್ಕೆ ರೈತ ಪ್ರತಿ ಎಕರೆಗೆ ಸುಮಾರು 20 ರಿಂದ 25 ಸಾವಿರ ರೂ. ಖರ್ಚು ಮಾಡುತ್ತಾರೆ. ಆದ್ದರಿಂದ ಪ್ರತಿ ಕ್ವಿಂಟಾಲ್‌ಗೆ ರೂ. 2500 ಗಳಂತೆ ಸರ್ಕಾರ ಖರೀದಿಸಬೇಕು, ವರ್ಷ ಪೂರ್ತಿ ಬೆಳೆದಂತಹ ರಾಗಿ ಬೆಳೆಗೆ ವೈಜ್ಞಾನಿಕ ಬೆಲೆ ರೂ. 4500 ಕೊಡಬೇಕು ಇದರಿಂದ ರೈತರಿಗೆ ಅನುಕೂಲವಾಗುತ್ತದೆ ಎಂದರು.

ಕಳೆದ ಬಾರಿ ನೀರಿನ ಭತ್ತ ಬೆಳೆದ ರೈತ ಸಂಕಷ್ಟಕ್ಕಿಡಾಗಿದ್ದು, ಸರ್ಕಾರ ಕೂಡ ಬೆಂಬಲ ಬೆಲೆ ನೀಡದೆ ರೈತನಿಗೆ ಅನ್ಯಾಯ ಮಾಡಿತು. ಈಗಲಾದರೂ ಭತ್ತಕ್ಕೆ ಸರ್ಕಾರ ಬೆಂಬಲ ಬೆಲೆಯಾಗಿ ರೂ. 3500 ನಿಗದಿ ಮಾಡಬೇಕು. ಹಾಲಿನ ದರ ಪ್ರಸ್ತುತ 36 ರೂ ಇದ್ದು, ಅದನ್ನು ಪ್ರತಿ ಲೀಟರ್‌ಗೆ 50 ರೂ.ಗೆ ಮಾಡಬೇಕು. ಹೆಚ್ಚಿಗೆ ಬೆಲೆ ಸಿಕ್ಕರೆ ರೈತರಿಗೆ ಅನುಕೂಲವಾಗುತ್ತದೆ. ಹೈನುಗಾರಿಕೆಯಿಂದ ರೈತರು ತಮ್ಮ ಕುಟುಂಬವನ್ನು ನಿರ್ವಹಿಸಲು ಹಾಗೂ ಮಕ್ಕಳ ವಿದ್ಯಾಭ್ಯಾಸಕ್ಕೆ ಅನುಕೂಲವಾಗುತ್ತದೆ ಎಂದು ಹೇಳಿದರು.

ಪ್ರತಿ ತಾಲ್ಲೂಕಿನಲ್ಲಿ ಖರೀದಿ ಕೇಂದ್ರವನ್ನು ಸ್ಥಾಪಿಸಿದರೆ ರೈತರು ಬೆಳೆದಂತಹ ಬೆಳೆಗಳನ್ನು ಸರ್ಕಾರ ಖರೀದಿಸಿದರೆ, ವೈಜ್ಞಾನಿಕ ಬೆಲೆ ಸಿಕ್ಕಂತಾಗುತ್ತದೆ. ಬಗರ್ ಹುಕುಂ ಸಾಗುವಳಿ ಮಾಡುವ ರೈತರಿಗೆ ಹಕ್ಕುಪತ್ರಗಳು ಸರಿಯಾಗಿ ದೊರೆತಿರುವುದಿಲ್ಲ. ಪ್ರತಿ ಬಗರ್ ಹುಕುಂ ಸಾಗುವಳಿ ಮಾಡಿದ ರೈತರಿಗೆ ಹಕ್ಕುಪತ್ರ ನೀಡಬೇಕು. ಹಾಗೂ ಈ ಹಿಂದೆ ಸೇಂದಿವನ ಇದ್ದಂತಹ ಜಾಗ ಈಗ ಸರ್ಕಾರ ಅರಣ್ಯ ಇಲಾಖೆಗೆ ಸೇರಿಸಿ, ರೈತರಿಗೆ ವಂಚಿಸುತ್ತಿದೆ. ಸರ್ಕಾರ ಕೂಡಲೇ ಅಂತಹ ಪ್ರದೇಶವನ್ನು ವಜಾಗೊಳಿಸಿ. ಸಾಗುವಳಿ ಮಾಡಿದಂತಹ ರೈತರಿಗೆ ಕೂಡಲೇ ಹಕ್ಕುಪತ್ರಗಳನ್ನು ಕೊಡಬೇಕು ಸೇರಿದಂತೆ ಹಲವು ಬೇಡಿಕೆ ಈಡೇರಿಕೆಗೆ ಒತ್ತಾಯಿಸಿ ಅ.15 ರಂದು ನಗರದ ಎಸಿ ಕಚೇರಿ ಮುಂದೆ ಅನಿರ್ಧಿಷ್ಟಾವಧಿ ಧರಣಿ ಸತ್ಯಾಗ್ರಹ ಮಾಡುವುದರ ಮೂಲಕ ಸರ್ಕಾರಕ್ಕೆ ಒತ್ತಾಯಿಸಲಾಗುವುದು ಎಂದು ಹೇಳಿದರು. ಸುದ್ದಿಗೋಷ್ಠಿಯಲ್ಲಿ ಸೇನೆಯ ಪದಾಧಿಕಾರಿಗಳಾದ ಗೀತಾ ಚಂದ್ರಶೇಖರ್, ಆಶಾ,.ಎಸ್.ಕೆ.ಪ್ರಸನ್ನ ಕುಮಾರ್, ಎಸ್.ವಿ ನಾಗರಾಜಪ್ಪ, ಅಣ್ಣೇಶ್, ಶಿವಕುಮಾರ್, ಮಹಾದೇವಪ್ಪ, ನಾಗರಾಜ ಇತರರು ಇದ್ದರು.

## ಕಟ್ಟಡ ಕಾರ್ಮಿಕರ ಹಕ್ಕೊತ್ತಾಯಗಳ ಈಡೇರಿಕೆಗೆ ಪ್ರತಿಭಟನೆ

**ದಾವಣಗೆರೆ:** ಕಟ್ಟಡ ಕಾರ್ಮಿಕರ ಕಲ್ಯಾಣ ಕಾರ್ಯಕ್ರಮಗಳ ಅನುಷ್ಠಾನವನ್ನು ಮಾಡುವ ಸಂದರ್ಭದಲ್ಲಿ ನೈಜ ಕಟ್ಟಡ ಕಾರ್ಮಿಕ ಸಂಘಟನೆಗಳ ಜೊಜೆಗೆ ಚರ್ಚಿಸಿ ಅಭಿಪ್ರಾಯಗಳನ್ನು ಪರಿಶೀಲಿಸುವ ಜತೆ ಕಟ್ಟಡ ಕಾರ್ಮಿಕರ ಸಮಸ್ಯೆಗಳ ವಿವಿಧ ಹಕ್ಕೊತ್ತಾಯಗಳನ್ನು ಈಡೇರಿಸುವಂತೆ ಆಗ್ರಹಿಸಿ ನಗರದಲ್ಲಿ ಕಾಯಕಜೀವಿ ಕಟ್ಟಡ ಕಾರ್ಮಿಕರ ಸಂಘ ಜಿಲ್ಲಾ ಸಮಿತಿ ಕಾಮಿಕ ಇಲಾಖೆ ಎದುರು ಪ್ರತಿಭಟನೆ ನಡೆಸಿತು.

ನಗರದ ಶ್ರೀದೇವರಾಜ ಅರಸು ಬಡಾವಣೆಯಲ್ಲಿರುವ ಕಾರ್ಮಿಕ ಇಲಾಖೆಯ ಮುಂದೆ ಪ್ರತಿಭಟನೆ ನಡೆಸಿದ ಕಾರ್ಮಿಕರು, ಕಾರ್ಮಿಕ ಸಚಿವರಿಗೆ ಸಹಾಯಕ ಕಾರ್ಮಿಕ ಆಯುಕ್ತ ಅವಿನಾಶ್ ನಾಯ್ಕರ ಮೂಲಕ ಹಕ್ಕೋತಾಯ ಪತ್ರವನ್ನು ಸಲ್ಲಿಸಲಾಯಿತು.

ಕಟ್ಟಡ ಕಾರ್ಮಿಕರ ಮಕ್ಕಳ ಶೈಕ್ಷಣಿಕ ಅರ್ಜಿಯನ್ನು ಎಸ್‌ಎಸ್‌ಪಿ ಪೋರ್ಟಲ್‌ನಲ್ಲಿ ರದ್ದುಪಡಿಸಿ ಕಲ್ಯಾಣ ಮಂಡಳಿಯ ವೆಬ್‌ಸೈಟ್‌ನಲ್ಲಿ ಅರ್ಜಿಗಳನ್ನು ಹಾಕಲು ಅವಕಾಶ ನೀಡಬೇಕು, ಸಹಾಯಧನದ ಮೊತ್ತ ವನ್ನು ಏರಿಕೆ ಮಾಡಬೇಕು. ಕಟ್ಟಡ ಕಾರ್ಮಿಕರ ಕಲ್ಯಾಣ ಮಂಡಳಿಯಿಂದಲೇ ಕಟ್ಟಡ ಕಾರ್ಮಿಕರಿಗೆ ಇಎಸ್‌ಐ ಸೌಲಭ್ಯ ಜಾರಿಮಾಡಬೇಕು ಎಂದು ಆಗ್ರಹಿಸಿದರು.

ಕಟ್ಟಡ ಕಾರ್ಮಿಕರ ಕುಟುಂಬ ಪಿಂಚಣಿಯನ್ನು ಕಾರ್ಮಿಕರು ನಿವೃತ್ತಿ ಹೊಂದುವ ಮೊದಲೇ ಮೃತರಾದಲ್ಲಿ ಅಂತಹ ಕುಟುಂಬದವರಿಗೂ ಕುಟುಂಬ ಪಿಂಚಣಿಯನ್ನು ಜಾರಿಗೊಳಿಸಲು ಕ್ರಮಕೈಗೊಳ್ಳಬೇಕು. ಕಾರ್ಮಿಕರ ಸೌಲಭ್ಯಗಳ ಅರ್ಜಿಗಳನ್ನು ವಿಳಂಬ ಮಾಡದೇ 3ತಿಂಗಳ ಒಳಗೆ ಸಹಾಯಧನ ಹಣ ಸಂದಾಯವಾಗುವಂತೆ ಎಲ್ಲಾ ಕಾರ್ಮಿಕ ಅಧಿಕಾರಿಗಳಿಗೂ ನಿರ್ದೇಶನ ನೀಡಬೇಕು. ಮನೆ ಇಲ್ಲದ ನೈಜಕಾರ್ಮಿಕರಿಗೆ ಮನೆ ನಿರ್ಮಾಣಕ್ಕಾಗಿ ಮಂಡಳಿಯಿಂದಲೇ 5ಲಕ್ಷ ರೂಪಾಯಿ ಸಹಾಯಧನ ನೀಡಬೇಕು ಎಂದು ಒತ್ತಾಯಿಸಿದರು.

ಕರ್ನಾಟಕ ಕಟ್ಟಡ ಕಾರ್ಮಿಕರ ಕಲ್ಯಾಣ ಮಂಡಳಿಯು ಹಲವಾರು ಸಮಸ್ಯೆಗಳು ಇದ್ದು, ಸಾವಿರಾರು ಕೋಟಿ ಭ್ರಷ್ಟಾಚಾರದಿಂದಾಗಿ ಭ್ರಷ್ಟರ ಪಾಲಾಗುತ್ತಿದೆ. ಇದ-ರಿಂದಾಗಿ ಕೆಲವು ನೈಜ ಕಟ್ಟಡ ಕಾರ್ಮಿಕರು ಸೌಲಭ್ಯಗಳಿಂದ ವಂಚಿತರಾಗಿಯೇ ಉಳಿದಿದ್ದಾರೆ. ಹಲವಾರು ತರದ ಕಿಟ್‌ಗಳನ್ನು ವಿತರಣೆ ಮಾಡುತ್ತಿರುವುದು ಮಂಡಳಿಯ ಹಣವು ಪೋಲಾಗುತ್ತದೆಯೇ ವಿನಹ ಕಾರ್ಮಿಕರ ಕಲ್ಯಾಣಕ್ಕೆ ವಿನಿಯೋಗವಾಗುವುದಿಲ್ಲ ಎಂದು ಹೇಳಿದರು.

ಪ್ರತಿಭಟನೆಯಲ್ಲಿ ಕರ್ನಾಟಕ ಶ್ರಮಿಕ ಶಕ್ತಿಯ ಸತೀಶ್ ಅರವಿಂದ್, ಆದಿಲ್ ಖಾನ್, ಪವಿತ್ರ, ಸೈಯದ್ ಅಶ್ಫಾಕ್, ಚಂದ್ರಶೇಖರ್, ಜಾಫರ್ ಷರೀಫ್, ಶಿಡ್ಲಪ್ಪ, ಆಫ್ರೋಜ್, ಬಾಷಾ, ಸಮೀರ್, ರೋಶನ್, ಫಾರೂಖ್, ಹನುಮಂತ, ನಾಗರಾಜ್, ಮಹಾಂತೇಶ್ ಇತರರಿದ್ದರು.

## ಖಾಲಿ ಇರುವ ಹುದ್ದೆಗಳ ಭರ್ತಿಗೆ ಆಗ್ರಹಿಸಿ ಉದ್ಯೋಗಾಕಾಂಕ್ಷಿಗಳ ಪ್ರತಿಭಟನೆ

**ದಾವಣಗೆರೆ:** ಕೇಂದ್ರ ಹಾಗೂ ರಾಜ್ಯ ಸರ್ಕಾರಗಳ ಎಲ್ಲಾ ಇಲಾಖೆಗಳಲ್ಲಿ ಖಾಲಿ ಇರುವ ಹುದ್ದೆಗಳನ್ನು ಭರ್ತಿಮಾಡಲು ಕೂಡಲೇ ಕ್ರಮ ಕೈಗೊಳ್ಳಬೇಕು. ಎಲ್ಲಾ ನೇಮಕಾತಿಗಳಲ್ಲಿ ಅಕ್ರಮ ತಡೆಗಟ್ಟಿ, ಪಾರದರ್ಶಕತೆಯನ್ನು ಕಾಪಾಡಲು ಸೂಕ್ತ ಕ್ರಮ ಕೈಗೊಳ್ಳುವುದು ಸೇರಿದಂತೆ ಹಲವಾರು ಬೇಡಿಕೆಗಳನ್ನು ಈಡೇರಿಸಲು ಆಗ್ರಹಿಸಿ ಉದ್ಯೋಗಾಕಾಂಕ್ಷಿಗಳ ಹೋರಾಟ ಸಮಿತಿಯ ಪದಾಧಿಕಾರಿಗಳು ನಗರದಲ್ಲಿ ರಾಜ್ಯ ಮಟ್ಟದ ಉದ್ಯೋಗ ಆಕಾಂಕ್ಷಿಗಳ ಆಗ್ರಹ ಸಮಾವೇಶ ಪ್ರತಿಭಟನೆ ನಡೆಸಿದರು.

ನಗರದ ಜಯದೇವ ವೃತ್ತದಲ್ಲಿ ಜಮಾಯಿಸಿದ ಪ್ರತಿಭಟನಾಕಾರರು ಮಾತನಾಡಿ, ರಾಜ್ಯದಲ್ಲಿ ಕಳೆದ ನಾಲ್ಕೈದು ವರ್ಷಗಳಿಂದ ಯಾವುದೇ ನೇಮಕಾತಿಗಳು ನಡೆಯದ ಹಿನ್ನೆಲೆಯಲ್ಲಿ ಎಲ್ಲಾ ಇಲಾಖೆಗಳ ನೇಮಕಾತಿಗಳಿಗೆ ಅರ್ಹ ವಯೋಮಿತಿಯನ್ನು ಕನಿಷ್ಠ ಐದು ವರ್ಷಗಳಿಗೆ ಸಡಿಲಿಕೆ ಮಾಡಬೇಕು. ರಾಜ್ಯದ ಶಿಕ್ಷಣ ಇಲಾಖೆಯಲ್ಲಿ ಖಾಲಿಯಿರುವ 71,000 ಶಿಕ್ಷಕ ಹುದ್ದೆಗಳನ್ನು ಈ ಕೂಡಲೇ ಭರ್ತಿಮಾಡಬೇಕು ಎಂದು ಒತ್ತಾಯಿಸಿದರು.

ಮುಖ್ಯವಾಗಿ ನೇಮಕಾತಿ ಪ್ರಕ್ರಿಯೆಯಲ್ಲಿ ಅಕ್ರಮಗಳನ್ನು ತಡೆಗಟ್ಟಿ, ಪಾರದರ್ಶಕತೆಯನ್ನು ತರುವ ಮೂಲಕ ಅರ್ಹ ಅಭ್ಯರ್ಥಿಗಳಿಗೆ ಅನ್ಯಾಯವಾಗದಂತೆ ನೋಡಿಕೊಳ್ಳಬೇಕಾಗಿದೆ. ನಾಲ್ಕೈದು ವರ್ಷಗಳಿಂದ ನೇಮಕಾತಿಗಳು ನಡೆ-ಯದ ಕಾರಣ ಅರ್ಹತಾ ವಯೋಮಿತಿಯಲ್ಲಿಯೂ ಕನಿಷ್ಠ ಐದು ವರ್ಷಗಳ ಸಡಿಲಿಕೆಯನ್ನು ಮಾಡಬೇಕಾಗಿದೆ ಎಂದು ಆಗ್ರಹಿಸಿದರು. ಈ ಎಲ್ಲಾ ಬೇಡಿಕೆಗಳ ಈಡೇರಿಕೆಯ ಹಿನ್ನೆಲೆಯಲ್ಲಿ ಸರ್ಕಾರಗಳ ಈ ಧೋರಣೆಗಳನ್ನು ಸರಿಯಾದ ನೆಲೆಗಟ್ಟಿನಲ್ಲಿ ಅರ್ಥೈಸಿಕೊಂಡು ಮುಂದೆ ನಿರಂತರವಾಗಿ ಹೋರಾಟಗಳನ್ನು ರೂಪಿಸಲು ಹಾಗೂ ನಮ್ಮ ಹಕ್ಕೊತ್ತಾಯಗಳನ್ನು ಈಡೇರಿಸಲು ಸರ್ಕಾರಗಳನ್ನು ಆಗ್ರಹಿಸಲು ದಾವಣಗೆರೆಯಲ್ಲಿ ಉದ್ಯೋಗಾಕಾಂಕ್ಷಿಗಳ ಪ್ರತಿಭಟನಾ ದಿನವನ್ನು ಹಮ್ಮಿಕೊಳ್ಳಲಾಗಿದೆ ಎಂದು ಮಾಹಿತಿ ನೀಡಿದರು. ರಾಜ್ಯಮಟ್ಟದ ಉದ್ಯೋಗಾಕಾಂಕ್ಷಿಗಳ ಆಗ್ರಹ ಸಮಾವೇಶವನ್ನು ಅಕ್ಟೋಬರ್ 17ರಂದು ಧಾರವಾಡದಲ್ಲಿ ಸಂಘಟಿಸಲಾಗುತ್ತಿದೆ. ಇದು ಎಲ್ಲಾ ಉದೋಗಾಕಾಂಕ್ಷಿಗಳ ಹೋರಾಟವಾಗಿದ್ದು, ಎಲ್ಲರೂ ತಮ್ಮ ಹಕ್ಕೊತ್ತಾಯಗಳ ಈಡೇರಿಕೆಗಾಗಿ ಹೆಚ್ಚಿನ ಸಂಖ್ಯೆಯಲ್ಲಿ ಈ ಎರಡೂ ಹೋರಾಟಗಳಲ್ಲಿ ಭಾಗವಹಿಸಿ ಯಶಸ್ವಿಗೊಳಿಸಬೇಕೆಂದು ಮನವಿ ಮಾಡಿದರು.

ಪ್ರತಿಭಟನೆಯಲ್ಲಿ ಪರಶುರಾಮ, ಅನಿಲ ಕುಮಾರ್, ಶ್ರೀನಿವಾಸ್, ರಾಘವೇಂದ್ರ, ಸುಹೇಲ್, ರಾಕೇಶ್, ಮಲ್ಯ ನಾಯ್ಕ, ನಾಗರಾಜ್, ಪುನೀತ್, ಇತರರು ಇದ್ದರು.

## ಅ.14ಕ್ಕೆ ಶ್ರೀ ಕೊಪ್ಪದಂಬ ದೇವಿಯ 30ನೇ ವರ್ಷದ ಕೆಂಡದಾರ್ಚನೆ

**ದಾವಣಗೆರೆ:** ಹರಿಹರ ರಸ್ತೆಯಲ್ಲಿರುವ ಶ್ರೀಕ್ಷೇತ್ರ ನವಸ್ಥಾನದ ಶ್ರೀ ಶನೇಶ್ವರ ಸ್ವಾಮಿಯ ದೇವಸ್ಥಾನದಲ್ಲಿರುವ ಶ್ರೀ ಕೊಪ್ಪದಂಬ ದೇವಿಯ 30ನೇ ವರ್ಷದ ಕೆಂಡದಾರ್ಚನೆಯು ಅ.14ರಂದು ನಡೆಯಲಿದೆ.

ಅಂದು ಬೆಳಗ್ಗೆ 9 ಗಂಟೆಗೆ ಕುಂಭೋತ್ಸವ ಹಾಗೂ ರಾಜಬೀದಿಗಳಲ್ಲಿ ಪಲ್ಲಕ್ಕಿಯ ಉತ್ಸವದ ನಂತರ ಬೆಳಗ್ಗೆ 10ಕ್ಕೆ ಕೆಂಡದಾರ್ಚನೆ ನಡೆಯಲಿದೆ.

Published and Owned by : **PRATHIBHA M.S.**, Published at : No. 900/A2, Opp-Banashankri Temple Arch, Main Road, Shakti Nagara, Davanagere, Karnataka-577004. Printed by : **MALLIKARJUNAPPA H.G.** Printed at : SHIVA MEDIA HOUSE, No.900/A2, Opp-Banashankari Temple Arch, Main Road, Davanagere, Karnataka-577004. Editor: **MALLIKARJUNAPPA H.G.**